ಸಂಪುಟ: 04 ಸಂಚಿಕೆ: 94 ಪುಟಗಳು: 08 ಸೋಮವಾರ 17 ಜೂನ್ 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**


ಮನುಷ್ಯನಲ್ಲಿ ದಡ್ಡತನ ಇದ್ದರೂ ಪರವಾಗಿಲ್ಲ, ಆದರೆ ಸಣ್ಣತನ ಇರಬಾರದು.. ಯಾಕೆಂದರೆ ಮನುಷ್ಯ ಗೌರವ ಕಳೆದುಕೊಳ್ಳುವುದು ಸಣ್ಣತನದಿಂದ...!!

## ದೆಹಲಿಗೆ ಹೋದ್ರೂ, ಕರ್ನಾಟಕದ ರಾಜಕಾರಣದಲ್ಲಿ ನಾನು ಸಕ್ರಿಯನಾಗಿರುತ್ತೇನೆ

• ಉದಯವಾಹಿನಿ, ಬೆಂಗಳೂರು

ಸಂಸತ್ತಿನಲ್ಲಿ ಕರ್ನಾಟಕದ ನೀರಾವರಿ ಯೋಜನೆಗಳಾದ ಕೃಷ್ಣಾ, ಕಾವೇರಿ ಅಂತರಾಜ್ಯ ಜಲ ವಿವಾದಗಳಿಗೆ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡುತ್ತೇನೆ. ಸಂಸತ್ತಿನಲ್ಲಿ ಪ್ರಮಾಣಿಕವಾಗಿ ಕನ್ನಡಿಗರ ಪರವಾಗಿ ಧ್ವನಿ ಎತ್ತುವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಸಂಸದನಾಗಿ ಆಯ್ಕೆಯಾಗಿ ದೆಹಲಿಗೆ ಹೋದರೂ, ಕರ್ನಾಟಕದ ರಾಜಕಾರಣದಲ್ಲಿ ನಾನು ಸಕ್ರಿಯನಾಗಿರುತ್ತೇನೆ. ನಮ್ಮ ವರಿಷ್ಠರು ಅದೇ ಕಾರಣಕ್ಕೆ ಕೆಲವು ನಿರ್ಣಯ ತೆಗೆದುಕೊಂಡಿದ್ದಾರೆ ಎಂದು ಹೇಳಿದರು.



ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದ ಅನುದಾನ ಪಡೆಯುವ ಬಗ್ಗೆ ರಾಜ್ಯ ಸರ್ಕಾರ ನಿಯಮಾನುಸಾರ ಮನವಿ ಸಲ್ಲಿಸಬೇಕು. ಹಿಂದೆ ನಾವು ಎಐಬಿಪಿಯಲ್ಲಿ ಸುಮಾರು ಆರು ತಿಂಗಳು ದೆಹಲಿಯಲ್ಲಿ ನಮ್ಮ ಅಧಿಕಾರಿಗಳನ್ನು ಇಟ್ಟು ಸುಮಾರು 3800 ಕೋಟಿ ರೂ. ತಂದಿದ್ದೆ. ಕೇಂದ್ರದ ಬಜೆಟ್‌ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ಮೀಸಲಿಟ್ಟಿರುವ 5000 ಕೋಟಿ ರೂ ತರಲು ರಾಜ್ಯದ ಸಚಿವರು ಹಾಗೂ ಕೇಂದ್ರ ಸರ್ಕಾರದ ಸಚಿವರ ಜೊತೆ ಮಾತನಾಡಿ ಹಣ ತರಲು ಪ್ರಯತ್ನಿಸುತ್ತೇನೆ.

ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು ನಾವು ಎಲ್ಲಾ ರೀತಿಯ ಸಿದ್ದತೆ ಮಾಡಿಕೊಂಡಿದ್ದೇವು. ಇದುವರೆಗೂ ಕೇಂದ್ರ ಸರ್ಕಾರ ಯಾವುದೇ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಣೆ ಮಾಡಿಲ್ಲ. ಆದರೆ, ನಮ್ಮ ಒತ್ತಾಸೆಯ ಕಾರಣಕ್ಕೆ ಈ ಯೋಜನೆಗೆ ವಿಶೇಷವಾಗಿ 5000 ಕೋಟಿ ರೂ. ನೀಡುವ ಭರವಸೆ ನೀಡಿದ್ದರು ಎಂದು ತಿಳಿಸಿದರು.

## ಬೊಕ್ಕಸ ತುಂಬಿದೆ ಎಂದಿದ್ದ ಸರ್ಕಾರ ಬೆಲೆ ಏರಿಸಿದ್ದೇಕೆ ?

• ಉದಯವಾಹಿನಿ, ಚಿಕ್ಕಮಗಳೂರು

ರಾಜ್ಯದ ಸರ್ಕಾರದ ಬೊಕ್ಕಸ ತುಂಬಿ ತುಳುಕುತ್ತಿದೆ ಎಂದು ಕೆಲ ದಿನಗಳ ಹಿಂದೆ ಹೇಳಿದ್ದ ಶ್ರೀ ಸಿದ್ದರಾಮಯ್ಯನವರೇ ಯಾವ ಪುರುಷಾರ್ಥಕ್ಕೆ ಬೆಲೆ ಹೆಚ್ಚಿಸಿದ್ದೀರಿ ಎಂದು ಬಿಜೆಪಿ ಮುಖಂಡ ಸಿ.ಟಿ. ರವಿ ಕಿಡಿಕಾರಿದ್ದಾರೆ. ಪೆಟ್ರೋಲ್, ಡಿಸೇಲ್ ಬೆಲೆ ಏರಿಕೆ ವಿರುದ್ಧ ಚಿಕ್ಕಮಗಳೂರಿನಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಅವರು ಕಿವಿ ಮೇಲೆ ಹೂವು, ಕೈಯಲ್ಲಿ ಚಿಪ್ಪು ಹಿಡಿದು ಆಕ್ರೋಶ ವ್ಯಕ್ತ ಪಡಿಸಿದರು.

ಬಿಜೆಪಿ ಯುವ ಮೋರ್ಚಾ ನಡೆಸಿದ ಪ್ರತಿಭಟನೆಯಲ್ಲಿ ಪಾಲ್ಗೊಂಡ ಅವರು, ರಾಜ್ಯ ಸರ್ಕಾರಕ್ಕೆ ನಿಜವಾಗಿಯೂ ಬಡವರ ಮೇಲೆ ಕಾಳಜಿ ಇದ್ದರೆ ಕೂಡಲೇ ಬೆಲೆ ಏರಿಕೆ ಆದೇಶವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ರಾಜ್ಯದ ಜನತೆ ಕಿವಿಯ ಮೇಲೆ ಹೂವಿಟ್ಟು ಗ್ಯಾರಂಟಿ ಚಿಪ್ಪು ಕೊಟ್ಟ ರಾಜ್ಯ ಸರ್ಕಾರ ಎಂದು ಟೀಕಿಸಿದ ಅವರು ಇದು ಕರ್ನಾಟಕದ ಅಸಲಿ ಮಾಡೆಲ್ ಅಲ್ವಾ ಎಂದು ಪ್ರಶ್ನಿಸಿದರು.

## ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಬಗ್ಗೆ ಸಿಎಂ ಸಮರ್ಥನೆ

• ಉದಯವಾಹಿನಿ, ಬೆಂಗಳೂರು

ಚುನಾವಣೆಗೂ ತೈಲ ದರ ಏರಿಕೆಗೂ ಯಾವುದೇ ಸಂಬಂಧವಿಲ್ಲ. ತೈಲ ದರ ನಾವು ಮೂರು ರೂಪಾಯಿ ಹೆಚ್ಚಳ ಮಾಡಿದ್ದೇವೆ. ಮೂರು ರೂ. ಹೆಚ್ಚಳ ಮಾಡಿದ್ದಕ್ಕೆ ಚುನಾವಣೆ ಸಂಬಂಧನಾ ಎಂದು ಸಿಎಂ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.ಇದೇ ಕುಮಾರಸ್ವಾಮಿ ಇದ್ದಾಗ ಶೇ.35ರಷ್ಟಿತ್ತು. ರಾಜ್ಯದಲ್ಲಿ 102.86 ಪೈಸೆ ಈಗಾ ಇದೆ. ತಮಿಳುನಾಡು ಸಮ ಆಗಿದೆ. ಕಾಸರಗೋಡು 106.06 ಪೈಸೆ, ಆಂಧ್ರಪ್ರದೇಶದಲ್ಲಿ 109 ರೂ. ಇದೆ. ಹೈದರಾಬಾದ್‌ನಲ್ಲೂ ಹೆಚ್ಚಿದೆ. ಮಹಾರಾಷ್ಟ್ರ 104 ರೂ, ರಾಜಸ್ಥಾನ 104.86 ರೂ. ಮಧ್ಯಪ್ರದೇಶದ 106.47 ರೂ. ಇದೆ.

ರಾಜಸ್ಥಾನದಲ್ಲಿ ದರ 104.86 ರೂಪಾಯಿ ಇದೆ. ಮಧ್ಯ ಪ್ರದೇಶದಲ್ಲಿ 106 ರೂಪಾಯಿ ಇದೆ. ರಾಜಸ್ಥಾನ, ಮಧ್ಯ ಪ್ರದೇಶದಲ್ಲಿ ಯಾರ ಸರ್ಕಾರ ಇದೆ ಎಂದು ಕಿಡಿಕಾರಿದ್ದಾರೆ.

## 3 ಗ್ರಾಮ ಪಂಚಾಯಿತಿಗಳಿಗೆ ಒಂದರಂತೆ 2 ಸಾವಿರ ಶಾಲೆ

• ಉದಯವಾಹಿನಿ, ಬೆಂಗಳೂರು

ಸಿಎಸ್‌ಆರ್ ನಿಧಿಯಡಿ ರಾಜ್ಯದಲ್ಲಿ ಮೂರು ಗ್ರಾಮ ಪಂಚಾಯಿತಿಗಳಿಗೆ ಒಂದರಂತೆ 2 ಸಾವಿರ ಶಾಲೆಗಳನ್ನು ತೆರೆಯಲು ನನ್ನ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ಸಿಎಂ ರಚಿಸಿದ್ದಾರೆ,



ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು. ನೌಕರರ ಮಕ್ಕಳಿಗೆ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

ನಗರದ ಪ್ರದೇಶದಲ್ಲಿನ ಸರಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳಿಗೆ ದತ್ತು ನೀಡುವ ಮೂಲಕ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಯೋಜನೆ ರೂಪಿಸಲು ಚಿಂತಿಸಲಾಗಿದೆ, ಎಂದು ತಿಳಿಸಿದರು.

## 25,000ಕ್ಕೂ ಹೆಚ್ಚು ಮಹತ್ವದ ಸ್ಮಾರಕಗಳು ಕರ್ನಾಟಕದಲ್ಲಿವೆ


• ಉದಯವಾಹಿನಿ, ಬೆಂಗಳೂರು

ದಕ್ಷಿಣ ಭಾರತ ಉತ್ಸವದ ಸಂದರ್ಭದಲ್ಲಿ ಕರ್ನಾಟಕ್ಕೆ ರೂ.3750 ಕೋಟಿ ಬಂಡವಾಳ ಹರಿದು ಬಂದಿದೆ ಎಂದು ಪ್ರವಾಸೋದ್ಯಮ ಮತ್ತು ಕಾನೂನು ಸಚಿವ ಎಚ್.ಕೆ.ಪಾಟೀಲ ಇಂದಿಲ್ಲಿ ತಿಳಿಸಿದರು. ಮಾತನಾಡಿ ಕರ್ನಾಟಕದ 320 ಕಿಲೋಮೀಟರ್ ಉದ್ದದ ಕರಾವಳಿ ಕಡಲ ತೀರದಲ್ಲಿರುವ 40 ತಾಣಗಳನ್ನು ಗುರುತಿಸಲಾಗಿದೆ.

ಈ ತಾಣಗಳನ್ನು ಅಭಿವೃದ್ಧಿಪಡಿಸಲು ಈಗಾಗಲೇ ಆಸಕ್ತಿ ವ್ಯಕ್ತಪಡಿಸುವುದಕ್ಕೆ ಕರೆಯಲಾಗಿದೆ. ಆಸಕ್ತಿ ವ್ಯಕ್ತಪಡಿಸಬೇಕೆಂದು ಕೈಗಾರಿಕಾ ಪತಿಗಳನ್ನು ಸಚಿವ ಎಚ್ ಕೆ ಪಾಟೀಲ್ ಕೋರಿದರು.

ಕರ್ನಾಟಕ ಪುರಾತತ್ವ ಕ್ಷೇತ್ರದಲ್ಲಿ ವಿಶೇಷ ಸ್ಥಾನದಲ್ಲಿದೆ. 25,000ಕ್ಕೂ ಹೆಚ್ಚು ಮಹತ್ವದ ಸ್ಮಾರಕಗಳು ಕರ್ನಾಟಕದಲ್ಲಿವೆ. ಆದರೆ ಈ ಎಲ್ಲಾ ಸ್ಥಾನಗಳ ಪೈಕಿ ಕೇವಲ 500 ತಾಣಗಳನ್ನು ಮಾತ್ರ ನಾವು ಸಂರಕ್ಷಿಸುತ್ತಿದ್ದೇವೆ. ಉಳಿದ ತಾಣಗಳ ಸಂರಕ್ಷಣೆಗೆ ಕಾಲಬದ್ದ ಕಾರ್ಯಕ್ರಮ ಹಾಕಿಕೊಳ್ಳಲಾಗಿದ್ದು ದತ್ತು ಸ್ಮಾರಕ ದತ್ತು ಯೋಜನೆ ಅಂತಹ ವಿಶೇಷ ಕಾರ್ಯಕ್ರಮಕ್ಕೆ ದಾನಿಗಳು ಸಹಕರಿಸಬೇಕೆಂದು ಎಚ.ಕೆ ಪಾಟೀಲ್ ಸಹಕರಿಸಲು ಮನವಿ ಮಾಡಿದರು. ಕರ್ನಾಟಕ ಹಲವಾರು ಶ್ರದ್ಧಾ ಕೇಂದ್ರಗಳನ್ನು ಹೊಂದಿ ಅತಿ ಪವಿತ್ರವಾದ ರಾಜ್ಯಗಳಲ್ಲಿ ಕರ್ನಾಟಕ ಹಿರಿಯ ಸ್ಥಾನದಲ್ಲಿದೆ ಮಂಗಳೂರು ಉಡುಪಿ ಕಾರವಾರದಿಂದ ಹಿಡಿದು ಸವದತ್ತಿ ರೇಣುಕಾ ಯಲ್ಲಮ್ಮ, ಚಾಮುಂಡೇಶ್ವರಿ ಇಂತಹ ಪವಿತ್ರ ಸ್ಥಳಗಳಲ್ಲಿ ಕರ್ನಾಟಕ ಮೂಲಭೂತ ಸೌಲಭ್ಯ ಸೃಷ್ಟಿಸುವ ಪಿಪಿಪಿ ಮಾಡೆಲ್ ನಲ್ಲಿ ಕೈಗೆತ್ತಿಕೊಳ್ಳಲು ಸರ್ಕಾರ ನಿರ್ಣಯಿಸಿದೆ ಎಂದರು.





# ಜಮ್ಮುವಿನಲ್ಲಿ ಉಗ್ರರ ಖೇಲ್ ಖತಂ

**ವಿಶಾಲವಾದ ಮಾರ್ಗ ಸೂಚಿ**

• ಪದೇ ಪದೇ ಭಯೋತ್ಪಾದಕ ದಾಳಿ; ಜಮ್ಮು-ಕಾಶ್ಮೀರದಲ್ಲಿ ಭಯೋತ್ಪಾದನೆಯನ್ನು ಶೂನ್ಯಕ್ಕಿಳಿಸಲು ಮಾಸ್ಟರ್ ಪ್ಲಾನ್

• ಮುಖ್ಯಸ್ಥರು, ದೋವಲ್ ಜೊತೆ ಅಮಿತ್ ಶಾ ಮಹತ್ವದ ಸಭೆಯಲ್ಲಿ ನಿರ್ಧಾರ

• ಉದಯವಾಹಿನಿ, ದೆಹಲಿ

ಜಮ್ಮು ಕಾಶ್ಮೀರದಲ್ಲಿ ಕಳೆದ ಕೆಲವು ಸಮಯದಿಂದ ನಡೆಯುತ್ತಿರುವ ಉಗ್ರ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸಭೆ ನಡೆಸಿದ್ದಾರೆ. ಶಾ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಜಮ್ಮು ಕಾಶ್ಮೀರದ ಭದ್ರತಾ ಕಾರ್ಯಗಳ ಬಗ್ಗೆ ಚರ್ಚಿಸಲಾಗಿದೆ. ಸಭೆಯಲ್ಲಿ, ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆ ತೀವ್ರಗೊಳಿಸಲು ಶಾ ವಿಶಾಲವಾದ ಮಾರ್ಗಸೂಚಿಗಳನ್ನು ನೀಡಿದರು ಎಂದು ಮೂಲಗಳು ಸುದ್ದಿ ಸಂಸ್ಥೆ ಪಿಟಿಐಗೆ ತಿಳಿಸಿವೆ. ಮುಂದಿನ ದಿನಗಳಲ್ಲಿ ಭದ್ರತಾ ಪಡೆಗಳು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆ ತೀವ್ರಗೊಳಿಸುವ ನಿರೀಕ್ಷೆಯಿರುವ ಜಮ್ಮು ಮತ್ತು ಕಾಶ್ಮೀರದಲ್ಲಿ ಚಾಲ್ತಿಯಲ್ಲಿರುವ ಪರಿಸ್ಥಿತಿಯ ಕುರಿತು ಗೃಹ ಸಚಿವರಿಗೆ ಸಂಪೂರ್ಣ ಮಾಹಿತಿ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ.

**1** ಜಮ್ಮು ಮತ್ತು ಕಾಶ್ಮೀರದಲ್ಲಿ ಇರುವ ಪರಿಸ್ಥಿತಿಯ ಕುರಿತು ಗೃಹ ಸಚಿವರಿಗೆ ಸಂಪೂರ್ಣ ಮಾಹಿತಿ

**2** ಮೋದಿ ಸಭೆ ನಡೆಸಿದ ಮೂರು ದಿನಗಳ ನಂತರ ಶಾ ನಾರ್ತ್ ಬ್ಲಾಕ್‌ನಲ್ಲಿ ಉನ್ನತ ಮಟ್ಟದ ಸಭೆ

**3** ಭಯೋತ್ಪಾದನಾ ನಿಗ್ರಹ ಸಾಮರ್ಥ್ಯಗಳನ್ನು ನಿಯೋಜಿಸಲು ಅಧಿಕಾರಿಗಳಿಗೆ ಮೋದಿ ಸೂಚಿಸಿದ್ದರು.

ಪ್ರಧಾನಿ ಮೋದಿಯವರ ನಿರ್ದೇಶನದಂತೆ ಉಗ್ರರ ವಿರುದ್ಧ ಕಾರ್ಯಾಚರಣೆ ನಡೆಸಲಾಗುವುದು ಎಂದು ಅವರು ಹೇಳಿದರು.

ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಸೇನಾ ಮುಖ್ಯಸ್ಥ ಜನರಲ್ ಮನೋಜ್ ಪಾಂಡೆ, ನಿಯೋಜಿತ ಸೇನಾ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಉಪೇಂದ್ರ ದ್ವಿವೇದಿ, ಕೇಂದ್ರ ಗೃಹ ಕಾರ್ಯದರ್ಶಿ ಅಜಯ್ ಭಲ್ಲಾ, ಇಂಟೆಲಿಜೆನ್ಸ್ ಬ್ಯೂರೋದ ನಿರ್ದೇಶಕ ತಪನ್ ದೇಕಾ, ಸಿಆರ್‌ಪಿಎಫ್ ಮಹಾನಿರ್ದೇಶಕ ಅನೀಶ್ ದಯಾಳ್ ಸಿಂಗ್, ಜಮ್ಮು ಮತ್ತು ಕಾಶ್ಮೀರ ಪೊಲೀಸ್ ಮಹಾನಿರ್ದೇಶಕ ಆರ್ ಆರ್ ಸ್ವೈನ್ ಮತ್ತು ಇತರ ಉನ್ನತ ಭದ್ರತಾ ಅಧಿಕಾರಿಗಳು ಉನ್ನತ ಮಟ್ಟದ ಸಭೆಯಲ್ಲಿ ಉಪಸ್ಥಿತರಿದ್ದರು. ಜೂನ್ 29ರಿಂದ ಆರಂಭವಾಗಲಿರುವ ಅಮರನಾಥ ಯಾತ್ರೆಯ ಭದ್ರತಾ ಸಿದ್ದತೆಗಳ ಬಗ್ಗೆಯು ಅಮಿತ್ ಶಾ ಚರ್ಚೆ ನಡೆಸಿದರು.

ಜಮ್ಮುವಿನಲ್ಲಿ ಭಯೋತ್ಪಾದನೆ ಬೆಂಬಲಿಗರ ವಿರುದ್ಧ ಕಠಿಣ ಕ್ರಮಕ್ಕೆ ಅಮಿತ್ ಶಾ ನಿರ್ದೇಶನ ನೀಡಿದರು. ಮುಂಬರುವ ಅಮರನಾಥ ಯಾತ್ರೆಗೆ ಸಮಗ್ರ ಭದ್ರತಾ ವ್ಯವಸ್ಥೆಗಳನ್ನು ಮಾಡಿಕೊಳ್ಳುವಂತೆ ಸೂಚನೆಗಳನ್ನು ಕೊಟ್ಟರು.ಜಮ್ಮುವಿನಲ್ಲಿ ಪ್ರದೇಶ ಪ್ರಾಬಲ್ಯ ಯೋಜನೆ ಮತ್ತು ಶೂನ್ಯ ಭಯೋತ್ಪಾದನಾ ಯೋಜನೆ ಮೂಲಕ ಕಾಶ್ಮೀರ ಕಣಿವೆಯಲ್ಲಿ ಸಾಧಿಸಿದ ಯಶಸ್ಸನ್ನು ಪುನರಾವರ್ತಿಸುವಂತೆ ಅವರು ಭದ್ರತಾ ಏಜೆನ್ಸಿಗಳಿಗೆ ನಿರ್ದೇಶನ ನೀಡಿದರು.

ಉನ್ನತ ಮಟ್ಟದ ಸಭೆಯಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಸೇನಾ ಮುಖ್ಯಸ್ಥ ಜನರಲ್ ಮನೋಜ್ ಪಾಂಡೆ, ಸೇನಾ ಮುಖ್ಯಸ್ಥರಾಗಿ ನಿಯೋಜಿತ ಲೆಫ್ಟಿನೆಂಟ್ ಜನರಲ್ ಉಪೇಂದ್ರ ದ್ವಿವೇದಿ, ಕೇಂದ್ರ ಗೃಹ ಕಾರ್ಯದರ್ಶಿ ಅಜಯ್ ಭಲ್ಲಾ, ಇಂಟೆಲಿಜೆನ್ಸ್ ಬ್ಯೂರೋದ ನಿರ್ದೇಶಕ ತಪನ್ ದೇಕಾ, ಸಿಆರ್‌ಪಿಎಫ್ ಮಹಾನಿರ್ದೇಶಕ ಅನೀಶ್ ದಯಾಳ್ ಸಿಂಗ್, ಜಮ್ಮು ಮತ್ತು ಕಾಶ್ಮೀರ ಪೊಲೀಸ್ ಮಹಾನಿರ್ದೇಶಕ ಆರ್ ಆರ್ ಸ್ವೈನ್ ಮತ್ತು ಇತರ ಉನ್ನತ ಭದ್ರತಾ ಅಧಿಕಾರಿಗಳು ಉಪಸ್ಥಿತರಿದ್ದರು.





### ತೀರ್ಥಯಾತ್ರೆಗಳಿಗೆ ಭದ್ರತೆಯೇ ಆದ್ಯತೆ

ಗೃಹ ಸಚಿವರು ತೀರ್ಥಯಾತ್ರೆಗೆ ದೃಢವಾದ ಭದ್ರತೆಯ ಅಗತ್ಯವನ್ನು ಒತ್ತಿ ಹೇಳಿದರು. ಎಲ್ಲಾ ಮಾರ್ಗಗಳು ಮತ್ತು ಪ್ರಮುಖ ಸ್ಥಳಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅಧಿಕಾರಿಗಳನ್ನು ಒತ್ತಾಯಿಸಿದರು. ಜಮ್ಮು ಪ್ರದೇಶದಲ್ಲಿ ಭಯೋತ್ಪಾದನೆಗೆ ಬಲವಾದ ಪ್ರತಿಕ್ರಿಯೆ ನೀಡಲು ಉನ್ನತ ಭದ್ರತಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವೈಷ್ಣೋದೇವಿ ಮತ್ತು ಶಿವಖೋರಿ ಸೇರಿದಂತೆ ಎಲ್ಲಾ ಯಾತ್ರಾ ಸ್ಥಳಗಳನ್ನು ಸಂರಕ್ಷಿಸಲು ಗೃಹ ಸಚಿವರು ಕರೆ ನೀಡಿದರು. ಜೂನ್ 29ರಂದು ಪ್ರಾರಂಭವಾಗಿ ಆ.19ರಂದು ಮುಕ್ತಾಯಗೊಳ್ಳಲಿರುವ ಅಮರನಾಥ ಯಾತ್ರೆಗೆ ಬಹು ಹಂತದ ಭದ್ರತೆಯ ಅಗತ್ಯವನ್ನು ಸಭೆ ಎತ್ತಿ ಹೇಳಿದರು.

### ಭಯೋತ್ಪಾದನೆ ನಿರ್ಮೂಲನೆಗೆ ಯೋಜನೆ

**ಯಾತ್ರೆಯ ಭದ್ರತಾ ಸಿದ್ದತೆ**

ಐಬಿ ಮತ್ತು ರಾ ಮುಖ್ಯಸ್ಥರು ಪ್ರಸ್ತುತ ಗುಪ್ತಚರ ವರದಿಯ ಬಗ್ಗೆ ಕೇಂದ್ರ ಗೃಹ ಸಚಿವರಿಗೆ ಮಾಹಿತಿ ನೀಡಲಿದ್ದಾರೆ. ಇಷ್ಟೇ ಅಲ್ಲ, ಕಳೆದ ಕೆಲವು ದಿನಗಳಿಂದ ಜಮ್ಮು ಪ್ರದೇಶದಲ್ಲಿ ಯಾವ ರೀತಿ ಭಯೋತ್ಪಾದಕ ಘಟನೆಗಳು ಹೆಚ್ಚಾಗಿವೆ ಎಂಬ ಬಗ್ಗೆಯೂ ಈ ಸಭೆಯಲ್ಲಿ ಚರ್ಚೆ ನಡೆಯಲಿದೆ. ಮೂಲಗಳ ಪ್ರಕಾರ, ಜಮ್ಮು ಪ್ರದೇಶದಿಂದ ಭಯೋತ್ಪಾದನೆಯನ್ನು ಸಂಪೂರ್ಣವಾಗಿ ತೊಡೆದುಹಾಕಲು ಸಮಗ್ರ ಯೋಜನೆಯನ್ನು ಮಾಡಬಹುದು. ಬಿಗಿ ಭದ್ರತೆಯಲ್ಲಿ ಅಮರನಾಥ ಯಾತ್ರೆ ನಡೆಯಲಿದ್ದು, ಈ ಸಭೆಯಲ್ಲಿ ಅಗತ್ಯ ಪಡೆ ಹಾಗೂ ಸಲಕರಣೆಗಳ ಪರಿಶೀಲನೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ. ಅಲ್ಲದೆ, ಅಮರನಾಥ ಯಾತ್ರೆಯ ಮಾರ್ಗದಲ್ಲಿ ಯಾವುದೇ ಸಮಸ್ಯೆಯಾಗದಂತೆ ಭದ್ರತಾ ಏಜೆನ್ಸಿಗಳಿಂದ ಎಐ ಆಧಾರಿತ ಮೇಲ್ವಿಚಾರಣೆಯನ್ನು ಮಾಡಲಾಗುತ್ತದೆ.

### ಗುಪ್ತಚರ ಬಳಕೆಗೆ ನಿರ್ದೇಶನ

ಹೆದ್ದಾರಿಗಳ ಉದ್ದಕ್ಕೂ ಹೆಚ್ಚುವರಿ ಭದ್ರತಾ ಪಡೆಗಳನ್ನು ನಿಯೋಜಿಸಬೇಕು. ಜಮ್ಮು ಮತ್ತು ಕಾಶ್ಮೀರದಲ್ಲಿ ಸಕ್ರಿಯ ಭಯೋತ್ಪಾದಕರು ಮತ್ತು ಅವರ ಬೆಂಬಲಿಗರನ್ನು ಪತ್ತೆಹಚ್ಚಲು ಗುಪ್ತಚರವನ್ನು ಬಳಸಿಕೊಳ್ಳಬೇಕು ಎಂದು ಶಾ ನಿರ್ದೇಶನ ನೀಡಿದರು. ವಿದೇಶಿ ಭಯೋತ್ಪಾದಕರು ಬಳಸುತ್ತಿದ್ದ ಕಣಿವೆಯಲ್ಲಿನ ಎಲ್ಲಾ ಒಳನುಸುಳುವಿಕೆ ಕೇಂದ್ರಗಳನ್ನು ಮುಚ್ಚುವಂತೆಯೂ ಹೇಳಿದರು.

## ಯಾರದ್ದೋ ಯಾರಿಗೋ ದಾನ ಮಾಡಿದ ಹಾಗಾಯ್ತು..! : ಹೆಚ್‌ಡಿಕೆ ಕಿಡಿ

• ಉದಯವಾಹಿನಿ, ಮಂಡ್ಯ

ಬೆಲೆ ಏರಿಕೆ ಮಾಡಿದ ರಾಜ್ಯ ಕಾಂಗ್ರೆಸ್ ಸರ್ಕಾರದ ದುರಾಡಳಿತದ ವಿರುದ್ಧ ಜನರೇ ದಂಗೆ ಏಳಬೇಕು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆದಿಚುಂಚನಗಿರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಲೆ ಏರಿಕೆ ವಿರುದ್ಧ ಬಿಜೆಪಿ ಜೆಡಿಎಸ್ ಪಕ್ಷಗಳು ಪ್ರತಿಭಟನೆ ಮಾಡುವುದಕ್ಕಿಂತ ಸರ್ಕಾರದ ದುರಾಡಳಿತದ ವಿರುದ್ಧ ಜನ ದಂಗೆ ಎದ್ದರೆ ಸರ್ಕಾರಕ್ಕೆ ಬುದ್ಧಿ ಬರಬಹುದು. ಗ್ಯಾರಂಟಿ ಮುಂದುವರಿಸಲು ಬೆಲೆ ಏರಿಕೆ ಮಾಡಿದ್ದಾಗಿ ಕಾಂಗ್ರೆಸ್ ಸಚಿವರೇ ಒಪ್ಪಿಕೊಂಡಿದ್ದಾರೆ ಎಂದು ಹೇಳಿದರು.


ಯಾರದ್ದೋ ಯಾರಿಗೋ ದಾನ ಮಾಡ್ತಾರೆ ಎಂಬ ಗಾದೆ ಇದೆಯ ಹಾಗೇ ಆಯ್ತು ಈ ಸರ್ಕಾರದ ಕತೆ ಎಂದು ವ್ಯಂಗ್ಯವಾಡಿದ ಕುಮಾರಸ್ವಾಮಿ, ಜನರಿಂದಲೇ ದುಡ್ಡು ವಸೂಲಿ ಮಾಡಿ, ಜನರಿಗೆ ನೀಡಲು ಸರ್ಕಾರ ಮುಂದಾಗಿದೆ ಎಂದು ಟೀಕಿಸಿದರು. ಆದಿಚುಂಚನಗಿರಿಯಲ್ಲಿ ಕಾಲಭೈರವ ದೇವರ ದರ್ಶನ ಮಾಡಿದ ಕುಮಾರಸ್ವಾಮಿ ನಾನು ಕಾಲಭೈರವನ ದರ್ಶನ ಮುಗಿಸಿ ಶ್ರೀಗಳ ಆಶೀರ್ವಾದ ಪಡೆದಿದ್ದೇನೆ. ರಾಜ್ಯದ ಸಮಸ್ಯೆಗಳಿಗೆ ಪರಿಹಾರ ಸಿಗುವಂತೆ ದೇವರಲ್ಲಿ ಕೋರಿಕೊಂಡಿದ್ದೇನೆ ಎಂದರು.

## ದಿವಾಳಿಯಾದ ಸರ್ಕಾರ ಜನರಿಗೆ ಬೆಲೆ ಏರಿಕೆಯ ಬರೆ

• ಉದಯವಾಹಿನಿ, ಹುಬ್ಬಳ್ಳಿ

ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ದಿವಾಳಿ ಎದ್ದಿದೆ. ಹೀಗಾಗಿ ಜನರ ಮೇಲೆ ಪೆಟ್ರೋಲ್, ಡಿಸೇಲ್ ಬೆಲೆ ಏರಿಕೆಯ ಬರೆ ಹಾಕಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಕುಟುಕಿದರು.

ರವಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಚುನಾವಣೆ ಮುನ್ನ ಬೆಲೆ ಏರಿಕೆ ಇಟ್ಟುಕೊಂಡು ರಾಜಕಾರಣ ಮಾಡಿದರು.ಇವತ್ತು ಪೆಟ್ರೋಲ್, ಡಿಸೇಲ್ ದರ 3 ರೂ. ಹೆಚ್ಚಾಗಿದ್ದು ನೋಡಿದರೆ ಕರ್ನಾಟಕದಲ್ಲಿ ಅತೀ ಹೆಚ್ಚು ಬೆಲೆ ಆಗುತ್ತದೆ.



ಸಾರಿಗೆ ಮೇಲೂ ಇದರ ಪರಿಣಾಮವಾಗುತ್ತದೆ ಎಂದು ಹರಿಹಾಯ್ದರು. ಟಕಾ ಟಕಾ ಅಂತಾ ಪ್ರಣಾಳಿಕೆ ಮಾಡಿದರು. ಇದಕ್ಕೆ ಯಾವುದೇ ಯೋಜನೆ ಇರಲಿಲ್ಲ. ಯೋಚನಾ ರಹಿತವಾಗಿ ಮಾಡಿರುವುದಕ್ಕೆ ಹೀಗಾಗಿದೆ. ಬೆಲೆ ಏರಿಕೆ ಮಾಡಿರುವುದು ಅತ್ಯಂತ ಖಂಡನೀಯ. 2000 ಕೊಟ್ಟು 4000 ಕಿತ್ತುಕೊಂಡು ಹೋಗುತ್ತದೆ. ಒಂದು ಕೈಲಿ ಕೊಟ್ಟು ಮತ್ತೊಂದು ಕೈಲಿ ಕಿತ್ತುಕೊಳ್ಳುವ ಕೆಲಸ ಆಗುತ್ತಿದೆ.

ಇನ್ಮೇಲೆ ಬಸ್ ದರವೂ ಹೆಚ್ಚಾಗುತ್ತದೆ. ಜನರ ಮೇಲೆ ದ್ವೇಷ ಸಾಧಿಸುತ್ತಿದ್ದಾರೆ. ಇದು ಜನ ವಿರೋಧಿ ನೀತಿ. ಕಾರಣ ಸರ್ಕಾರ ಬೆಲೆ ಏರಿಕೆ ತಕ್ಷಣ ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ನಾವು ಬೆಲೆ ಏರಿಕೆ ವಿರೋಧ ಮಾಡುತ್ತೇವೆ. ರಾಜ್ಯವನ್ನು ದಿವಾಳಿಯತ್ತ ನಿಲ್ಲಿಸುವುದು ಖಚಿತ. ಬೆಲೆ ಏರಿಕೆ ಉಚಿತ, ಬಾಕಿ ಎಲ್ಲಾ ಖಚಿತ.

ಅಪರಾಧ, ಹಿಂದೂ ವಿರೋಧಿ ನೀತಿ ಖಚಿತ ಎನ್ನುವಂತಾಗಿದೆ ಎಂದು ಸಚಿವ ಜೋಶಿ ಹರಿಹಾಯ್ದರು

## ನಾನು ಯಾರನ್ನೂ ದೂರಲು ಇಚ್ಛಿಸುವುದಿಲ್ಲ: ಬಿಎಸ್‌ವೈ

• ಉದಯವಾಹಿನಿ, ಬೆಂಗಳೂರು

ಪೂರ್ವ ನಿಯೋಜಿತ ಕಾರ್ಯಕ್ರಮದ ಹಿನ್ನೆಲೆಯಲ್ಲಿ ದಿಲ್ಲಿಗೆ ತೆರಳಿದ್ದ ನಾನು ಬೆಂಗಳೂರಿಗೆ ವಾಪಸ್ಸಾಗಿದ್ದೇನೆ. ನನ್ನ ವಿರುದ್ಧದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸೋಮವಾರ ವಿಚಾರಣೆಗೆ ಹಾಜರಾಗುತ್ತೇನೆ. ಯಾರೆಲ್ಲಾ ಈ ರೀತಿ ಕುತಂತ್ರ ಮಾಡುತ್ತಿದ್ದಾರೋ ಅವರೆಲ್ಲರಿಗೂ ಜನ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ. ಜೂ.17ರಂದು ವಿಚಾರಣೆಗೆ ಬರುವುದಾಗಿ ಮೊದಲೇ ಲಿಖಿತ ರೂಪದಲ್ಲಿ ತಿಳಿಸಿದ್ದೆ. ಹೈಕೋರ್ಟ್ ಕೂಡ ಇದಕ್ಕೆ ಸಮ್ಮತಿಸಿದೆ. ಅಲ್ಲದೆ, ಜಾಮೀನು ರಹಿತ ಬಂಧನ ವಾರೆಂಟ್‌ಗೂ ತಡೆಯಾಜ್ಞೆ ನೀಡಿದೆ. ಕೆಲವರು ಈ ವಿಚಾರದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಲು ಪ್ರಯತ್ನಿಸಿದರು. ಆದರೆ ನಾನು ಯಾರನ್ನೂ ದೂರಲು ಇಚ್ಛಿಸುವುದಿಲ್ಲ. ವಾಸ್ತವಿಕ ಸಂಗತಿಗಳು ಎಲ್ಲರಿಗೂ ಗೊತ್ತಿದೆ, ಎಂದು ಹೇಳಿದರು. ಉದ್ದೇಶಪೂರ್ವಕ ರಾಜಕೀಯ ಷಡ್ಯಂತ್ರವೇ ಎಂಬ ಪ್ರಶ್ನೆಗೆ, ಈ ಹಂತದಲ್ಲಿ ಆ ಬಗ್ಗೆ ನಾನು ಪ್ರತಿಕ್ರಿಯೆ ನೀಡಲು ಹೋಗುವುದಿಲ್ಲ. ಎಲ್ಲರಿಗೂ ಎಲ್ಲವೂ ಗೊತ್ತಿದೆ. ನ್ಯಾಯಾಂಗದ ಮೇಲೆ ನನಗೆ ವಿಶ್ವಾಸವಿದ್ದು, ನ್ಯಾಯ ಸಿಗುವ ನಂಬಿಕೆ ಇದೆ, ಎಂದು ತಿಳಿಸಿದರು.

# ಬೆಂಗಳೂರು ಸೇರಿ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ಮಾಡಲು ಮುಂದು


### ಹಣಕ್ಕಾಗಿ ಕಾರ್ಪೊರೇಷನ್, ಯುಟಿಲಿಟಿ ಬಿಲ್ಡಿಂಗ್ ಅಡ ಇಡಲು ಸಿದ್ದರಾಮಯ್ಯ ಯೋಜನೆ: ಆರ್.ಅಶೋಕ್ ಕಿಡಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರವು ದಿವಾಳಿಯಾಗಿದ್ದು, ಸಿದ್ದರಾಮಯ್ಯ ಅವರು ವಿಫಲರಾಗಿದ್ದಾರೆ. ಪೆಟ್ರೋಲ್ ಬೆಲೆಯೇರಿಕೆ ಮಾಡಿರುವ ರಾಜ್ಯ ಸರ್ಕಾರವು, ಹಣಕ್ಕಾಗಿ ಕಾರ್ಪೊರೇಷನ್ ಹಾಗೂ ಯುಟಿಲಿಟಿ ಬಿಲ್ಡಿಂಗ್ ಅನ್ನು ಅಡಮಾನ ಇಡಲು ಸಜ್ಜಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದರು. ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ಮಾರಾಟ ತೆರಿಗೆ ಹೆಚ್ಚಿಸಿದ ರಾಜ್ಯ ಸರ್ಕಾರದ ವಿರುದ್ಧ ಸೋಮವಾರ (ಜೂನ್ 17) ಬೆಂಗಳೂರು ಸೇರಿ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ಮಾಡಲು ಮುಂದಾಗಿದೆ. ಪ್ರತಿಭಟನೆ ಕುರಿತು ಸುದ್ದಿಗೋಷ್ಠಿ ನಡೆಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ

**ಅಡಮಾನ ಇಡಲು ಸಜ್ಜು**

ರಾಜ್ಯದಲ್ಲಿ ಒಂದು ಲೀಟರ್ ಪೆಟ್ರೋಲ್‌ಗೆ 3 ರೂ. ಹಾಗೂ ಡೀಸೆಲ್‌ಗೆ 3.5 ರೂ. ಏರಿಕೆ ಮಾಡಿ ಆದೇಶ ಹೊರಡಿಸಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿಯು ಬೆಲೆಯೇರಿಕೆ ಅಸ್ತ್ರ ಪ್ರಯೋಗಿಸುತ್ತಿದೆ. ಸಿದ್ದರಾಮಯ್ಯ ಅವರು ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ ನಿರೀಕ್ಷಿತ ಫಲಿತಾಂಶ ಬಂದಿಲ್ಲ ಎಂದು ರಾಜ್ಯದ ಜನರ ಮೇಲೆ ದ್ವೇಷ ಕಾರುತ್ತಿದ್ದಾರೆ. ಇದೇ ಕಾರಣಕ್ಕಾಗಿ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಏರಿಕೆ ಮಾಡಿದ್ದಾರೆ. ಬಿಜೆಪಿ ಸರ್ಕಾರ ಇದ್ದಾಗ ನಾವು ತೆರಿಗೆ ಕಡಿಮೆ ಮಾಡಿದ್ದೆವು. ನಮ್ಮ ತೆರಿಗೆ, ನಮ್ಮ ಹಕ್ಕು ಎಂದೆಲ್ಲ ಹಾರಾಡಿದ ಕಾಂಗ್ರೆಸ್ ಈಗ ಬೆಲೆಯೇರಿಕೆ ಮಾಡಿದೆ. ಕರ್ನಾಟಕದ ಆರ್ಥಿಕ ಸ್ಥಿತಿ ಪಾತಾಳಕ್ಕೆ ಹೋಗಿರುವ ಕಾರಣ ಸಿದ್ದರಾಮಯ್ಯ ಅವರು ಜನರಿಗೆ ಬೆಲೆಯೇರಿಕೆಯ ಬರೆ ಎಳೆಯಲು ಮುಂದಾಗಿದ್ದಾರೆ ಎಂಬುದಾಗಿ ಆರ್. ಅಶೋಕ್ ಅಸಮಾಧಾನ ವ್ಯಕ್ತಪಡಿಸಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವರುಣ ಕ್ಷೇತ್ರದಲ್ಲೇ ಜನರು ಕಲುಷಿತ ನೀರು ಕುಡಿದುಸತ್ತಿದ್ದಾರೆ. ಟ್ಯಾಂಕರ್‌ಗಳನ್ನು ಸ್ವಚ್ಛಗೊಳಿಸಲು ಸರ್ಕಾರದ ಬಳಿ ಹಣವಿಲ್ಲ. ಜನರಿಗೆ ಶುದ್ಧ ಕುಡಿಯುವ ನೀರು ನೀಡುವ ಯೋಗ್ಯತೆ ಕೂಡ ಈ ಸರ್ಕಾರಕ್ಕಿಲ್ಲ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೂಗಿನಡಿ ಅವರ ಕ್ಷೇತ್ರ ವರುಣದಲ್ಲಿ ಕಲುಷಿತ ನೀರನ್ನು ಜನರು ಸೇವಿಸಿ ಸಾವಿಗೀಡಾಗಿದ್ದಾರೆ. ಅಂದರೆ ಮುಖ್ಯಮಂತ್ರಿಗಳಿಗೆ ಕುಡಿಯುವ ನೀರು ನೀಡುವ ಯೋಗ್ಯತೆ ಇಲ್ಲ.

ಈಗ ತುಮಕೂರಿನಲ್ಲೂ ಕಲುಷಿತ ನೀರು ಸೇವಿಸಿ ಆರು ಜನರ ಸಾವಾಗಿದೆ. ಇದಕ್ಕೆ ಜಿಲ್ಲಾಧಿಕಾರಿಯನ್ನು ಕೇಳಿದರೆ ಮೂತ್ರ ಪಿಂಡ ಸಮಸ್ಯೆ ಎಂದು ಕಾರಣ ಹೇಳಿದ್ದಾರೆ. ಆರೋಗ್ಯ ಸಮಸ್ಯೆ ಎಲ್ಲರಿಗೂ ಇದ್ದೇ ಇರುತ್ತದೆ. ಆದರೆ ಅದನ್ನೇ ಸಬೂಬು ಮಾಡಬಾರದು. ಈ ಕುರಿತು ವರದಿ ಕೇಳಿದ್ದೇನೆ ಎಂದರು.

> ಕೊಪ್ಪಳದಲ್ಲಿ ಕೂಡ ಜನರು ಕಲುಷಿತ ನೀರು ಸೇವಿಸಿ ಆಸ್ಪತ್ರೆ ಸೇರಿದ್ದಾರೆ. ಕುಡಿಯುವ ನೀರಿನ ಟ್ಯಾಂಕರ್ ಗಳನ್ನು ಸ್ವಚ್ಛಗೊಳಿಸಲು ಸರ್ಕಾರದ ಬಳಿ ಹಣವಿಲ್ಲ. ಇದರಿಂದಲೇ ಜನರು ಕಲುಷಿತ ನೀರು ಕುಡಿಯಬೇಕಾಗಿದೆ. ಶಾಸಕರು ಅನುದಾನ ಕೇಳಿದರೆ ಡಿಸಿಎಂ ಡಿ. ಕೆ. ಶಿವಕುಮಾರ್ ಬಾಯ್ಮುಚ್ಚಿಕೊಂಡು ಸುಮ್ಮನಿರಿ ಎಂದಿದ್ದಾರೆ. ಜನರ ಸಾವಿಗೆ ಸರ್ಕಾರದ ನಿರ್ಲಕ್ಷ್ಯವೇ ನೇರ ಕಾರಣ
>
> -ಆರ್.ಅಶೋಕ್, ವಿರೋಧ ಪಕ್ಷದ ನಾಯಕ

### ಕಾಂಗ್ರೆಸ್ ನವರಿಗೆ ಕಮಿಷನ್ ಹೊಡೆಯಲು ಆಗುತ್ತಿಲ್ಲ

ಮುಂದಿನ ತಿಂಗಳು ಸರ್ಕಾರಿ ನೌಕರರಿಗೆ ಸಂಬಳ ಕೊಡಲೂ ಸರ್ಕಾರದ ಬಳಿ ದುಡ್ಡಿಲ್ಲ ಎಂಬ ಕಾರಣಕ್ಕಾಗಿ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಏರಿಕೆ ಮಾಡಲಾಗಿದೆ. ಆದಾಯ ಬರುವಂತಾಗಲಿ ಎಂದು ಬಿಡಿಎ ಕಮರ್ಷಿಯಲ್ ಕಾಂಪ್ಲೆಕ್ಸ್ ಕಟ್ಟಿಸಲಾಯಿತು. ಆದರೆ, ಸಿದ್ದರಾಮಯ್ಯ ಅವರು ಅದನ್ನು ಮಾರಾಟ ಮಾಡಲು ಮುಂದಾಗಿದ್ದಾರೆ. ಕಾಂಗ್ರೆಸ್‌ನವರಿಗೆ ಕಮಿಷನ್ ಹೊಡೆಯಲು ಆಗುತ್ತಿಲ್ಲ. ಬಿಬಿಎಂಪಿಗೆ 4 ಸಾವಿರ ಕೋಟಿ ರೂ. ಸಾಲ ಮಾಡಿದ್ದಾರೆ. ಕಾರ್ಪೊರೇಷನ್ ಬಿಲ್ಡಿಂಗ್, ಯುಟಿಲಿಟಿ ಬಿಲ್ಡಿಂಗ್, ವಾರ್ಡ್ ಆಫೀಸ್‌ಗಳನ್ನು ಕೂಡ ಅಡ ಇಡಲು ಇವರು ನೀಲಿನಕ್ಷೆ ತಯಾರಿ

**ಈ ದಿನದ ದರ** ಪೆಟ್ರೋಲ್: 102.84 ₹/L | ಡೀಸೆಲ್ : 88.98 ₹/L | ಬಂಗಾರ: ₹7,255 /Gram(24ct) ₹6,650 /Gram(22ct) | ಬೆಳ್ಳಿ: ₹91.00 /Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಜಗಮಿರೆ ನಿನ್ನೊಳು ಬಾಧಿಸದಂತು

ನಿಜಗುಣರ ಪರಮಾರ್ಥ ಗೀತೆಯ ಮಾತು. ನಿನ್ನೊಳಗೆ ಜಗತ್ತು, ಜಗತ್ತಿನೊಳಗೆ ನೀನು ಇದ್ದರೂ ನಿನ್ನ ಭಾವ ಪಕ್ವವಾಗಿದ್ದರೆ ನಿರ್ಲಿಪ್ತವಾಗಿದ್ದರೆ ಜಗತ್ತು ನಿನ್ನನ್ನು ಬಾಧಿಸುವುದಿಲ್ಲ ನಿನಗೆ ಅಡ್ಡಿ ಮಾಡದು. ಗಗನಜ ವಿಪ್ರನ ಕಥೆ ಇದೆ. ಆಕಾಶದಿಂದ ಹುಟ್ಟಿದ ಬ್ರಾಹ್ಮಣ ಗಗನಜ ವಿಪ್ರ. ಈತನ ಅಸ್ತಿತ್ವವೆಂಬುದೇ ಅಸಂಭವವಾದ್ದರಿಂದ ಈತನಿಗೆ ಕರ್ಮ ಮರಣಾದಿಗಳಿಲ್ಲದಂತೆ ನಾಮ ರೂಪಾತ್ಮಕ ಜಗತ್ತು ವಾಸ್ತವದಲ್ಲಿ ತನಗಿಂತ ಭಿನ್ನವಲ್ಲದ್ದರಿಂದ ಜಗತ್ತು ನಿನ್ನನ್ನು ಬಾಧಿಸದು. ಆಕಾಶದಲ್ಲಿನ ಮೋಡಗಳ ಆರ್ಭಟ ಸಿಡಿಲು ಮಿಂಚುಗಳು ಆಕಾಶವನ್ನು ಬಾಧಿಸದಂತೆ ಪಕ್ವ ಮನಸ್ಸ್ಥಿತಿಯ ನಿನಗೆ ಈ ಜಗತ್ತು ಬಾಧಿಸದು. ಬಟ್ಟೆ ಪ್ಲಾಸ್ಟಿಕ್ ನ ಕೃತಕ ಹಾವು ಬಾಧಿಸದಂತೆ ಜಗವು ನಶ್ವರ ಕೃತಕ ಎಂದು ಭಾವಿಸಿದ ತತ್ತ್ವಜ್ಞಾನಿಯಾದ ನಿನಗೆ ಈ ಜಗತ್ತು ಬಾಧಿಸದು.

## ಭಜನ - ಪ್ರವಚನ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಜೂನ್ 18, 19 ಮತ್ತು 20 ರಂದು ಸಂಜೆ 6 ರಿಂದ 7ರ ವರೆಗೆ ಕ್ರಮವಾಗಿ ಶೇಷಾದ್ರಿಪುರದ ಶ್ರೀ ಸುಶಮೀಂದ್ರ, ಭಜನಾ ಮಂಡಳಿ, ಈಜುಕೊಳದ ಬಡಾವಣೆ ಶ್ರೀ ವಿಜಯ ವಿಠ್ಠಲ ಭಜನಾ ಮಂಡಳಿ, ಮಲ್ಲೇಶ್ವರದ ಸ್ತುತಿ ವಾಹಿನಿ ಸಂಘದ ಸದಸ್ಯರುಗಳಿಂದ ಭಜನಾ ಕಾರ್ಯಕ್ರಮಗಳೂ ಹಾಗೂ ಇದೇ ದಿನಾಂಕಗಳಂದು ಸಂಜೆ 7 ರಿಂದ 8ರ ವರೆಗೆ ಮ||ಶಾ||ಸಂ|| ಡಾ|| ಜಗನ್ನಾಥಾಚಾರ್ಯರಿಂದ ಮಹಾಭಾರತ - ಪಾಂಡವೋತ್ಪತ್ತಿ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಬೆಂಗಳೂರು-560003

## ರಾಜ್ಯ ಸರ್ಕಾರದಿಂದ 1,419 ಕನ್ನಡ ಇಂಗ್ಲೀಷ್ ಮೀಡಿಯಂ ಶಾಲೆ ಆರಂಭ

• ಉದಯವಾಹಿನಿ, ಬೆಂಗಳೂರು

ಕಲ್ಯಾಣ ಕರ್ನಾಟಕ ಜನತೆಗೆ ಗುಡ್ ನ್ಯೂಸ್ ಎನ್ನುವಂತೆ 1ನೇ ತರಗತಿಯಿಂದಲೇ ಕನ್ನಡ, ಇಂಗ್ಲೀಷ್ ಮೀಡಿಯಂನಲ್ಲಿ ಶಿಕ್ಷಣ ನೀಡುವ ಸಲುವಾಗಿ 1,419 ಶಾಲೆಗಳನ್ನು ಆರಂಭಕ್ಕೆ ರಾಜ್ಯ ಸರ್ಕಾರ ಆದೇಶಿದೆ. ಈ ಬಗ್ಗೆ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರು ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, ಕಲ್ಯಾಣ ಕರ್ನಾಟಕದ ವಿಭಾಗದಲ್ಲಿ ಶಿಕ್ಷಣದಲ್ಲಿ ಗುಣಾತ್ಮಕ ಪ್ರಗತಿಯನ್ನು ಸಾಧಿಸಲು ಪ್ರಾಥಮಿಕ ಹಂತದಲ್ಲಿಯೇ/ಆರಂಭಿಕ ಹಂತದಿಂದಲೇ ಭದ್ರ ಬುನಾದಿಯನ್ನು ಹಾಕುವ ನಿಟ್ಟಿನಲ್ಲಿ 2024-25ನೇ ಸಾಲಿನಿಂದ ಅರ್ಹ ಸರ್ಕಾರಿ ಶಾಲೆಗಳಲ್ಲಿ 1ನೇ ತರಗತಿಯಿಂದ ದ್ವಿಭಾಷಾ (ಕನ್ನಡ, ಇಂಗ್ಲಿಷ) ತರಗತಿಗಳನ್ನು ರಾಜ್ಯದ 1419 ಸರ್ಕಾರಿ ಶಾಲೆಗಳಲ್ಲಿ ಪ್ರಾರಂಭಿಸಲು ಸರ್ಕಾರ ಆದೇಶಿಸಿದೆ. ಇದಕ್ಕಾಗಿ, ಡಾ. ಅಜಯ ಸಿಂಗ, ಅಧ್ಯಕ್ಷರು, ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿ ಇವರ ನೇತೃತ್ವದಲ್ಲಿ ಮಂಡಳಿಯು ಉತ್ತಮ ಹೆಜ್ಜೆಯನ್ನಿಟ್ಟು ಸರ್ಕಾರದೊಂದಿಗೆ ಅಕ್ಷರ ಆವಿಷ್ಕಾರ ಯೋಜನೆಯ ಮುಖಾಂತರ ಕೈ ಜೋಡಿಸಿದೆ. ತನ್ಮೂಲಕ ಮಕ್ಕಳಿಗೆ ಅದರಲ್ಲೂ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಾತ್ಮಕ ದ್ವಿಭಾಷಾ (ಕನ್ನಡ ಮತ್ತು ಇಂಗ್ಲಿಷ) ಕಲಿಕಾ ಸೌಲಭ್ಯವನ್ನು ಕಲ್ಪಿಸಿಕೊಡುವ ಉದ್ದೇಶ ಸರ್ಕಾರದ್ದಾಗಿದೆ.

## ಬೆಲೆಯೇರಿಕೆಯ ಬಾಂಬ್ ಬ್ಲಾಸ್ಟ್! ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಕಿಡಿ

• ಉದಯವಾಹಿನಿ, ಬೆಂಗಳೂರು

ಭಯೋತ್ಪಾದಕರು ಕುಕ್ಕರ್‌ನಲ್ಲಿ, ಹೋಟೆಲ್‌ನಲ್ಲಿ ಬಾಂಬ್ ಬ್ಲಾಸ್ಟ್ ಮಾಡಿದ ಹಾಗೆ ಕಾಂಗ್ರೆಸ್ ಬೆಲೆಯೇರಿಕೆಯ ಬಾಂಬ್ ಅನ್ನು ಕರ್ನಾಟಕದಲ್ಲಿ ಬ್ಲಾಸ್ಟ್ ಮಾಡಿದೆ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿದೆ. ಮುದ್ರಾಂಕ ಶುಲ್ಕ, ಆಸ್ತಿ ತೆರಿಗೆ, ಬಸ್ ದರ, ದಿನಬಳಕೆ ವಸ್ತುಗಳ ದರ ಏರಿಸಿದ ಬಳಿಕ ಈಗ ಪೆಟ್ರೋಲ್ ಡಿಸೇಲ್ ದರವನ್ನು ಏರಿಸಿ ಕನ್ನಡಿಗರನ್ನು ಇನ್ನಿಲ್ಲದ ಸಂಕಷ್ಟಕ್ಕೆ ದೂಡಿದೆ. ಸಿಎಂ ಸಿದ್ದರಾಮಯ್ಯ ಅವರ ಆಡಳಿತಾವಧಿಯಲ್ಲಿ ಅರಾಜಕತೆ ಏರಿದಂತೆ, ವಸ್ತುಗಳ ಬೆಲೆ ಸಹ ಇನ್ನಿಲ್ಲದಂತೆ ಏರುತ್ತಿರುವುದು, ಅವರ ದುರ್ಬಲ ಹಾಗೂ ಭ್ರಷ್ಟ ಆಡಳಿತಕ್ಕೆ ಸಾಕ್ಷಿ ಎಂದು ಕಿಡಿಕಾರಿದೆ.

## ರಾಜ್ಯಾದ್ಯಂತ ಹೋಟೆಲ್, ರೆಸ್ಟೋರೆಂಟ್ ಗಳಲ್ಲಿ ಆಹಾರ ತಪಾಸಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯಾದ್ಯಂತ ಹೋಟೆಲ್, ರೆಸ್ಟೋರೆಂಟ್, ಲಘು ಉಪಹಾರ ಕೇಂದ್ರಗಳನ್ನು ತಪಾಸಣೆ ನಡೆಸಲು ಕ್ರಮಕೈಗೊಳ್ಳುವ ಕುರಿತು ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಹೋಟೆಲ್, ರೆಸ್ಟೋರೆಂಟ್ ಲಘು ಉಪಹಾರ ಕೇಂದ್ರಗಳಲ್ಲಿ ಸ್ವಚ್ಛತೆ ಇಲ್ಲದೆ, ಕಲುಷಿತ, ವಿಷಹಾರ ಸೇವನೆ, ಕಲಬೆರಕೆ ಪದಾರ್ಥಗಳು, ಅವಧಿ ಮೀರಿದ ಪದಾರ್ಥಗಳ ಉಪಯೋಗಿಸುತ್ತಿರುವಂತೆ ಘಟನೆಗಳು ಸಂಭವಿಸುತ್ತಿದ್ದು, ರಾಮೇಶ್ವರ ಕೆಫೆ, ಇಂದಿರಾನಗರ ಬೆಂಗಳೂರು, ಇನ್ನಿತರೆ ಸಮಸ್ಯೆಗಳಿಗೆ ಸಂಬಂಧಿಸಿದಂತೆ, ಮಾಧ್ಯಮಗಳಲ್ಲಿ, ಸಾಮಾಜಿಕ ಜಾಲ ತಂಡದಲ್ಲಿ ವರದಿಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಆರೋಗ್ಯದ ಹಿತದೃಷ್ಠಿಯಿಂದ ಉತ್ತಮ ಗುಣಮಟ್ಟ, ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹೋಟೇಲ್, ರೆಸ್ಟೋರೆಂಟ್, ಲಘು ಉಪಹಾರ ಕೇಂದ್ರಗಳಲ್ಲಿ The Food Safety and Standards Act-2006 ಮತ್ತು 2011 ನಿಯಮಗಳಲ್ಲಿ ಸೂಚಿಸಿರುವ ಮಾರ್ಗಸೂಚಿಯಂತೆ ತಪಾಸಣೆ ನಡೆಸಿ ಸೂಕ್ತ ರೀತಿಯ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

## ತಾಯಿಗೆ ಚಿತ್ರಹಿಂಸೆ ನೀಡುತ್ತಿದ್ದ ಆಕೆಯ ಪ್ರಿಯಕರನನ್ನು ಕೊಂದ ಮಗ

• ಉದಯವಾಹಿನಿ, ಬೆಂಗಳೂರು

ನಿರ್ಮಾಣ ಹಂತದ ಕಟ್ಟಡದಲ್ಲಿ ದೊಣ್ಣೆಯಿಂದ ಹೊಡೆದು ವ್ಯಕ್ತಿಯ ಬರ್ಬರ ಹತ್ಯೆ ನಡೆಸಲಾಗಿದೆ. ಪರಪ್ಪನ ಅಗ್ರಹಾರ ಪೊಲೀಸ್ ಠಾಣಾ ವ್ಯಾಪ್ತಿಯ ಕೂಡ್ಲು ಗ್ರಾಮದ ಸಾಯಿ ಮೆಡೋಸ್ ಲೇಔಟ್‌ನಲ್ಲಿ ಘಟನೆ ನಡೆದಿದೆ. ಕೃಷ್ಣೋಜಿ ರಾವ್ (37) ಕೊಲೆಯಾದವನು.ಶಿವಕುಮಾರ್, ರಾಜೇಶ್ವರಿ ಕೊಲೆ ಮಾಡಿದ ಆರೋಪಿಗಳಾಗಿದ್ದಾರೆ. ಮದುವೆಯಾಗಿದ್ದ ರಾಜೇಶ್ವರಿ ಪತಿಯಿಂದ ದೂರಾಗಿದ್ದಳು. ಬಳಿಕ ಕೆಲ ವರ್ಷಗಳ ಹಿಂದೆ ಕೃಷ್ಣೋಜಿರಾವ್ ಜತೆ ರಾಜೇಶ್ವರಿ ಸಂಬಂಧ ಹೊಂದಿದ್ದಳು. ಇವರಿಬ್ಬರು ಗಂಡ-ಹೆಂಡತಿ ಎಂದು ಹೇಳಿಕೊಂಡು ಗಾರೆ ಕೆಲಸ ಮಾಡಿಕೊಂಡು ಒಟ್ಟಿಗೆ ವಾಸವಿದ್ದರು. ಕೃಷ್ಣೋಜಿರಾವ್, ರಾಜೇಶ್ವರಿ ಆಕೆಯ ಮಗ ಶಿವಕುಮಾರ್ ನಿರ್ಮಾಣ ಹಂತದ ಕಟ್ಟಡದಲ್ಲಿ ವಾಸವಿದ್ದರು. ಇತ್ತೀಚೆಗೆ ಕೃಷ್ಣೋಜಿರಾವ್ ದಿನನಿತ್ಯ ಕುಡಿದು ಬಂದು ರಾಜೇಶ್ವರಿಗೆ ಹಲ್ಲೆ ಮಾಡುತ್ತಿದ್ದ. ಇದರಿಂದಾಗಿ ರಾಜೇಶ್ವರಿ ಹಾಗೂ ಆಕೆಯ ಮಗ ಶಿವಕುಮಾರ್ ಬೇಸತ್ತು ಹೋಗಿದ್ದರು. ನಿನ್ನೆ ಭಾನುವಾರ ಸಂಜೆ ಕಂಠ ಪೂರ್ತಿ ಕುಡಿದು ಬಂದಿದ್ದ ಕೃಷ್ಣೋಜಿರಾವ್, ರಾಜೇಶ್ವರಿ ಜತೆಗೆ ಗಲಾಟೆ ಮಾಡಿ ಹಲ್ಲೆ ಮಾಡುತ್ತಿದ್ದ. ಈ ವೇಳೆ ಅಲ್ಲಿಗೆ ಬಂದ ರಾಜೇಶ್ವರಿ ಮಗ ಶಿವಕುಮಾರ್ ದೊಣ್ಣೆಯಿಂದ ಕೃಷ್ಣೋಜಿರಾವ್ ತಲೆಗೆ ಹೊಡೆದಿದ್ದ ಸಾಯಿಸಿದ್ದ.

# ಹೆಚ್ಚುವರಿ ಗೋಮಾಳ ಭೂಮಿ ಹಂಚಿಕೆ: ಕೃಷ್ಣ ಬೈರೇಗೌಡ

### ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ಎಂದು ಕಂದಾಯ ಇಲಾಖೆಯ ಸಚಿವ ಕೃಷ್ಣ ಬೈರೇಗೌಡ ಜಿಲ್ಲಾಧಿಕಾರಿಗಳಿಗೆ ಸೂಚನೆ

• ಉದಯವಾಹಿನಿ, ಬೆಳಗಾವಿ

ಆರ್.ಟಿ.ಸಿ.ಗೆ ಆಧಾರ್ ಜೋಡಣೆ

ಸಮರ್ಪಕ ಬೆಳೆ ಸಮೀಕ್ಷೆ; ಭೂ ಆಧಾರ ಯೋಜನೆಯಡಿ ಆರ್.ಟಿ.ಸಿ.ಗಳನ್ನು ಆಧಾರ್ ಸಂಖ್ಯೆಗೆ ಜೋಡಣೆ; ಸರಕಾರಿ ಜಮೀನು ಅತಿಕ್ರಮಣ ತಡೆಗೆ ನಿಯಮಿತವಾಗಿ ಲ್ಯಾಂಡ್ ಬೀಟ್; ತಹಶೀಲ್ದಾರ, ಉಪ ವಿಭಾಗಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಇರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವಿಕೆ ಸೇರಿದಂತೆ ಕಂದಾಯ ಇಲಾಖೆಯ ಪ್ರತಿಯೊಂದು ಕೆಲಸ ಕಾರ್ಯಗಳನ್ನು ಚುರುಕುಗೊಳಿಸುವ ಮೂಲಕ ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ಒದಗಿಸಬೇಕು ಎಂದು ಕಂದಾಯ ಇಲಾಖೆಯ ಸಚಿವ ಕೃಷ್ಣ ಬೈರೇಗೌಡ ಅವರು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು. ನೈರುತ್ಯ ಮುಂಗಾರು ಸಿದ್ಧತೆ ಹಾಗೂ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಸುವರ್ಣ ವಿಧಾನಸೌಧದಲ್ಲಿ ಶನಿವಾರ ನಡೆದ ಬೆಳಗಾವಿ ವಿಭಾಗದ ಜಿಲ್ಲಾಧಿಕಾರಿಗಳು ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾಲ ಕಾಲಕ್ಕೆ ಅನುಗುಣವಾಗಿ ಹಾಗೂ ಸಮರ್ಪಕವಾಗಿ ಬೆಳೆ ಸಮೀಕ್ಷೆಯನ್ನು ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳ ಜತೆ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು. ಆರ್.ಟಿ.ಸಿ. ಗಳನ್ನು ಆಧಾರ್ ಸಂಖ್ಯೆಗೆ ಜೋಡಣೆಯನ್ನು ವಿಶೇಷ ಆಂದೋಲನ ರೀತಿಯಲ್ಲಿ ಕೈಗೆತ್ತಿಕೊಳ್ಳಬೇಕು. ಆರ್.ಟಿ.ಸಿ. ಗೆ ಆಧಾರ್ ಜೋಡಣೆಯಿಂದ ಮುಂಬರುವ ದಿನಗಳಲ್ಲಿ ಮ್ಯುಟೇಶನ್, ಬೆಳೆಹಾನಿ ಪರಿಹಾರ ವಿತರಣೆ ಸೇರಿದಂತೆ ಸಾಕಷ್ಟು ಅನುಕೂಲವಾಗಲಿದೆ. ಸರ್ಕಾರಿ ಜಮೀನು, ಕೆರೆಗಳು, ಸ್ವಾಧೀನಪಡಿಸಿಕೊಂಡಿರುವ ಭೂಮಿ, ಸ್ಮಶಾನ ಸೇರಿದಂತೆ ಪ್ರತಿಯೊಂದು ಇಲಾಖೆಗೆ ಸಂಬಂಧಿಸಿದ ಸರಕಾರಿ ಜಮೀನಿನ ಸಂರಕ್ಷಣೆ ಮತ್ತು ಅತಿಕ್ರಮಣ ತಡೆಗಾಗಿ ಲ್ಯಾಂಡ್ ಬೀಟ್ ವ್ಯವಸ್ಥೆ ಜಾರಿಗೆ ತರಲಾಗಿದೆ. ಆದ್ದರಿಂದ ಪ್ರತಿಯೊಂದು ಜಿಲ್ಲೆಗಳ ವ್ಯಾಪ್ತಿಯಲ್ಲಿನ ಸರಕಾರಿ ಜಮೀನಿನ ಬೀಟ್ ಕಡ್ಡಾಯವಾಗಿ ನಡೆಸುವ ಮೂಲಕ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಪ್ರತಿ ನಾಲ್ಕು ತಿಂಗಳಿಗೊಮ್ಮೆ ಬೀಟ್ ಮಾಡುವುದರಿಂದ ಸರಕಾರಿ ಭೂಮಿಯ ಅತಿಕ್ರಮಣಕ್ಕೆ ಕಡಿವಾಣ ಹಾಕಬಹುದು. ಆದ್ದರಿಂದ ನಿಯಮಿತವಾಗಿ ಬೀಟ್ ಮಾಡಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಜಿಲ್ಲಾಧಿಕಾರಿಗಳಿಗೆ ಹೇಳಿದರು. ಜುಲೈ ತಿಂಗಳಿನಲ್ಲಿ ಆಧಾರ್ ಜೋಡಣೆ ಮತ್ತು ಲ್ಯಾಂಡ್ ಬೀಟ್ ಪ್ರಕ್ರಿಯೆ ಪೂರ್ಣಗೊಳಿಸುವಂತೆ ತಿಳಿಸಿದರು.

ಗೋಮಾಳ ಭೂಮಿ ಹಂಚಿಕೆಯನ್ನು ಕಾಯ್ದೆ ಅನುಸಾರ ಸರಕಾರ ನಿರ್ಬಂಧಿಸಿದೆ. ಆದರೆ ಹೆಚ್ಚುವರಿ ಭೂಮಿಯನ್ನು ಗುರುತಿಸಿ ನಿಯಮಾನುಸಾರ ಹಂಚಿಕೆ ಮಾಡಲು ಕಾಯ್ದೆಯಲ್ಲಿ ಅವಕಾಶವಿರುತ್ತದೆ. ಈ ಬಗ್ಗೆ ಪರಿಶೀಲನೆ ಮಾಡಿ ಕಾಯ್ದೆ ಅನುಸಾರ ಕ್ರಮ ಕೈಗೊಳ್ಳಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.


ಮುಖ್ಯಮಂತ್ರಿಗಳ ಜನತಾದರ್ಶನದಲ್ಲಿ ಸ್ವೀಕರಿಸಲಾಗಿರುವ ಮನವಿ/ಅರ್ಜಿಗಳು ಮತ್ತು ಕುಂದುಕೊರತೆಗಳನ್ನು ಸಮರ್ಪಕವಾಗಿ ವಿಲೇವಾರಿ ಮಾಡಬೇಕು. ತಹಶೀಲ್ದಾರ್, ಉಪ ವಿಭಾಗಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಇರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಬೇಕು. ವಿಶೇಷವಾಗಿ 90 ರಿಂದ 180 ದಿನಗಳರೆಗಿನ ಪ್ರಕರಣಗಳನ್ನು ಆದ್ಯತೆ ಮೇರೆಗೆ ಇತ್ಯರ್ಥಪಡಿಸಬೇಕು ಎಂದು ಅಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ಸೂಚನೆ ನೀಡಿದರು.

**ಅನರ್ಹ ಪ್ರಕರಣ**

**ಬಗರ್ ಹುಕುಂ ಸಮಿತಿ ಮುಂದೆ ಮಂಡಿಸಲಾಗುವ ಪ್ರತಿಯೊಂದು ಅನರ್ಹ ಪ್ರಕರಣವನ್ನು ತಿರಸ್ಕರಿಸುವ ಮುಂಚೆ ಸಕಾರಣ ಸಮೇತ ವಿವರಿಸಬೇಕು.ಜನರ ಸಮಸ್ಯೆಗಳಿಗೆ ಪರಿಹಾರ ಕೊಡುವುದು ನಮ್ಮ ಕರ್ತವ್ಯ ಹಾಗೂ ಧರ್ಮ. ಕೆಲಸದ ಹೊರೆ ಹೆಚ್ಚಾಗಿದೆ ಎಂಬುದಕ್ಕಿಂತ ನಮ್ಮ ನಮ್ಮ ಕರ್ತವ್ಯವನ್ನು ಸೀಮಿತ ಅವಧಿಯಲ್ಲಿ ಮಾಡುತ್ತಿರುವುದರಿಂದ ಕಾರ್ಯ ಭಾರ ಎನಿಸುತ್ತಿದೆ.**

**ಕರ್ನಾಟಕ ಮುದ್ರಾಂಕ ಕಾಯ್ದೆ 1957 ರ ಕಲಂ 46 ರಡಿಯಲ್ಲಿ ಭೂಕಂದಾಯ ಬಾಕಿ ವಸೂಲಾತಿಗೆ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕು ಎಂದು ತಿಳಿಸಿದರು. ಕಂದಾಯ ಇಲಾಖೆಯ ಕೆಲಸ ನಿರಂತರವಾಗಿರುತ್ತದೆ. ಜನರ ನಿರೀಕ್ಷೆ ಹೆಚ್ಚಾಗಿರುತ್ತದೆ. ಅವರ ನಿರೀಕ್ಷೆಯ ಪ್ರಕಾರ ಕೆಲಸ ಮಾಡುವ ಮೂಲಕ ಉತ್ತಮ ಸೇವೆ ಒದಗಿಸಬೇಕು ಎಂದು ಕರೆ ನೀಡಿದರು.** -ಸಚಿವ ಕೃಷ್ಣ ಬೈರೇಗೌಡ

**ಇಲಾಖೆ ಹಾಗೂ ನಮ್ಮ ಕಡೆಯಿಂದ ಜನರಿಗೆ ಅಳಿಸು ಸೇವೆ ಎಂದು ಸಕಾರಾತ್ಮಕ ಮನೋಭಾವನೆಯಿಂದ ಕೆಲಸ ಮಾಡಬೇಕು. ಕಂದಾಯ ಇಲಾಖೆಯು ಬದಲಾವಣೆಯ ಹಾದಿಯಲ್ಲಿ ಸಾಗುತ್ತಿದೆ. ಎಲ್ಲರ ಸಹಕಾರದಿಂದ ನಿಗದಿತ ಗುರಿ ಸಾಧನೆ ಸಾಧ್ಯವಾಗಲಿದೆ ಎಂದು ಹೇಳಿದರು.** -ಸಚಿವ ಕೃಷ್ಣ ಬೈರೇಗೌಡ



## ಪ್ಲಾಟ್‌ಫಾರ್ಮ್ ಸ್ಕ್ರೀನ್ ಡೋರ್ ಶೀಘ್ರದಲ್ಲೇ ಅಳವಡಿಕೆ!

• ಉದಯವಾಹಿನಿ, ಬೆಂಗಳೂರು

ಸುರಕ್ಷತೆ ಹಿನ್ನೆಲೆಯಲ್ಲಿ ಇದೇ ಮೊದಲ ಬಾರಿಗೆ ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್ (ಬಿಎಂಆರ್ ಸಿಎಲ್), ರೈಲು ನಿಲ್ದಾಣದಲ್ಲಿ ಪ್ಲಾಟ್‌ಫಾರಂ ಸ್ಕ್ರೀನ್ ಡೋರ್ (ಪಿಎಸ್‌ಡಿ) ಅಳವಡಿಸಲು ಮುಂದಾಗಿದೆ.



ನಮ್ಮ ಮೆಟ್ರೋ ರೈಲು ಕಾರ್ಯಾಚರಣೆಗೊಳ್ಳುತ್ತಿರುವ ಹಸಿರು ಮತ್ತು ನೀಲಿ ಮಾರ್ಗದ ಪ್ರತಿಯೊಂದು ನಿಲ್ದಾಣದಲ್ಲಿ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸಿದ್ದರೂ ಆತ್ಮಹತ್ಯೆಯತ್ನ ಪ್ರಕರಣಗಳು ಮರುಕಳಿಸುತ್ತಲೇ ಇವೆ. ಅಲ್ಲದೇ, ಬಹುತೇಕ ಪ್ರಯಾಣಿಕರು ಮೆಟ್ರೊ ರೈಲು ಏರುವ ಧಾವಂತದಲ್ಲಿ ಹಳದಿ ಪಟ್ಟಿ ದಾಟುವುದು ಸರ್ವೇ ಸಾಮಾನ್ಯವಾಗಿದೆ. ಹೀಗಾಗಿಯೇ, ನಿಗಮವು ಗಾಜಿನ ಪ್ಲಾಟ್‌ಫಾರ್ಮ್ ಸ್ಕ್ರೀನ್ ಡೋರ್‌ಗಳ ಮೊರೆ ಹೋಗಿದೆ. ಇವು ಮೆಟ್ರೊ ರೈಲಿನ ಪ್ರವೇಶ ದ್ವಾರದಲ್ಲಷ್ಟೇ ತೆರೆದುಕೊಳ್ಳಲಿವೆ.

ಮೆಟ್ರೋ ನಿಲ್ದಾಣಗಳಲ್ಲಿ ಪಿಎಸ್‌ಡಿ ಅಳವಡಿಕೆಗೆ ಕರೆದಿದ್ದ ಟೆಂಡರ್ ಅನ್ನು ಅಲ್‌ಸ್ಟಾಮ್ ಟ್ರಾನ್ಸ್‌ಪೋರ್ಟ್ ಇಂಡಿಯಾ ಸಂಸ್ಥೆ ಪಡೆದುಕೊಳ್ಳುವಲ್ಲಿ ಯಶಸ್ವಿಯಾಗಿದೆ. ಕಾಳೇನ ಅಗ್ರಹಾರ - ನಾಗವಾರ ಮಾರ್ಗದ (ಗುಲಾಬಿ ಮಾರ್ಗ- 21 ಕಿ.ಮೀ) ನಿಲ್ದಾಣಗಳಲ್ಲಿ ಮತ್ತು ಸೆಂಟ್ರಲ್ ಸಿಲ್ಕ್ ಬೋರ್ಡ್ - ಕೆ.ಆರ್.ಪುರ- ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮಾರ್ಗ (ನೀಲಿ ಮಾರ್ಗ- 56 ಕಿ.ಮೀ) ನಿಲ್ದಾಣಗಳಲ್ಲಿ ಪಿಎಸ್‌ಡಿಗಳನ್ನು ಅಳವಡಿಸಲಾಗುತ್ತಿದೆ. ಇದಕ್ಕೆ 857 ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ.

**ಗುಲಾಬಿ ಮಾರ್ಗದಲ್ಲಿ ಪೂರ್ಣ ಎತ್ತರದ ಪ್ಲಾಟ್‌ಫಾರ್ಮ್ ಪರದೆಯ ಬಾಗಿಲುಗಳನ್ನು ಹಾಗೂ ನೀಲಿ ಮಾರ್ಗದಲ್ಲಿ ಅರ್ಧ ಎತ್ತರದ ಪ್ಲಾಟ್‌ಫಾರ್ಮ್ ಸ್ಕ್ರೀನ್ ಗೇಟ್‌ಗಳನ್ನು (ಪಿಎಸ್‌ಜಿ) ಅಳವಡಿಸಲು ನಿರ್ಧರಿಸಲಾಗಿದೆ. ಗುತ್ತಿಗೆ ಸಂಸ್ಥೆಯೇ 5 ವರ್ಷಗಳ ಕಾಲ ನಿರ್ವಹಣೆ ಮಾಡಲಿದ್ದು, ಭದ್ರತಾ ಸಿಬ್ಬಂದಿಗೆ ತರಬೇತಿ ಕೂಡ ನೀಡಲಿದೆ. ಈ ಯೋಜನೆಗೆ ಜಪಾನ್ ಇಂಟರ್‌ನ್ಯಾಷನಲ್ ಕೋ-ಆಪರೇಷನ್ ಏಜೆನ್ಸಿ (ಜೆಐಸಿಎ) ಆರ್ಥಿಕ ಸಹಕಾರ ನೀಡುತ್ತಿದೆ.**

## ಜಿಎಸ್‌ಟಿ ಪ್ರವಾಸೋದ್ಯಮವನ್ನು ಕೊಲ್ಲುತ್ತಿದೆ: ಡಿಕೆಶಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕರ್ನಾಟಕ ಸರ್ಕಾರ ಪ್ರವಾಸೋದ್ಯಮದ ಅಭಿವೃದ್ಧಿಗೆ ಬದ್ಧವಾಗಿದ್ದು, ಹೆಚ್ಚು ಬಂಡವಾಳ ಹೂಡಿಕೆದಾರರ ಆಕರ್ಷಣೆಗೆ ಪ್ರವಾಸೋದ್ಯಮ ನೀತಿ ಜಾರಿಗೆ ತರಲು ಉದ್ದೇಶಿಸಲಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್ ಕೆಸಿಸಿಐ) ಮತ್ತು ಪ್ರವಾಸೋದ್ಯಮ ಇಲಾಖೆ ಆಯೋಜಿಸಿದ್ದ ದಕ್ಷಿಣ ಭಾರತ ಉತ್ಸವ ಕಾರ್ಯಕ್ರಮದಲ್ಲಿ ಶನಿವಾರ ಭಾಗವಹಿಸಿ ಮಾತನಾಡಿದ ಅವರು, ಶೇ.18 ಕ್ಕೂ ಹೆಚ್ಚಿನ ಜಿಎಸ್‌ಟಿ ಪ್ರವಾಸೋದ್ಯಮವನ್ನು ಕೊಲ್ಲುತ್ತಿದೆ.

ದಕ್ಷಿಣ ಭಾರತೀಯರಾದ ನಾವು ಇದರ ಬಗ್ಗೆ ಸರ್ಕಾರ ಎಚ್ಚೆತ್ತುಕೊಳ್ಳುವಂತೆ ಮಾಡಬೇಕು. ಬ್ಯಾಂಕ್ ಬಡ್ಡಿ ದರ, ಇತರೇ ತೆರಿಗೆಗಳು ಸೇರಿ ಅರ್ಧಕ್ಕೂ ಹೆಚ್ಚು ಹಣ ಕಳೆದುಕೊಂಡರೆ ಹೂಡಿಕೆದಾರರು ಪ್ರವಾಸೋದ್ಯಮದ ಕಡೆ ಗಮನ ಹರಿಸುವುದಿಲ್ಲ. ಆದ ಕಾರಣ ಹೂಡಿಕೆದಾರ ಸ್ನೇಹಿ ವಾತಾವರಣ ನಿರ್ಮಾಣ ಮಾಡಬೇಕು.

ಪ್ರವಾಸೋಧ್ಯಮ ಕ್ಷೇತ್ರಕ್ಕೆ ಹೂಡಿಕೆ ಮಾಡುವವರು ತಮ್ಮ ಬೇಡಿಕೆಗಳನ್ನು ಲಿಖಿತ ರೂಪದಲ್ಲಿ ಸರ್ಕಾರಕ್ಕೆ ಸಲ್ಲಿಸಿ. ನಿಮ್ಮ ಜೊತೆ ಸರ್ಕಾರ ಇರುತ್ತದೆ. ಹೂಡಿಕೆದಾರರಿಗೆ ಕೇವಲ ಸಹಾಯಧನ ನೀಡಿದರೆ ಸಾಲುವುದಿಲ್ಲ. ಉದಾಹರಣೆಗೆ ಕರಾವಳಿ ಪ್ರದೇಶದ ಹೋಟೆಲ್‌ಗಳಿಗೆ 10 ವರ್ಷಗಳ ಕಾಲ ಆಸ್ತಿ ತೆರಿಗೆ ವಿನಾಯಿತಿ ನೀಡಿದರೆ ಒಂದಷ್ಟು ಬೆಂಬಲ ನೀಡಿದಂತೆ ಆಗುತ್ತದೆ. ಒಟ್ಟಿಗೆ ಸೇರಿ ಹೆಜ್ಜೆ ಗುರುತು ನಿರ್ಮಾಣ ಮಾಡೋಣ ಎಂದರು. ಪ್ರವಾಸೋದ್ಯಮ ನೀತಿಯಿಂದ ಹೆಚ್ಚು ಬಂಡವಾಳ ಹೂಡಿಕೆದಾರರನ್ನು ಸೆಳೆಯಬಹುದು. ಕೈಗಾರಿಕೋದ್ಯಮಿಗಳು ಬಲಗೊಂಡಷ್ಟು ಸರ್ಕಾರವು ಬಲಗೊಳ್ಳುತ್ತದೆ. ಏಕೆಂದರೆ ನಿಮ್ಮಿಂದ ಉದ್ಯೋಗ ಸೃಷ್ಟಿಯಾಗುತ್ತದೆ.

**ಆಂಧ್ರ, ತಮಿಳುನಾಡು, ಪಾಂಡಿಚೇರಿ, ತೆಲಂಗಾಣದಿಂದ ಬಂದಿರುವ ಪ್ರತಿನಿಧಿಗಳು ನಿಮ್ಮ ಅನುಭವಗಳನ್ನು ಇಲ್ಲಿ ಹಂಚಿಕೊಳ್ಳಬೇಕು. ಕರ್ನಾಟಕ ರಾಜ್ಯ 300 ಕಿ.ಮೀ ಹೆಚ್ಚು ಕರಾವಳಿ ಪ್ರದೇಶ ಹೊಂದಿದೆ. ಈ ಮೂಲಕ ಸಾಗರೋತ್ತರ ಉದ್ದಿಮೆಯ ಅಭಿವೃದ್ಧಿಗೆ ನಿಮ್ಮ ಸಲಹೆ ನೀಡಿ ಎಂದು ಕರೆ ನೀಡಿದರು.**

## ಸರ್ಕಾರ ಮಹತ್ವದ ನಿರ್ಧಾರ

• ಉದಯವಾಹಿನಿ, ಬೆಂಗಳೂರು

ಆರೋಗ್ಯ ಇಲಾಖೆಯಲ್ಲಿ ಈ ಬಾರಿ ಕೌನ್ಸಿಲಿಂಗ್ ಮೂಲಕವೇ ವರ್ಗಾವಣೆ ನಡೆಯಲಿದೆ. 2016 ರ ಬಳಿಕ ಆರೋಗ್ಯ ಇಲಾಖೆಯಲ್ಲಿ ಪೂರ್ಣ ಪ್ರಮಾಣದಲ್ಲಿ ಕೌನ್ಸಿಂಗ್ ಮೂಲಕ ವರ್ಗಾವಣೆ ನಡೆಯಲಿದ್ದು, 8 ವರ್ಷಗಳಿಂದ ಕೌನ್ಸಿಲಿಂಗ್ ಎದುರು ನೋಡುತ್ತಿದ್ದ ಅರ್ಹ ವೈದ್ಯರು ಸಿಬ್ಬಂದಿಗಳಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ದಿಟ್ಟ ಹೆಜ್ಜೆಯಿಟ್ಟಿದೆ.

ಕಳೆದ ವರ್ಷ ಸರ್ಕಾರ ರಚನೆಯಾದ ಸಾವಿರಾರು ಸಂಖ್ಯೆಯಲ್ಲಿ ವೈದ್ಯರು ಸೇರಿದಂತೆ ವೈದ್ಯಕೀಯ ಸಿಬ್ಬಂದಿಗಳು ವರ್ಗಾವಣೆಗೆ ಬೇಡಿಕೆಯಿಟ್ಟಿದ್ದರು. ಸಾಮಾನ್ಯ ವರ್ಗಾವಣೆ ನಡೆಸಿದರೂ, ಎಲ್ಲರ ಬೇಡಿಕೆಗಳನ್ನ ಈಡೇರಿಸಲು ಸಾಧ್ಯವಾಗಿರಲಿಲ್ಲ. ಅಲ್ಲದೇ ಸಾಕಷ್ಟು ವರ್ಗಾವಣೆಗೆ ಒತ್ತಡ ಪರಿಸ್ಥಿತಿಗಳನ್ನ ಎದುರಿಸಬೇಕಾಗಿ ಬಂದಿತ್ತು. ಕಾರಣ 2016 ರಿಂದ ಆರೋಗ್ಯ ಇಲಾಖೆಯಲ್ಲಿ ಸಮರ್ಪಕವಾದ ವರ್ಗಾವಣೆ ನಡೆದಿರಲಿಲ್ಲ. ಅಲ್ಲದೇ ಸಾಮಾನ್ಯ ವರ್ಗಾವಣೆಯಲ್ಲಿ ಅರ್ಹರಿಗೆ ನ್ಯಾಯ ದೊರೆಯುವುದಿಲ್ಲ ಎಂಬುದನ್ನ ಮನಗಂಡ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈ ಬಾರಿ ಪೂರ್ಣ ಪ್ರಮಾಣದ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ನಡೆಸುವಂತೆ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಸೂಚಿಸಿದ್ದರು. ಗ್ರೂಪ್ ಎ ಯಿಂದ ಹಿಡಿದು ಗ್ರೂಪ್ ಡಿ ಯಲ್ಲಿ ಬರುವ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿಗಳನ್ನ ಕೌನ್ಸಿಂಗ್ ಮೂಲಕವೇ ವರ್ಗಾವಣೆ ನಡೆಸಲು ಆರೋಗ್ಯ ಇಲಾಖೆ ಸುತ್ತೋಲೆ ಹೊರಡಿಸಿದ್ದು, ಜುಲೈ 31 ರೊಳಗೆ ಕೌನ್ಸಿಲಿಂಗ್ ಪೂರ್ಣಗೊಳ್ಳಲಿದೆ.

## ದರ್ಶನ್ ನೋಡಲು ಬಾರದ ಸಹೋದರ ದಿನಕರ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಟ ದರ್ಶನ್ ತಮ್ಮ ಸಹೋದರ ದಿನಕರ್ ತೂಗುದೀಪ ಅವರೊಂದಿಗೂ ಕಿರಿಕ್ ಮಾಡಿಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ. ಅಣ್ಣ ಬಂಧನಕ್ಕೆ ಒಳಗಾದರೂ ತಮ್ಮನಾದ ದಿನಕರ್ ಅಣ್ಣನನ್ನು ನೋಡಲು ಇದುವರೆಗೂ ಜೈಲಿಗೆ ಭೇಟಿ ನೀಡಿಲ್ಲ ಎಂಬುದೇ ಇದಕ್ಕೆ ಮುಖ್ಯ ಕಾರಣವಾಗಿದೆ. ಮೂಲಗಳ ಪ್ರಕಾರ, ದಿನಕರ್ ಅವರನ್ನು ಚಂದನವನಕ್ಕೆ ದರ್ಶನ್ ಅವರೇ ಪರಿಚಯಿಸಿದರೂ ಸಹೋದರರಿಬ್ಬರೂ ಕಳೆದ ಎರಡು ವರ್ಷಗಳಿಂದಲೂ ಮಾತನಾಡುತ್ತಿಲ್ಲ ಎಂಬ ಮಾಹಿತಿ ತಿಳಿದುಬಂದಿದೆ.

ಈ ನಡುವೆ ಮಾಧ್ಯಮಗಳಲ್ಲಿ ಪವಿತ್ರಾ ಗೌಡ ಅವರನ್ನು ದರ್ಶನ್ ಅವರ ಎರಡನೇ ಪತ್ನಿ ಎಂದು ತೋರಿಸಲಾಗುತ್ತಿದೆ. ಇದರಿಂದ ವಿಜಯಲಕ್ಷ್ಮಿ ಅವರು ತೀವ್ರ ಬೇಸರಗೊಂಡಿದ್ದು, ಆ ನೋವಿನಿಂದ ನರಳುತ್ತಿದ್ದಾರೆ. ದರ್ಶನ್ ಅವರಿಗೆ ಇರುವುದು ಒಬ್ಬರೇ ಪತ್ನಿ. ಅದು ವಿಜಯಲಕ್ಷ್ಮಿ ಮಾತ್ರ ಎಂದು ವಿಜಯಲಕ್ಷ್ಮಿ ಪರ ವಕೀಲ ಅನಿಲ್ ಬಾಬು ಸ್ಪಷ್ಟಪಡಿಸಿದ್ದಾರೆ. ದರ್ಶನ್ ಆದಷ್ಟೂ ಬೇಗ ಜೈಲಿನಿಂದ ಬಿಡುಗಡೆಯಾಗಿ ಸಮಾಜ ಸೇವೆ ಮಾಡಲೆಂದು ಬಾವ ಮಂಜುನಾಥ್ ಅವರು ನಿನ್ನೆಯಷ್ಟೇ ಉತ್ತರ ಕನ್ನಡದ ಕೈಗಾದಲ್ಲಿ ರಾಮಲಿಂಗೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದ್ದರು. ಪ್ರೇಯಸಿ ಪವಿತ್ರಾ ಗೌಡ ಅವರಿಗೆ ಚಿತ್ರದುರ್ಗದ ರೇಣುಕಾಸ್ವಾಮಿ ಎಂಬಾತ ಅಶ್ಲೀಲ ಸಂದೇಶ ಕಳುಹಿಸಿದ್ದ ಹಿನ್ನೆಲೆಯಲ್ಲಿ

ದರ್ಶನ್ ಗ್ಯಾಂಗ್ ಆತನನ್ನು ಕರೆತಂದು ಬೆಂಗಳೂರಿನಲ್ಲಿ ತೀವ್ರವಾಗಿ ಹಲ್ಲೆ ನಡೆಸಿತ್ತು. ಪರಿಣಾಮ ಮೂಗು, ಗಂಟಲು ಕಟ್ ಆಗಿ ಕೊನೆಯುಸಿರೆಳೆದಿದ್ದ.

**ಈ ಪ್ರಕರಣದಲ್ಲಿ ದರ್ಶನ್, ಪವಿತ್ರಾ ಸೇರಿ 17 ಮಂದಿಯನ್ನು ಬಂಧಿಸಲಾಗಿದೆ. ರೇಣುಕಾಸ್ವಾಮಿ ಸಾಯುವ ಮುನ್ನ ಅವರಿಗೆ ಕರೆಂಟ್ ಶಾಕ್ ಕೂಡ ನೀಡಲಾಗಿತ್ತೆಂದು ಎಸ್ಪಿಪಿ ಕೋರ್ಟಿಗೆ ತಿಳಿಸಿರುವ ಬಗ್ಗೆಯೂ ವರದಿಯಾಗುತ್ತಿದೆ.**

## ಪೆಟ್ರೋಲ್, ಡೀಸೆಲ್ ಬೆನ್ನಲ್ಲೇ ಕೆಎಸ್‌ಆರ್‌ಟಿಸಿ ಬಸ್ ಟಿಕೆಟ್ ದರ ಏರಿಕೆ

• ಉದಯವಾಹಿನಿ, ಬೆಂಗಳೂರು

ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯ ನಂತರ ರಸ್ತೆ ಸಾರಿಗೆ ನಿಗಮ ಕೆಎಸ್‌ಆರ್‌ಟಿಸಿ ಬಸ್ ಟಿಕೆಟ್ ದರ ಹೆಚ್ಚಳ ಮಾಡುವ ಸಾಧ್ಯತೆ ಇದೆ ಎನ್ನಲಾಗಿದೆ. ಈ ಮೂಲಕ ಪ್ರಯಾಣಿಕರಿಗೆ ಬಿಗ್ ಶಾಕ್ ನೀಡಿದೆ.

ಡೀಸೆಲ್ ಬೆಲೆಯನ್ನು ಲೀಟರ್ಗೆ 3 ರೂ.ಗಳಷ್ಟು ಹೆಚ್ಚಿಸುವ ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರದ ನಿರ್ಧಾರವು ಸಾರಿಗೆ ಸಂಸ್ಥೆ ತನ್ನ ಹೆಚ್ಚಿನ ಬಸ್ಸುಗಳು ಡೀಸೆಲ್‌ನಲ್ಲಿ ಚಲಿಸುವುದರಿಂದ ದರ ಏರಿಕೆಗೆ ಕಾರಣವಾಗಿದೆ. ಇಂಧನ ಬೆಲೆಗಳ ಹೆಚ್ಚಳವು ಬಸ್ಸುಗಳನ್ನು ಓಡಿಸುವ ಕಾರ್ಯಾಚರಣೆಯ ವೆಚ್ಚದ ಮೇಲೂ ಪರಿಣಾಮ ಬೀರುತ್ತದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಕೆಎಸ್‌ಆರ್‌ಟಿಸಿ ಪ್ರತಿದಿನ 6.2 ಲಕ್ಷ ಲೀಟರ್ ಡೀಸೆಲ್ ಸಂಗ್ರಹಿಸುತ್ತದೆ ಮತ್ತು ಇಂಧನ ಬೆಲೆ ಏರಿಕೆಯ ನಂತರ, ನಿಗಮವು ಇಂಧನಕ್ಕಾಗಿ ದಿನಕ್ಕೆ ಹೆಚ್ಚುವರಿಯಾಗಿ 18.2 ಲಕ್ಷ ರೂ.ಗಳನ್ನು ಖರ್ಚು ಮಾಡಬೇಕಾಗಿದೆ. 2023ರಲ್ಲಿ ಕೆಎಸ್‌ಆರ್‌ಟಿಸಿ 1,828 ರೂ.ಗಳ ಡೀಸೆಲ್ ಖರೀದಿಸಿತ್ತು. ಇದು ತಿಂಗಳಿಗೆ 5.4 ಕೋಟಿ ರೂ ಮತ್ತು ವರ್ಷಕ್ಕೆ 65 ಕೋಟಿ ರೂ.ಗಳವರೆಗೆ ಬರುತ್ತದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮತ್ತೊಂದೆಡೆ, ಹೆಚ್ಚುತ್ತಿರುವ ಸಿಬ್ಬಂದಿ ವೇತನ, ಇಂಧನ ವೆಚ್ಚಗಳು, ನಿರ್ವಹಣಾ ಶುಲ್ಕಗಳು ಮತ್ತು ಇತರ ಅಂಶಗಳಿಂದ ಪ್ರಭಾವಿತವಾದ ಹೆಚ್ಚುತ್ತಿರುವ ಕಾರ್ಯಾಚರಣೆ ವೆಚ್ಚಗಳಿಂದ ತೊಂದರೆಗೀಡಾದ ಸಾರಿಗೆ ಸಂಸ್ಥೆ ಸರ್ಕಾರಕ್ಕೆ ತಮ್ಮ ಕಳವಳಗಳನ್ನು ವ್ಯಕ್ತಪಡಿಸುತ್ತಿವೆ. ಸಾರ್ವಜನಿಕ ಸಾರಿಗೆ ಮಾಧ್ಯಮವು ಶೇಕಡಾ 20 ರಿಂದ 25 ರಷ್ಟು ಟಿಕೆಟ್ ದರ ಹೆಚ್ಚಳಕ್ಕೆ ಒತ್ತಾಯಿಸುತ್ತಿದೆ, ರಾಜ್ಯ ಸರ್ಕಾರವು ಸುಮಾರು 10-15 ಪ್ರತಿಶತದಷ್ಟು ಹೆಚ್ಚಳವನ್ನು ಅನುಮೋದಿಸಬಹುದು ಎಂದು ಹೇಳಲಾಗಿದೆ.

# ನಿಮ್ಮ ಎದುರಿಗೆ ಬರುವ ಶಕ್ತಿ ನನಗಿಲ್ಲ; ಪತ್ರ ವೈರಲ್

### ರೇಣುಕಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್, ಅವರ ಆಪ್ತರು ಪೊಲೀಸರ ವಶ


• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗ ಮೂಲದ ರೇಣುಕಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ಹಾಗೂ ಅವರ ಆಪ್ತರು ಪೊಲೀಸರ ವಶದಲ್ಲಿದ್ದು, ದಿನ ಕಳೆದಂತೆ ಪ್ರಕರಣಕ್ಕೆ ಹೊಸ ತಿರುವು ಸಿಗುತ್ತಿದೆ. ಇತ್ತ ವಿಚಾರಣೆ ತೀವ್ರಗೊಂಡಂತೆ ಡಿ ಗ್ಯಾಂಗ್‌ನ ಕರಾಳ ಮುಖ ಬಯಲಾಗುತ್ತಿದ್ದು, ಸ್ಟಾರ್ ನಟನೊಬ್ಬ ತನ್ನ ಅಭಿಮಾನಿ ಮೇಲೆಯೇ ಇಂತಹ ಹೇಯ ಕೃತ್ಯ ಎಸಗಿದ್ದಾನೆ ಎಂಬ ವಿಚಾರ ಯಾರಿಂದಲೂ ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ.

ಸಮಾಜಕ್ಕೆ ಮಾದರಿಯಾಗಬೇಕಿದ್ದ ನಟನೇ ಇಂದು ತಲೆತಗ್ಗಿಸುವ ಕೆಲಸ ಮಾಡಿದ್ದು, ಈ ವಿಚಾರ ಅಂತರಾಷ್ಟ್ರೀಯ ಮಟ್ಟದಲ್ಲಿ ಸದ್ದು ಮಾಡುತ್ತಿದೆ.

ರೇಣುಕಸ್ವಾಮಿ ಕೊಲೆ ಪ್ರಕರಣ ಹೊರ ಬರುತ್ತಿದ್ದಂತೆಯೇ ನಟ ದರ್ಶನ್‌ರ ವಿರುದ್ಧ ಹೊಸ ಹೊಸ ಆರೋಪಗಳು ಕೇಳಿ ಬರುತ್ತಿದ್ದು, ಅವರ ತೂಗುದೀಪ ಫಾರ್ಮ್‌ಹೌಸ್‌ನಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕನಿಗೆ ಎತ್ತಿನ ಕೊಂಬು ಚುಚ್ಚಿ ಗಾಯವಾದಾಗ ದರ್ಶನ್ ಸಹಾಯ ಮಾಡಲಿಲ್ಲ ಎಂಬ ಆರೋಪ ಮೊನ್ನೆಯಷ್ಟೇ ಕೇಳಿಬಂತು. ಅಲ್ಲದೇ, ಸಹಾಯ ಕೇಳಲು ಹೋದಾಗ ನಾಯಿ ಛೂ ಬಿಟ್ಟಿದ್ದರು ಎಂದು ಸಂತ್ರಸ್ತನ ಸಂಬಂಧಿಕರು ಮಾಧ್ಯಮದ ಮುಂದೆ ಹೇಳಿದ್ದರು. ಇದೆಲ್ಲದರ ನಡುವೆ ಈ ಹಿಂದೆ ದರ್ಶನ್ ಅವರ ಮ್ಯಾನೇಜರ್ ಆಗಿದ್ದ ಮಲ್ಲಿಕಾರ್ಜುನ್ ನಾಪತ್ತೆ ಪ್ರಕರಣವೂ ಇದೀಗ ಹಲವು ಅನುಮಾನಗಳನ್ನ ಹುಟ್ಟಿಹಾಕಿದೆ. ಇದರ ನಡುವೆಯೆ ದರ್ಶನ್ ಆಪ್ತ ಮಲ್ಲಿಕಾರ್ಜುನ್ ಬರೆದಿದ್ದ ಎನ್ನಲಾದ ಪತ್ರ ಸದ್ಯ ವೈರಲ್ ಆಗುತ್ತಿದೆ.

ಗದಗ ಮೂಲದ ಮಲ್ಲಿಕಾರ್ಜುನ್ ಎಲ್ಲಿದ್ದಾರೆ ಏನು ಮಾಡ್ತಿದ್ದಾರೆ ಎಂಬ ಪ್ರಶ್ನೆಗೆ ಈವರೆಗೂ ಉತ್ತರ ಸಿಕ್ಕಿಲ್ಲ. ಬಹಳ ಹಿಂದೆ ದರ್ಶನ್ ಜತೆ ಕೆಲಸ ಮಾಡುತ್ತಿದ್ದರು ಎಂಬ ವಿಚಾರ ಮಾತ್ರ ಎಲ್ಲರಿಗೂ ತಿಳಿದಿದೆ. ದರ್ಶನ್ ಡೇಟ್‌ಗಳನ್ನು ನಿರ್ವಹಿಸುವುದು ಮತ್ತು ದರ್ಶನ್‌ಗೆ ಸಂಬಂಧಿಸಿದ ವ್ಯವಹಾರಗಳನ್ನು ನೋಡಿಕೊಳ್ಳುತ್ತಿದ್ದರು. ಸದಾ ದರ್ಶನ್ ಜತೆಯಲ್ಲಿ ಕಾಣಿಸಿಕೊಳ್ಳುತ್ತಿದ್ದ ದರ್ಶನ್ 2018ರಿಂದ ಏಕಾಏಕಿ ನಾಪತ್ತೆಯಾಗಿದ್ದಾರೆ. ಅವರ ಸುಳಿವೇ ಇಲ್ಲ. ಇದೀಗ ರೇಣುಕಸ್ವಾಮಿ ಕೊಲೆ ಪ್ರಕರಣದಲ್ಲಿ ದರ್ಶನ್ ಬಂಧನವಾಗಿರುವ ಹಿನ್ನೆಲೆಯಲ್ಲಿ ಮಲ್ಲಿ ಪ್ರಕರಣವೂ ಸಹ ಮುನ್ನೆಲೆಗೆ ಬಂದಿದೆ. ಇದರ ಬೆನ್ನಲ್ಲೇ ಮಲ್ಲಿಕಾರ್ಜುನ್ ಬರೆದಿದ್ದ ಎನ್ನಲಾದ ಪತ್ರ ಸದ್ಯ, ಹೊಸ ಚರ್ಚೆಗೆ ನಾಂದಿ ಹಾಡಿದೆ.



ಉದಯವಾಹಿನಿ ಚಿತ್ರ

ದರ್ಶನ್‌ರ ವಿರುದ್ಧ ಹೊಸ ಹೊಸ ಆರೋಪ

**ಅಲ್ಲಿಯವರೆಗೆ ನಿಮ್ಮ ಎದುರಿಗೆ ಬರುವ ಶಕ್ತಿ ನನಗಿಲ್ಲ. ನನ್ನನ್ನು ಯಾವುದೇ ಕಾರಣಕ್ಕೂ ಹುಡುಕು ಪ್ರಯತ್ನ ಮಾಡಬೇಡಿ. ನನ್ನ ಈ ಸಮಸ್ಯೆಯಿಂದ ನಿನ್ನನ್ನು, ಮಗನನ್ನು ಹಾಗೂ ಮನೆಯವರನ್ನು ಬಿಟ್ಟು ಹೋಗುವ ಪರಿಸ್ಥಿತಿ ಬಂದೊದಗಿದೆ. ದಯವಿಟ್ಟು ನನ್ನನ್ನು ಕ್ಷಮಿಸಿ ಇಂತಿ ನಿಮ್ಮ ಪ್ರೀತಿಯ ಮಲ್ಲಿಕಾರ್ಜುನ ಎಂದು ಪತ್ರದಲ್ಲಿ ಬರೆಯಲಾಗಿದೆ. ಇತ್ತ ಈ ಪ್ರಕರಣ ಹೊಸ ಚರ್ಚೆಗೆ ನಾಂದಿ ಹಾಡಿದೆ. ಮುಂದಿನ ದಿನಗಳಲ್ಲಿ ಇದು ಯಾವ ಹಂತ ತಲುಪಲಿದೆ ಎಂದು ಕಾದು ನೋಡಬೇಕಿದೆ.**

**ಪ್ರೀತಿಯ ತೇಜಸ್ವಿನಿಗೆ, ಮೊದಲನೆಯದಾಗಿ ದಯವಿಟ್ಟು ನನ್ನನ್ನು ಕ್ಷಮಿಸು. ನಾನು ನನ್ನ ವೈಯಕ್ತಿಕ ವ್ಯವಹಾರಕ್ಕಾಗಿ ತುಂಬಾ ಸಾಲ ಮಾಡಿಕೊಂಡು ಅದನ್ನು ತೀರಿಸಲಾಗದ ಪರಿಸ್ಥಿತಿಗೆ ಬಂದು ತಲುಪಿದ್ದೇನೆ. ನನ್ನ ಈ ಕೆಲಸದಿಂದ ನಾನು ಯಾರಿಗೂ ಮುಖ ತೋರಿಸದ ಪರಿಸ್ಥಿತಿಯಲ್ಲಿದ್ದೇನೆ. ಆದ ಕಾರಣ ನಾನು ಎಲ್ಲೋ ಕಷ್ಟಪಟ್ಟು ದುಡಿದು ವಾಪಸ್ಸು ಬಂದು ಸಾಲ ತೀರಿಸಿ ನನಗಂಟಿರೋ ಕಳಂಕನಾ ಹೋಗಲಾಡಿಸಿ ಮತ್ತೆ ಧೈರ್ಯವಾಗಿ ತಲೆಯೆತ್ತಿ ಎಲ್ಲರ ಮುಂದೆ ಜೀವನ ನಡೆಸುಬೇಕೆಂದುಕೊಂಡಿದ್ದೇನೆ.**

## ರಾಜ್ಯದಲ್ಲಿ ಅರಣ್ಯ ಪ್ರದೇಶ ಹೆಚ್ಚಿಸಲು ಸಹಾಯ ಮಾಡಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ರಾಜ್ಯದಲ್ಲಿ ಹಸಿರು ಬೆಳೆಸುವ ಕಾರ್ಯಕ್ಕೆ ಸರ್ಕಾರ ಆದ್ಯತೆ ನೀಡಿದ್ದು, ಈ ಕೆಲಸದಲ್ಲಿ ಸಾರ್ವಜನಿಕರೂ ಕೈ ಜೋಡಿಸಬೇಕು. ಒಬ್ಬರು ಕನಿಷ್ಠ ಎರಡು ಗಿಡಗಳನ್ನು ನೆಟ್ಟು ಪೋಷಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು. ನಗರದ ಕೆಎಸ್‌ಒಯು ಘಟಿಕೋತ್ಸವ ಭವನದಲ್ಲಿ ಶನಿವಾರ ರಾಜೀವ್ ಸ್ನೇಹ ಬಳಗ ಹಾಗೂ ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಲಕ್ಷ ವೃಕ್ಷ ಅಭಿಯಾನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಶೇ.19ರಷ್ಟು ಅರಣ್ಯವಿದ್ದು, ಉತ್ತರ ಕರ್ನಾಟಕ ಭಾಗದಲ್ಲಿ ಶೇ.5ಕ್ಕಿಂತ ಕಡಿಮೆ ಅರಣ್ಯ ಪ್ರದೇಶವಿದೆ, ಮುಂದಿನ ದಿನಗಳಲ್ಲಿ ಇದರ ಬಗ್ಗೆ ಗಮನಹರಿಸಬೇಕಿದೆ. ಪ್ರಕೃತಿಯು ಜನರ ಎಲ್ಲಾ ಅವಶ್ಯಕತೆಗಳನ್ನು ಪೂರೈಸುತ್ತದೆ. ಭವಿಷ್ಯದ ಪೀಳಿಗೆಗೂ ಕೂಡ ಪ್ರತಿಯೊಬ್ಬರೂ ಎರಡು ಸಸಿಗಳನ್ನು ನೆಡಬೇಕು. ಅರಣ್ಯ ಪ್ರದೇಶದಿಂದ ಜನರಿಗೆ ಉತ್ತಮ ಮಳೆ ಹಾಗೂ ಆರೋಗ್ಯ ಸಿಗಲಿದೆ, ಆದರೆ, ಹೆಚ್ಚಿದ ಜನಸಂಖ್ಯೆಗೆ ಅನುಗುಣವಾಗಿ ಅರಣ್ಯವನ್ನು ಹೆಚ್ಚಿಸುವ ಬದಲು ಅರಣ್ಯ ನಾಶವಾಗುತ್ತಿರುವುದು ವಿಷಾದಕರ ಸಂಗತಿ.

ಇದೇ ವೇಳೆ ದೆಹಲಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ತಾಪಮಾನ 50 ಡಿಗ್ರಿ ಸೆಲ್ಸಿಯಸ್ ಗೆ ಏರಿಕೆಯಾಗಿದ್ದನ್ನು ಸ್ಮರಿಸಿದ ಅವರು, ಇದಕ್ಕೆ ಅರಣ್ಯನಾಶವೂ ಒಂದು ಕಾರಣ ಎಂದು ಹೇಳಿದರು.

ಅಂತರಾಳದಿಂದ... EDITORIAL

# ಬೆಲೆ ಏರಿಕೆ ಮಾಡುವುದೇ ರಾಜ್ಯ ಸರ್ಕಾರದ 6ನೇ 'ಗ್ಯಾರಂಟಿ' ಆಗದಿರಲಿ!

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ಬೆಲೆಯೇರಿಕೆಯನ್ನು ಅಸ್ತ್ರವನ್ನಾಗಿ ಬಳಸಿಕೊಳ್ಳುತ್ತಿದ್ದ, ಬೆಲೆಯೇರಿಕೆ ವಿರುದ್ಧ ಆಕ್ರೋಶ, ಪ್ರತಿಭಟನೆ ವ್ಯಕ್ತಪಡಿಸುತ್ತಿದ್ದ ಕಾಂಗ್ರೆಸ್ ಈಗ ರಾಜ್ಯ ಸರ್ಕಾರದಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಏರಿಕೆ ಮಾಡುವ ಮೂಲಕ ಸಾಮಾನ್ಯ ಜನರ ಜೇಬಿಗೆ ಕತ್ತರಿ ಹಾಕಿದೆ. ಮೊದಲೇ, ಅಗತ್ಯ ವಸ್ತುಗಳ ಬೆಲೆಯೇರಿಕೆಯಿಂದ ಬಳಲುತ್ತಿರುವ ರಾಜ್ಯದ ಜನರಿಗೆ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ತೆಗೆದುಕೊಂಡಿರುವ ನಿರ್ಧಾರವು ಗಾಯದ ಮೇಲೆ ಬರೆ ಎಳೆದಂತಾಗಿದೆ.

ಸಾರಿಗೆ ಬಸ್‌ಗಳಲ್ಲಿ ಪ್ರಯಾಣಿಸುವ ಮಹಿಳೆಯರಿಗೆ ಉಚಿತ ಟಿಕೆಟ್, ಮನೆಗಳಲ್ಲಿ 200 ಯೂನಿಟ್‌ಗಳವರೆಗೆ ವಿದ್ಯುತ್ ಫ್ರೀ, ಗೃಹಿಣಿಯರಿಗೆ ಮಾಸಿಕ 2 ಸಾವಿರ ರೂ. ಸಹಾಯಧನ ಸೇರಿ ಐದು ಉಚಿತ ಗ್ಯಾರಂಟಿಗಳನ್ನು ಘೋಷಿಸಿದ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವು ಅವುಗಳನ್ನು ಯಶಸ್ವಿಯಾಗಿಯೂ ಜಾರಿಗೆ ತಂದಿದೆ. ಯಶಸ್ವಿ ಜಾರಿಯಿಂದ ದೇಶಾದ್ಯಂತ ಖ್ಯಾತಿಯನ್ನೂ ಗಳಿಸಿದೆ. ಆದರೆ,


ಉದಯವಾಹಿನಿ ಚಿತ್ರ

ಲೋಕಸಭೆ ಚುನಾವಣೆ ಫಲಿತಾಂಶ ಪ್ರಕಟವಾದ ಕೆಲವೇ ದಿನಗಳಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರವು ನೇರವಾಗಿ ಜನರ ಜೇಬಿಗೆ ಕೈ ಹಾಕಿದೆ. ಒಂದು ಲೀಟರ್ ಪೆಟ್ರೋಲ್‌ಗೆ 3 ರೂ. ಹಾಗೂ ಡೀಸೆಲ್‌ಗೆ 3.5 ರೂ. ಏರಿಕೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿರುವುದು ಈಗ ತೀವ್ರ ಚರ್ಚೆ, ಟೀಕೆ, ಆಕ್ರೋಶಕ್ಕೆ ಕಾರಣವಾಗಿದೆ.

> **ಎಂದು ಸಚಿವ ಎಂ.ಬಿ.ಪಾಟೀಲ್ ಅವರು ಹೇಳಿರುವುದು ಯಾವ ರೀತಿಯಲ್ಲಿ ಸಮಂಜಸ೦ ಸಿದ್ದರಾಮಯ್ಯನವರೇ, ಗ್ಯಾರಂಟಿ ಯೋಜನೆಗಳಿಂದ ಬಡವರಿಗೆ ಅನುಕೂಲವಾಗಿದೆ. ಇದರಿಂದ ನಿಮ್ಮ ಸರ್ಕಾರಕ್ಕೆ ಹೆಸರೂ ಬಂದಿದೆ. ಲೋಕಸಭೆ ಚುನಾವಣೆ ಫಲಿತಾಂಶ ಪ್ರಕಟವಾಗಿ, ಕರ್ನಾಟಕದಲ್ಲಿ ನೀವು ನಿರೀಕ್ಷಿಸಿದಷ್ಟು ಸೀಟುಗಳು ಕಾಂಗ್ರೆಸ್‌ಗೆ ಬರದಿರುವ ಹೊತ್ತಿನಲ್ಲಿ ರಾಜ್ಯದ ಜನರ ಮೇಲೆ ಬೆಲೆಯೇರಿಕೆ ಅಸ್ತ್ರವನ್ನು ಬಳಸುತ್ತಿರುವುದು, 'ಹೊಳೆ ದಾಟಿದ ಮೇಲೆ ಅಂಬಿಗನ ಹಂಗೇಕೆ' ಎಂಬಂತಹ ವರ್ತನೆಯೇ೦ ಖಂಡಿತವಾಗಿಯೂ ಇದು ಜನ ವಿರೋಧಿ ಕ್ರಮ.**

ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ, ಅವುಗಳನ್ನು ಸಮರ್ಪಕವಾಗಿ ಜಾರಿಗೂ ತಂದ, ಬಡವರಿಗೆ ಅನುಕೂಲ ಮಾಡಿಕೊಟ್ಟ ಸಿದ್ದರಾಮಯ್ಯ ಅವರ ಸರ್ಕಾರವು ಮೊದಲಿಗೆ ಮದ್ಯದ ಬೆಲೆಯನ್ನು ಏರಿಕೆ ಮಾಡಿತು. ಮದ್ಯ ಪ್ರಿಯರ ಜೇಬಿಗೆ ಕತ್ತರಿ ಹಾಕಿ ಸಂಪನ್ಮೂಲವನ್ನು ಕ್ರೋಢೀಕರಣ ಮಾಡಿತು. ಒಂದೇ ವರ್ಷದಲ್ಲಿ ಎರಡೆರಡು ಬಾರಿ ಮದ್ಯದ ಬೆಲೆಯೇರಿಕೆ ಮಾಡಿತು. ಅಷ್ಟೇ ಅಲ್ಲ, ರಾಜ್ಯ ಸರ್ಕಾರವು ಈಗಾಗಲೇ ಮುದ್ರಾಂಕ ಶುಲ್ಕಗಳನ್ನು ಏರಿಸಿದೆ.

ದತ್ತು ಸ್ವೀಕಾರ ಪ್ರಮಾಣಪತ್ರ, ಅಫಿಡವಿಟ್, ಆಸ್ತಿ ಪರಭಾರೆ, ಪವರ್ ಆಫ್ ಅಟಾರ್ನಿ ಸೇರಿ ಯಾವುದೇ ದಾಖಲೆಯನ್ನು ಪಡೆಯಲು ನಿಗದಿಪಡಿಸಿದ್ದ ಶುಲ್ಕವನ್ನು ಎರಡು ಅಥವಾ ಅದಕ್ಕಿಂತ ಹೆಚ್ಚು ಪಟ್ಟು ಹೆಚ್ಚಿಸಲಾಗಿದೆ. ಇದು ಕೂಡ ಸಂಪನ್ಮೂಲ ಕ್ರೋಢೀಕರಣದ ಭಾಗವೇ ಆಗಿದೆ. ಮದ್ಯಪಾನ ಆರೋಗ್ಯಕ್ಕೆ ಹಾನಿಕರ, ಅದರ ಬೆಲೆ ಹೆಚ್ಚಿಸಿದರೂ ತೊಂದರೆ ಇಲ್ಲ ಎಂದು ಜನ ಸುಮ್ಮನಾದರು. ಮುದ್ರಾಂಕ ಶುಲ್ಕವು ದಿನನಿತ್ಯದ ಖರ್ಚು–ವೆಚ್ಚ ಅಲ್ಲದ ಕಾರಣ, ಅದರ ಬೆಲೆಯೇರಿಕೆಯನ್ನೂ ಜನ ಮನ್ನಿಸಿದರು. ಆದರೆ, ಈಗ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಏರಿಕೆ ಮಾಡಿರುವುದು ಅಕ್ಷಮ್ಯವಾಗಿದೆ.

ಪೆಟ್ರೋಲ್ ಬೆಲೆಯನ್ನು ಒಂದು ಲೀಟರ್‌ಗೆ 3 ರೂ. ಹಾಗೂ ಡೀಸೆಲ್ ಬೆಲೆಯನ್ನು ಲೀಟರ್‌ಗೆ 3.5 ರೂ. ಏರಿಕೆ ಮಾಡಿರುವುದು ಜನರ ಮೇಲೆ ನೇರವಾಗಿ, ನಿತ್ಯವೂ ಪರಿಣಾಮ ಬೀರುತ್ತದೆ. ಈಗಾಗಲೇ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯೇ ಜಾಸ್ತಿಯೇ ಇದ್ದ ಕಾರಣ ಮತ್ತೆ ಏರಿಕೆ ಮಾಡಿರುವುದು ಜನರ ಜೀವನದ ಮೇಲೆ ಪರಿಣಾಮ ಬೀರುತ್ತದೆ.

ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯೇರಿಕೆಯಿಂದ ಸಾಗಣೆ ವೆಚ್ಚ ಜಾಸ್ತಿಯಾಗುತ್ತದೆ. ಇದು ಅಗತ್ಯವಸ್ತುಗಳ ಬೆಲೆಯೇರಿಕೆಗೂ ಕಾರಣವಾಗುತ್ತದೆ. ಸಕಲ ರೀತಿಯಲ್ಲೂ ಜನರ ಜೇಬಿಗೆ ಭಾರವಾಗುತ್ತದೆ. ಪ್ರತಿದಿನವೂ ಬಡವರ ಹಣಕ್ಕೆ ಕತ್ತರಿ ಬೀಳುತ್ತದೆ. ಅಲ್ಲಿಗೆ ರಾಜ್ಯ ಸರ್ಕಾರವು ಒಂದು ಕೈಯಲ್ಲಿ ಕೊಟ್ಟು, ಮತ್ತೊಂದು ಕೈಯಿಂದ ಪಡೆದುಕೊಂಡಂತೆ ಆಗುತ್ತದೆ. ಆಗ ಗ್ಯಾರಂಟಿಗಳ ಆಶಯವೇ ಮಣ್ಣುಪಾಲಾದಂತಾಗುತ್ತದೆ.

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಏರಿಕೆ ಮಾಡಿದಾಗ, ಅಡುಗೆ ಅನಿಲ ಸಿಲಿಂಡರ್ ಬೆಲೆಯೂ ಜಾಸ್ತಿ ಮಾಡಿದಾಗ ಕಾಂಗ್ರೆಸ್ ಆಕ್ರೋಶ ವ್ಯಕ್ತಪಡಿಸಿದೆ. ಬೆಲೆಯೇರಿಕೆಯನ್ನು ಖಂಡಿಸಿ ಕಾಂಗ್ರೆಸ್‌ನಿಂದ ದೇಶಾದ್ಯಂತ ಪ್ರತಿಭಟನೆ ನಡೆಸಲಾಗಿದೆ. ಚುನಾವಣೆ ಸಂದರ್ಭದಲ್ಲಿಯೂ ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ 'ಬೆಲೆಯೇರಿಕೆ' ಅಸ್ತ್ರವನ್ನೇ ಬಳಸಿದೆ. ಹೀಗಿರುವಾಗ, ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರವೇ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಏರಿಕೆ ಮಾಡಿದರೆ ಹೇಗೆ೦ ''ಗ್ಯಾರಂಟಿ ಯೋಜನೆಗಳಿಗೆ ಹಣ ಬೇಕಲ್ಲ, ಅದಕ್ಕಾಗಿ ಬೆಲೆಯೇರಿಕೆ ಮಾಡಿದ್ದೇವೆ''

# ಪೆಟ್ರೋಲ್, ಡೀಸೆಲ್ ದರ ಏರಿಕೆ ಆದಾಯ ನಿರೀಕ್ಷೆ

■ ರಾಜ್ಯ ಸರ್ಕಾರ ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆಯನ್ನು ಹೆಚ್ಚಳ ■ ಸಿದ್ದರಾಮಯ್ಯ ವಿರುದ್ಧ ಜನಾಕ್ರೋಶ

• ಉದಯವಾಹಿನಿ, ಬೆಂಗಳೂರು

ಐದು ಗ್ಯಾರಂಟಿಗಳ ವೆಚ್ಚ, ಇತರ ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳಲು ಆರ್ಥಿಕ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ರಾಜ್ಯ ಸರ್ಕಾರ ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆಯನ್ನು ಹೆಚ್ಚಳ ಮಾಡಿದೆ. ಇದರಿಂದ ಡೀಸೆಲ್ ಬೆಲೆ ಪ್ರತಿ ಲೀಟರ್‌ಗೆ 3.50 ರೂ ಮತ್ತು ಪೆಟ್ರೋಲ್ ಬೆಲೆ ಪ್ರತಿ ಲೀ.ಗೆ 3.00 ರೂ ಹೆಚ್ಚಳವಾಗಿದೆ. ಈ ತೆರಿಗೆ ಹೆಚ್ಚಳದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಸರಕಾರ ಈ ವರ್ಷದಲ್ಲಿ ಸುಮಾರು 2,500–2,800 ಕೋಟಿ ರೂ.ಗಳ ಆದಾಯ ನಿರೀಕ್ಷಿಸಿದೆ.

ಲೋಕಸಭಾ ಚುನಾವಣೆ ಮುಗಿದ ನಂತರ ರಾಜ್ಯ ಸರ್ಕಾರ ಇಂಧನ ಬೆಲೆ ಹೆಚ್ಚಳದ ನಿರ್ಧಾರ ಕೈಗೊಂಡಿದೆ. ಲೋಕಸಭಾ ಚುನಾವಣೆಯಲ್ಲಿ 28 ರಲ್ಲಿ ಕಾಂಗ್ರೆಸ್ 9 ಸ್ಥಾನಗಳನ್ನು ಮಾತ್ರ ಗಳಿಸಲು ಶಕ್ತವಾಗಿತ್ತು.

ಐದು ಗ್ಯಾರಂಟಿಗಳ ಬೆಂಬಲದಿಂದ ಕನಿಷ್ಠ 13–15 ಸ್ಥಾನಗಳನ್ನು ಕಾಂಗ್ರೆಸ್ ನಿರೀಕ್ಷಿಸಿತ್ತು. ಆದರೆ ಫಲಿತಾಂಶ ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೆ ನಿರಾಶೆಯನ್ನುಂಟು ಮಾಡಿತ್ತು. ಹಣಕಾಸು ಇಲಾಖೆಯ ಜವಬ್ದಾರಿಯನ್ನೂ ಹೊತ್ತಿರುವ ಸಿಎಂ ಸಿದ್ದರಾಮಯ್ಯ ಕೆಲವು ದಿನಗಳ ಹಿಂದೆಯಷ್ಟೇ ರಾಜ್ಯದ ಆದಾಯ ಸಂಗ್ರಹ ಕುರಿತು ಅಧಿಕಾರಿಗಳ ಸಭೆ ನಡೆಸಿದ್ದರು. ಆದಾಯ ಸಂಗ್ರಹಕ್ಕೆ ಅನ್ಯ ಮಾರ್ಗಗಳಿಲ್ಲದ ಕಾರಣಕ್ಕೆ ಇಂಧನ ಬೆಲೆ ಹೆಚ್ಚಳದ ನಿರ್ಧಾರಕ್ಕೆ ಬರಲಾಗಿದೆ ಎಂದು ಆರ್ಥಿಕ ತಜ್ಞರು ಅಭಿಪ್ರಾಯಪಡುತ್ತಾರೆ.

2024–25ನೇ ಸಾಲಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಐದು ಗ್ಯಾರಂಟಿಗಳ ಅನುಷ್ಠಾನಕ್ಕೆ 52,009 ಕೋಟಿ ರೂಪಾಯಿ ತೆಗೆದಿರಿಸಿದೆ. ಕಳೆದ ವರ್ಷ ಈ ಯೋಜನೆಗಳಿಗೆ 37,325 ಕೋಟಿ ರೂ. ವೆಚ್ಚ ಮಾಡಿತ್ತು. ಗ್ಯಾರಂಟಿಗಳ ಜಾರಿಗೆ ಸಂಪನ್ಮೂಲಗಳ ಕ್ರೋಢೀಕರಣಕ್ಕೆ ಹರಸಾಹಸ ಪಡುತ್ತಿದೆ. ಜೊತೆಗೆ ಇತರ ಅಭಿವೃದ್ಧಿ ಯೋಜನೆಗಳಿಗೂ ಅನುದಾನದ ಅವಶ್ಯಕತೆ ಇದೆ. ಲೋಕಸಭಾ ಚುನಾವಣೆಯ ಹಿನ್ನಲೆಯಲ್ಲಿ ಮಾರ್ಚ್ 14 ರಿಂದ ಜೂನ್ 4 ರವರೆಗೆ ಮೂರು ತಿಂಗಳು ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು, ಈ ಆರ್ಥಿಕ ವರ್ಷದ ಮೊದಲ ತ್ರೈ ಮಾಸಿಕದಲ್ಲಿ ತೆರಿಗೆ ಸಂಗ್ರಹ ಕುಂಠಿತಗೊಂಡಿತ್ತು. ಈ ವಾರದ ಆರಂಭದಲ್ಲಿ ಹಣಕಾಸು ಇಲಾಖೆಯ ಪರಿಶಿಲನಾ ಸಭೆ ನಡೆಸಿದ್ದ ಸಿಎಂ ಸಿದ್ದರಾಮಯ್ಯ ಆದಾಯ ಸಂಗ್ರಹಕ್ಕೆ ಪರ್ಯಾಯ ಮೂಲಗಳನ್ನು ಹುಡುಕಲು ತಾಕೀತು ಮಾಡಿದ್ದರು



> **ಐದು ಗ್ಯಾರಂಟಿಗಳು ಶ್ರೀಸಾಮಾನ್ಯರಿಗೆ ಅನುಕೂಲ ಮತ್ತು ಸಹಾಯಕ ಮತ್ತು ಅನಿವಾರ್ಯ ಎನ್ನುವುದರಲ್ಲಿ ಎರಡು ಮಾತಿಲ್ಲ. ಆದರೆ ರಾಜ್ಯ ಸರ್ಕಾರದ ನಡೆ ಒಂದು ಕೈಯಲ್ಲಿ ಕೊಟ್ಟು ಮತ್ತೊಂದು ಕೈಯಲ್ಲಿ ಕಿತ್ತುಕೊಂಡ ಹಾಗಿದೆ ಎನ್ನಬಹುದು, ಇಲ್ಲವೇ ಉಳ್ಳವರಿಗೂ ಉಚಿತ ಕೊಡುಗೆಗಳನ್ನು ಘೋಷಿಸಿ ಬಡ, ಮಧ್ಯಮ ವರ್ಗದ ಜನರ ಮೇಲೆ ವೃಥಾ ತೆರಿಗೆಗಳನ್ನು ಹೆಚ್ಚಿಸುವ ಮೂಲಕ ಆರ್ಥಿಕವಾಗಿ ಬೀಳುವ ಹೊಡೆತ ತಪ್ಪಿಸಲು ಪ್ರಯತ್ನಿಸುತ್ತಿದೆ ಎನ್ನುವುದು ಜನಸಾಮಾನ್ಯರ ಅಭಿಪ್ರಾಯ.**

ಮತ್ತು ತೆರಿಗೆ ಸಂಗ್ರಹದ ಗುರಿಯನ್ನು ತಲುಪಬೇಕು ಎಂದು ಸೂಚಿಸಿದ್ದರು. ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಕಲ್ಯಾಣ ಕಾರ್ಯಕ್ರಮಗಳಿಗೆ 1,20,373 ಕೋಟಿ ರೂಗಳನ್ನು ನಿಗಧಿಪಡಿಸಲಾಗಿತ್ತು. ಇದರಲ್ಲಿ ಶೇ.43ರಷ್ಟು ಹಣ ಐದು ಗ್ಯಾರಂಟಿಗಳಪಾಲಾಗುತ್ತದೆ. ಈ ಹಿಂದೆ ನವೆಂಬರ್ 2021 ರಲ್ಲಿ ಇಂಧನ ಬೆಲೆ ಪರಿಷ್ಕರಣೆ ಮಾಡಲಾಗಿತ್ತು. ಆಗ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರ ಕೋವಿಡ್–19 ಹಿನ್ನಲೆಯಲ್ಲಿ ಪೆಟ್ರೋಲ್ ಬೆಲೆಯನ್ನು ಪ್ರತಿ ಲೀಟರ್‌ಗೆ 13.30 ರೂ. ಮತ್ತು ಡೀಸೆಲ್ ಬೆಲೆಯನ್ ಪ್ರತಿ ಲೀಟರ್‌ಗೆ 19.40 ರೂ. ಇಳಿಸಿತ್ತು.

**ಹೆಚ್ಚುವರಿ ತೆರಿಗೆ**

**ಸಾರ್ವಜನಿಕರ ಮೇಲೆ ಕಾಂಗ್ರೆಸ್ ಸರಕಾರ ಮಾಡಿದ ಮೊದಲ ಗದಾಪ್ರಹಾರ ಇದೇ ಮೊದಲಲ್ಲ. ಕಳೆದ ವರ್ಷ ಸೆಪ್ಟಂಬರ್‌ನಲ್ಲಿ ಆಸ್ತಿಗಳ ಮೇಲಿನ ಮಾರ್ಗಸೂಚಿ ದರವನ್ನು ರಾಜ್ಯಾದ್ಯಂತ ಶೇ.25–30ರಷ್ಟು ಹೆಚ್ಚಳ ಮಾಡಿತ್ತು. ಈ ಮೂಲಕ ಹೆಚ್ಚುವರಿಯಾಗಿ 2000 ಕೋಟಿ ರೂ.ಗಳ ಆದಾಯ ಸಂಗ್ರಹವಾಗಿತ್ತು. ದೇಶೀಯ ಮದ್ಯದ ಮೇಲೂ ರಾಜ್ಯ ಸರ್ಕಾರ ಹೆಚ್ಚುವರಿ ತೆರಿಗೆ ವಿಧಿಸಿತ್ತು. ವಾಣಿಜ್ಯ ವಾಹನಗಳ ನೋಂದಣಿ ಮೇಲೂ ಶೇ.3ರಷ್ಟು ಹೆಚ್ಚುವರಿ ತೆರಿಗೆ ವಿಧಿಸಿತ್ತು.**

# ಬೆಂಗಳೂರಲ್ಲಿ ಅನಧಿಕೃತ ಫ್ಲೆಕ್ಸ್, ಜಾಹೀರಾತು ಹಾವಳಿ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ ಈ ಮೊಲದೇ ತಿಳಿಸಿದಂತೆ ಅನಧಿಕೃತವಾಗಿ ಫ್ಲೆಕ್ಸ್/ಬ್ಯಾನರ್ ಅಳವಡಿಸುವವರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. ಅದರಂತೆ ಇದುವರೆಗೆ ಪೊಲೀಸ್ ಠಾಣೆಯಲ್ಲಿ 76 ದೂರುಗಳನ್ನು ನೀಡಿದ್ದು, 48 ಎಫ್‌ಐಆರ್ ದಾಖಲಿಸಲಾಗಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿಯಾವುದೇ ಅನಧಿಕೃತ ಜಾಹೀರಾತುಗಳು ಇರದಂತೆ ಉಪ ಮುಖ್ಯಮಂತ್ರಿಗಳು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ ಶಿವಕುಮಾರ್ ರವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದರು. ಅದರಂತೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

ಬಿಬಿಎಂಪಿ ಮುಖ್ಯ ಆಯುಕ್ತರು ಸೂಚನೆ ಮೇರೆಗೆ, ಕಂದಾಯ ವಿಭಾಗದ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್ ರವರು ಎಲ್ಲಾ 8 ವಲಯಗಳ ಅಧಿಕಾರಿಗಳ ಜೊತೆ ಪ್ರತಿನಿತ್ಯ ಪರಿಶೀಲನಾ ಸಭೆ ನಡೆಸುತ್ತಿದ್ದಾರೆ. ನಗರದಲ್ಲಿ ಎಲ್ಲಿಯಾದರೂ ಯಾವುದೇ ಅನಧಿಕೃತ ಜಾಹೀರಾತುಗಳು ಕಂಡರು ತೆರವು ಗೊಳಿಸುವಂತೆ ಸೂಚನೆ ನೀಡಿದ್ದಾರೆ.

ಬಿಬಿಎಂಪಿ ಮುಖ್ಯಸ್ಥರ ಸೂಚನೆ ಮೇರೆಗೆ ಸೂಚನೆ ನೀಡುವ ಜೊತೆಗೆ ಅನಧಿಕೃತವಾಗಿ ಫ್ಲೆಕ್ಸ್/ಬ್ಯಾನರ್ಸ್ ಹಾಕುವವರ ಮೇಲೆ ಎಫ್.ಐ.ಆರ್ ದಾಖಲಿಸಲಾಗುತ್ತಿದೆ. ಜೂನ್ 1ರವರೆಗೆ ಬೆಂಗಳೂರಿನಲ್ಲಿ ಬರೋಬ್ಬರಿ 3843 ಫ್ಲೆಕ್ಸ್, ಬ್ಯಾನರ್, ಎಲ್.ಇ.ಡಿ ಹಾಗೂ ಹೋರ್ಡಿಂಗ್ಸ್‌ಗಳನ್ನು ತೆರವುಗೊಳಿಸಲಾಗಿದೆ.

ಇನ್ನೂ ಪೊಲೀಸ್ ಠಾಣೆಯಲ್ಲಿ ಈ ಕುರಿತಂತೆ ಒಟ್ಟು 76 ದೂರುಗಳನ್ನು ಅಧಿಕಾರಿಗಳನ್ನು ದಾಖಲಿಸಿದ್ದಾರೆ. ಅದರಲ್ಲಿ ವ್ಯಕ್ತಿಗಳು ಸೇರಿದಂತೆ ಸಂಘ, ಸಂಸ್ಥೆ ಮೇಲೆ ಒಟ್ಟು 48 ಎಫ್.ಐ.ಆರ್ ದಾಖಲಿಸಲಾಗಿದೆ. ಜಾಹೀರಾತು ನಿಯಮ ಮೀರಿ ಫ್ಲೆಕ್ಸ್ ಹೋರ್ಡಿಂಗ್ ಹಾಕಿದ್ದಕ್ಕಾಗಿ 75,000 ರೂ. ದಂಡ ವಿಧಿಸಲಾಗಿದೆ ಎಂದು ಬಿಬಿಎಂಪಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಬೆಂಗಳೂರಿನಲ್ಲಿ ಹೊರಾಂಗಣ ಜಾಹೀರಾತು ಫಲಕ, ಸಾರ್ವಜನಿಕ ಸಂದೇಶದ ಉಪ ವಿಧಿಗಳು–2018ರಡಿ ಹಲವು ವಿಧದ ಜಾಹೀರಾತು ನಿಷೇಧಿಸಲಾಗಿದೆ. ಅದರ ಪ್ರಕಾರ, ವಸತಿ ಪ್ರದೇಶಗಳಲ್ಲಿ, ಖಾಸಗಿ ಸ್ವತ್ತುಗಳಲ್ಲಿ ಜಾಹೀರಾತು ಫಲಕಗಳನ್ನು ಅಳವಡಿಸಿದಂತೆ ಸೂಚನೆ ಇದೆ.

ಅದರೊಂದಿಗೆ ವಾಣಿಜ್ಯ ಜಾಹೀರಾತು, ಐಇಅ ಜಾಹೀರಾತುಗಳನ್ನು ಪ್ರದರ್ಶಿಸುವುದನ್ನು, ಸಾರ್ವಜನಿಕ ಮತ್ತು ವೈಯಕ್ತಿಕ ಜಾಹೀರಾತುಗಳು, ಶುಭಾಶಯಗಳು, ಸಭೆ ಸಮಾರಂಭಗಳು ಕುರಿತ ಜಾಹೀರಾತು / ಪ್ರಕಟಣೆಗಳ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್‌ಗಳು, ಭಿತ್ತಿಪತ್ರ, ಬಾವುಟಗಳು ಇತ್ಯಾದಿ ಅಳವಡಿಸುವುದನ್ನು ನಿಷೇದಿಸಲಾಗಿದೆ. ಆದ್ದರಿಂದ ಯಾರೊಬ್ಬರೂ ಕೂಡಾ ಅನಧಿಕೃತವಾಗಿ ಜಾಹೀರಾತು ಅಳವಡಿಸಬಾರದು ಎಂದು ಪಾಲಿಕೆ ಅಧಿಕಾರಿಗಳು ಮನವಿ ಮಾಡಿದ್ದಾರೆ.


ಉದಯವಾಹಿನಿ ಚಿತ್ರ

**ಡಿಕೆಶಿ ಕಟ್ಟುನಿಟ್ಟಿನ ನಿರ್ದೇಶನ**

**ನಿಮಗೆ ನಗರದಲ್ಲಿ ಅನಧಿಕೃತ ಜಾಹೀರಾತು ಫ್ಲೆಕ್ಸ್ ಕಂಡು ಬಂದಲ್ಲಿ ಈ ದೂರವಾಣಿ 1533ಗೆ ಕರೆ ಮಾಡಿ ಅಥವಾ ವಾಟ್ಸಪ್ ಸಂಖ್ಯೆ 9480683939ಗೆ ಛಾಯಾಚಿತ್ರದ ಸಮೇತ ದೂರು ನೀಡಬಹುದುದಾಗಿದೆ. ಅಥವಾ ವೀಡಿಯೋ ಮಾಡಿ ವಿಳಾಸ ಸಹಿತ ಕಳುಹಿಸಿದಲ್ಲಿ ಕೂಡಲೇ ತೆರವಿಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಬಿಬಿಎಂಪಿ ತಿಳಿಸಿದೆ.**

> **ಬೆಂಗಳೂರಿನ ರಸ್ತೆ ಬದಿ, ಪಾದಚಾರಿ ಮಾರ್ಗ, ಮೇಲುಸೇತುವೆ ಸೇರಿದಂತೆ ಇನ್ನಿತರೆ ಕಡೆ ಅನಧಿಕೃತವಾಗಿ ಫ್ಲೆಕ್ಸ್, ಬ್ಯಾನರ್, ಬಂಟಿಂಗ್ಸ್ ಅಳವಡಿಸುವುದರಿಂದ ನಾಗರೀಕರ ಸುಗಮ ಸಂಚಾರಕ್ಕೆ ಅಡ್ಡಿಯಾಗುವುದರ ಜೊತೆಗೆ ನಗರದ ಸೌಂದರ್ಯ ಹಾಳಾಗುತ್ತಿದೆ. ಅಲ್ಲದೆ ಪರಿಸರಕ್ಕೆ ಮಾರಕವಾಗಿರುತ್ತದೆ ಎಂದು ಬಿಬಿಎಂಪಿ ಹಿಂದಿನಿಂದ ತಿಳಿಸುತ್ತಲೇ ಬಂದಿದೆ.**

# ಸಾಹಿತ್ಯ ಕ್ಷೇತ್ರದಲ್ಲಿ ಕ್ರಾಂತಿ

## ಪರಿಸರವಾದಿ ಡಾ. ಪರಿಸರ ಮಂಜು ಅಭಿಪ್ರಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಪರಿಸರ ಉಳಿವಿಗೆ ಸಾಹಿತ್ಯ ಕ್ಷೇತ್ರದಲ್ಲಿ ಕ್ರಾಂತಿ ಮೂಡಿಸುವ ಕಾರ್ಯವನ್ನು ಇಂದಿನ ಸಾಹಿತಿಗಳು ಮಾಡಬೇಕಿದೆ ಎಂದು ಪರಿಸರ ಕಾರ್ಯಕ್ರಮದ ಅಧ್ಯಕ್ಷ ವಹಿಸಿದ ಪರಿಸರವಾದಿ ಡಾ. ಪರಿಸರ ಮಂಜು ಅಭಿಪ್ರಾಯಪಟ್ಟರು.

ನಗರದ ಮಲ್ಲೇಶ್ವರಂ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ಮಂದಗೆರೆ ಕಲೆ ಸಾಹಿತ್ಯ ಸಾಂಸ್ಕೃತಿಕ ವೇದಿಕೆ ಹಾಗೂ ಮಂದಗೆರೆ ಮಾಧ್ಯಮ ಸಂಪರ್ಕ ಕೇಂದ್ರ ಆಯೋಜಿಸಿದ ಪರಿಸರ ದಿನಾಚರಣೆಯಲ್ಲಿ ಗಿಡ ನೆಟ್ಟು ಮಾತನಾಡಿದರು.

ಕವಿ ಕುವೆಂಪು, ಪೂರ್ಣಚಂದ್ರ ತೇಜಸ್ವಿ ಸೇರಿದಂತೆ ಅನೇಕ ಕನ್ನಡಕವಿ ಸಾಹಿತಿಗಳು ಪರಿಸರದ ಬಗ್ಗೆ ವಿಶೇಷವಾಗಿ ಸಾಹಿತ್ಯದ ಮೂಲಕ, ಬರಹಗಳ ಮೂಲಕ ಜನಜಾಗೃತಿ ಮೂಡಿಸುವ ಪ್ರಯತ್ನ ಮಾಡಿದ್ದಾರೆ ಅವರು ನಮಗೆ ಸ್ಫೂರ್ತಿಯಾಗಲಿ ಎಂದರು. ಸಾಧ್ಯವಾದಷ್ಟು ಪ್ಲಾಸ್ಟಿಕ್ ವಸ್ತುಗಳ ಬಳಕೆ ನಿಲ್ಲಿಸಿ ಪರಿಸರ ಸ್ನೇಹಿ ವಸ್ತುಗಳನ್ನು ಬಳಕೆಮಾಡಿ, ಅರಣ್ಯ ಸಂರಕ್ಷಣೆಗೆ ಮೊದಲ ಆಧ್ಯತೆ ನೀಡಿ, ನಗರದ ವೃಕ್ಷ ರಕ್ಷಣೆ ಮಾಡುವಂತೆ ಸಲಹೆ ನೀಡಿದರು. ಇದೇ ವೇಳೆ ಪರಿಸರ ಜಾಗೃತಿ ವಿಚಾರ ಮಂಥರ, ಕವಿಗೋಷ್ಠಿ, ಪರಿಸರ ಜಾಗೃತಿ ಗೀತಾಗಾಯನ, ಪರಿಸರ ಪ್ರೇಮಿಗಳಿಗೆ ಪರಿಸರ ಮಿತ್ರ ಹಾಗೂ ಪರಿಸರ ಸಂರಕ್ಷಕ ಪ್ರಶಸ್ತಿ ಪ್ರಧಾನ ಮಾಡಿದರು. ಮಂದಗೆರೆ ಕಲೆ ಸಾಹಿತ್ಯ ಸಂಸ್ಕೃತಿ ವೇದಿಕೆಯ ಅಧ್ಯಕ್ಷ ಮಂದಗೆರೆ ರಾಮಕುಮಾರ್, ಸಾಹಿತಿ ಹಾಗೂ ಕವಿಗೋಷ್ಠಿಯ ಅಧ್ಯಕ್ಷ ವೆಂಕಟೇಶ್, ಶ್ರೀಮತಿ ಅನಿತಾ ಪಿ.ಕೆ, ಶ್ರೀಮತಿ ಲತಾಭಾರ್ಗವ್, ಗಾಯಕಿ ನಿಖಿತ, ಮಧುರ ಆಶೋಕ್ ಕುಮಾರ್, ಆಕಾಶ್, ಚೆನ್ನಕೇಶವ, ಮೋಕ್ಷಗುಂಡಂ, ಚಂಪಸ, ಕೃಷ್ಣ ಸೇರಿದಂತೆ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



# ಮಹಾಭಾರತ

## ಶಲ್ಯ ಪರ್ವ

• ಹಿಂದಿನ ಸಂಚಿಕೆಯಿಂದ

ಸಾಗರದಿಂದ ಮೇಲೆದ್ದು ಬರುವ ಸೂರ್ಯನಂತೆ ಸರೋವರದಿಂದ ಮೇಲೆದ್ದು ಬಂದ ದುರ್ಯೋಧನನು ಅಚ್ಚರಿಯೆಂಬಂತೆ ಲವಲವಿಕೆಯ ಸುಂದರಾಂಗನಾಗಿ ಕಂಡುಬಂದನು. ಯುಧಿಷ್ಠಿರನು ನಕ್ಕು,'' ನನ್ನ ಸೋದರ ಹೇಡಿಯಲ್ಲವೆಂದು ನನಗೆ ಹೆಮ್ಮೆ, ಸಂತೋಷ. ನೀನು ನಿಜವಾಗಿಯೂ ಕುರುವಂಶದ ಯೋಗ್ಯಪುತ್ರನಾಗಿರುವೆ; ಹೆಸರಿಗೆ ತಕ್ಕಂತೆ ಬಾಳಿರುವೆ. ಕ್ಷತ್ರಿಯನಾದ ನೀನು ಹೀಗೆ ವರ್ತಿಸುವುದೇ ವಿಹಿತ. ಏಕಾಂಗಿಯಾಗಿದ್ದರೂ, ನಮ್ಮೆಲ್ಲರೊಡನೆ ಹೋರಾಡಲು ಸಿದ್ಧನಾಗಿರುವುದು ಪ್ರಶಂಸನೀಯ. ಆದರೆ ನಾನು ಅದಕ್ಕೆ ಅವಕಾಶ ಕೊಡುವುದಿಲ್ಲ ನೀನು ನಮ್ಮಲ್ಲಿ ಒಬ್ಬರನ್ನು ಆರಿಸಿಕೊಂಡು, ನಿನಗಿಷ್ಟವಾದ ಆಯುಧವನ್ನು ಬಳಸಿ, ಹೋರಾಡಬಹುದು. ಗೆದ್ದರೆ ರಾಜ್ಯವನ್ನು ಅನುಭವಿಸಬಹುದು ಎಂದು ಲಹರಿಯಲ್ಲಿ ಹೇಳಿಬಿಟ್ಟನು. ಬೇಕಾದ ಆಯುಧದಿಂದ ಆಯ್ಕೆಯ ಒಬ್ಬನೊಡನೆ ಯುದ್ಧಮಾಡು ಎಂದದ್ದು ಮೂರ್ಖತನವಾಗಿತ್ತು. ಬಹಳಕಾಲ ಕೋಪವನ್ನಿಟ್ಟುಕೊಂಡಿರುವವನಲ್ಲ, ಯುಧಿಷ್ಠಿರ. ಅವನು ಮೊದಲಿನಂತಾಗಿಬಿಟ್ಟಿದ್ದನು. ದುರ್ಯೋಧನನೂ ರಾಜಕುಮಾರ; ಔನ್ನತ್ಯವನ್ನು ಶತ್ರುವಿನಲ್ಲಿಯೂ ಮೆಚ್ಚುವವನು. ಯುಧಿಷ್ಠಿರನ ಮಾತು ಅವನ ಔನ್ನತ್ಯವನ್ನೂ ಹೊರತಂದಿತು. '' ಈ ನಿನ್ನ ಮಾತು ನನಗೆ ಬಹುವಾಗಿ ಮೆಚ್ಚಿಕೆಯಾಯಿತು, ಯುಧಿಷ್ಠಿರ. ಬದುಕಿನ ಮುಸ್ಸಂಜೆಯ ಹೊತ್ತಿಗೆ ನಾವಿಬ್ಬರೂ ಗೆಳೆಯರಾಗಿಬಿಟ್ಟಿರುವೆವು ಎನ್ನಿಸುತ್ತಿದೆ ನೀನೆಂದಂತೆ ನಾನು ಆರಿಸಿಕೊಳ್ಳುವೆ. ಈ ಗದೆಗಿಂತ ನನಗೆ ಪ್ರಿಯವಾದದ್ದು ಬೇರೊಂದಿಲ್ಲ. ಎದುರಾಳಿಯಾಗಿ ನಿಮ್ಮಲ್ಲಿ ಯಾರು ಬೇಕಾದರೂ ಬನ್ನಿರಿ.ಒಬ್ಬೊಬ್ಬರನ್ನೇ ಕೊಂದುಹಾಕುತ್ತೇನೆ. ನಾನು ಸಿದ್ಧ ಎಂದನು.

ದುರ್ಯೋಧನ ಯುದ್ಧಕ್ಕೆ ಸಿದ್ಧನಾದನೆಂದು ಯುಧಿಷ್ಠಿರನಿಗೆ ಸಂತೋಷವಾಯಿತು. ಅವನು ''ನೀನು ನನ್ನ ಜೊತೆ ಯುದ್ಧಮಾಡು. ಈಗ ನೀನು ಸ್ವರ್ಗಕ್ಕೆ ಯೋಗ್ಯನಾಗಿರುವಂತೆ. ಕಾಣಿಸುತ್ತಿದೆ; ಅಲ್ಲಿಗೆ ಕಳುಹಿಸುತ್ತೇನೆ ಎಂದನು. ದೇಹದ ಅನೇಕ ಭಾಗಗಳಿಂದ ರಕ್ತ ಹರಿಯುತಿದ್ದರೂ, ಒಂದು ಕೈಯಲ್ಲಿ ಗದೆಯನ್ನು ಹಿಡಿದು, ಇನ್ನೊಂದು ಕೈಯನ್ನು ಎದೆಯಮೇಲಿಟ್ಟುಕೊಂಡು, ಕೆಂಪಾದ ಕಣ್ಣುಗಳಿಂದ ಹಸುಗಳ ಮುಂದೆ ನೋಡುತ್ತಿರುವ ಸಿಂಹದಂತೆ ಶೋಭಿಸುತ್ತಿದ್ದ ಆ ದುರ್ಯೋಧನನನ್ನು ಎಲ್ಲರೂ ಮೆಚ್ಚಿಕೊಂಡರು. ದೊಡ್ಡದಾಗಿ ಸಿಂಹನಾದ ಮಾಡಿ, '' ಬನ್ನಿ ಯಾರುಬೇಕಾದರೂ ಬನ್ನಿ,; ನಾನು ಸಿದ್ಧನಾಗಿದ್ದೇನೆ ಎಂದನು.

★ ★ ★ ★

ಇಷ್ಟುಹೊತ್ತು ಇದೆಲ್ಲವನ್ನೂ ಮೌನವಾಗಿ ನೋಡುತಿದ್ದ ಕೃಷ್ಣನು ಯುಧಿಷ್ಠಿರನ ಬಳಿ ಹೋಗಿ, ''ನಿನ್ನಂತಹ ಮೂರ್ಖನನ್ನು ನಾನು ಈವರೆಗೆ ನೋಡಲಿಲ್ಲ. ಅನೇಕ ವರ್ಷಗಳಿಂದಲೂ ದುರ್ಯೋಧನನು ಭೀಮನ ಪ್ರತಿಮೆಯೊಂದನ್ನಿಟ್ಟುಕೊಂಡು ಗದಾಯುದ್ಧವನ್ನು ಅಭ್ಯಾಸ ಮಾಡುತ್ತಿರುವನು.

**ಮುಂದುವರಿಯುವುದು...**

# ಬೆಂಗಳೂರು ಹುಬ್ಬಳ್ಳಿ ಪ್ರಯಾಣಿಕರಿಗೆ ಸಿಹಿ ಸುದ್ದಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಧಾನಿ ಬೆಂಗಳೂರಿನಿಂದ ಹುಬ್ಬಳ್ಳಿಗೆ ಪ್ರಯಾಣಿಸುವವರ ಸಂಖ್ಯೆ ಬಹಳಷ್ಟಿದೆ. ಪ್ಯಾಸೆಂಜರ್ ಟ್ರೈನ್, ಎಕ್ಸ್‌ಪ್ರೆಸ್ ಜೊತೆಗೆ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲುಗಳು ಇವೆ. ದಿನ ದಿನಕ್ಕೆ ಪ್ರಯಾಣಿಕರ ಸಂಖ್ಯೆ ಕೂಡ ಹೆಚ್ಚಾಗುತ್ತಿದ್ದು, ಮತ್ತಷ್ಟು ರೈಲುಗಳಿಗೆ ಬೇಡಿಕೆಯಿದೆ.

ಇದೇ ವೇಳೆ ನೈಋತ್ಯ ರೈಲ್ವೆಯು ಬೆಂಗಳೂರು ಮತ್ತು ಹುಬ್ಬಳ್ಳಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ವಿಸ್ತರಿಸಲು ಮುಂದಾಗಿದೆ. ನೈಋತ್ಯ ರೈಲ್ವೆ ರೈಲು ಸಂಖ್ಯೆ 07339/07340 ಹುಬ್ಬಳ್ಳಿ– ಕ್ರಾಂತಿವೀರಣ್ಣ ಸಂಗೊಳ್ಳಿ ರಾಯಣ್ಣ ಬೆಂಗಳೂರು ರೈಲು ನಿಲ್ದಾಣ– ಹುಬ್ಬಳ್ಳಿ ಸೂಪರ್ ಫಾಸ್ಟ್ ಎಕ್ಸ್‌ಪ್ರೆಸ್ ರೈಲಿನ ಸೇವೆಗಳನ್ನು ವರ್ಷಾಂತ್ಯದವರೆಗೆ ವಿಸ್ತರಿಸಲು ನಿರ್ಧರಿಸಿದೆ. ರೈಲು ಸಂಖ್ಯೆ 07339 ಎಸ್‌ಎಸ್‌ಎಸ್ ಹುಬ್ಬಳ್ಳಿಯಿಂದ ಕೆಎಸ್‌ಆರ್ ಬೆಂಗಳೂರು ಡೈಲಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ವಿಶೇಷವನ್ನು ಜುಲೈ 1 ರಿಂದ ಡಿ. 31, 2024 ರವರೆಗೆ ಹುಬ್ಬಳ್ಳಿ ಅಂತ್ಯದವರೆಗೆ ವಿಸ್ತರಿಸಲಾಗಿದೆ. ಅದೇ ರೀತಿ, (ಕೆಎಸ್‌ಆರ್) ಬೆಂಗಳೂರು ಎಸ್‌ಎಸ್‌ಎಸ್ ಹುಬ್ಬಳ್ಳಿ ಡೈಲಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ವಿಶೇಷ ರೈಲು (07340) ಸೇವೆಯನ್ನು ಜುಲೈ 2 ರಿಂದ ಜನವರಿ 1, 2025 ರವರೆಗೆ ಬೆಂಗಳೂರಿನ ಅಂತ್ಯದಿಂದ ವಿಸ್ತರಿಸಲಾಗಿದೆ ಎಂದು ನೈರುತ್ಯ ರೈಲ್ವೆ ಮಾಹಿತಿ ನೀಡಿದೆ. ಹುಬ್ಬಳ್ಳಿ– ಬೆಂಗಳೂರು ಸೂಪರ್ ಫಾಸ್ಟ್ ಎಕ್ಸ್‌ಪ್ರೆಸ್ ರೈಲನ್ನು ಆರಂಭದಲ್ಲಿ ಜೂನ್ 30 ರವರೆಗೆ ಮಾತ್ರ ಓಡಿಸಲು ಸೂಚಿಸಲಾಗಿತ್ತು. ಬಳಿಕ ನೈರುತ್ಯ ರೈಲ್ವೆ ರೈಲನ್ನು ಮತ್ತಷ್ಟು ದಿನಕ್ಕೆ ವಿಸ್ತರಿಸಿದೆ. ರೈಲು ಸಂಖ್ಯೆ 07339 ಎಸ್‌ಎಸ್‌ಎಸ್ ಹುಬ್ಬಳ್ಳಿಯಿಂದ ಕೆಎಸ್‌ಆರ್ ಬೆಂಗಳೂರು ಸೂಪರ್‌ಫಾಸ್ಟ್ ರೈಲು ಹುಬ್ಬಳ್ಳಿ ರೈಲು ನಿಲ್ದಾಣದಿಂದ ರಾತ್ರಿ 11:15 ಕ್ಕೆ ಹೊರಟು ಬೆಳಗ್ಗೆ 6:50 ಕ್ಕೆ ಕೆಎಸ್‌ಆರ್ ಬೆಂಗಳೂರು ರೈಲು ನಿಲ್ದಾಣವನ್ನು ತಲುಪುತ್ತದೆ. ಈ ಮಾರ್ಗದಲ್ಲಿ, ರೈಲು ಹಾವೇರಿ, ರಾಣೆಬೆನ್ನೂರು, ದಾವಣಗೆರೆ, ಬೀರೂರು, ಅರಸೀಕೆರೆ, ತುಮಕೂರು, ಯಶವಂತಪುರ, ಬೆಂಗಳೂರು ರೈಲು ನಿಲ್ದಾಣಗಳಲ್ಲಿ ನಿಲ್ಲುತ್ತದೆ. ರೈಲು ಸಂಖ್ಯೆ 07340 ಬೆಂಗಳೂರು ಮೆಜೆಸ್ಟಿಕ್‌ನಿಂದ ಖಖಖ ಹುಬ್ಬಳ್ಳಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲು ಬೆಂಗಳೂರಿನಿಂದ ರಾತ್ರಿ 11:55 ಕ್ಕೆ ಹೊರಟು ಮರುದಿನ ಬೆಳಗ್ಗೆ 7:30 ಕ್ಕೆ ಹುಬ್ಬಳ್ಳಿ ರೈಲು ನಿಲ್ದಾಣವನ್ನು ತಲುಪುತ್ತದೆ. ರೈಲು 1 ಎಸಿ 2–ಟೈರ್ ಕೋಚ್, 1 ಎಸಿ 3–ಟೈರ್ ಕೋಚ್, 11 ಸ್ಲೀಪರ್ ಕೋಚ್‌ಗಳು, 5 ಸೆಕೆಂಡ್ ಕ್ಲಾಸ್ ಕೋಚ್‌ಗಳು ಮತ್ತು 2 ಲಗೇಜ್–ಕಮ್–ಬ್ರೇಕ್‌ವಾನ್ ವಿಕಲಾಂಗ ಸ್ನೇಹಿ ಕಂಪಾರ್ಟ್‌ಮೆಂಟ್‌ಗಳನ್ನು ಒಳಗೊಂಡಿರುವ 20 ಕೋಚ್‌ಗಳ ಸಂಯೋಜನೆಯನ್ನು ಹೊಂದಿದೆ.

# ಮುಂಗಾರು ಮಳೆ; ಪ್ರವಾಹ ನಿರ್ವಹಣೆಗೆ ಜಿಲ್ಲಾಡಳಿತಗಳಿಗೆ ಖಡಕ್ ಸೂಚನೆ

■ ಮಳೆ ಜೋರಾಗಿ ಸುರಿ ಪ್ರವಾಹ ನಿರ್ವಹಣೆಗೆ ಜಿಲ್ಲಾಡಳಿತಗಳು ಅಗತ್ಯ ಸಿದ್ಧತೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ನೈಋತ್ಯ ಮುಂಗಾರು ಮಳೆ 2024 ಆರಂಭವಾಗಿದೆ. ಅಬ್ಬರದಿಂದ ಮುಂಗಾರು ಮಳೆ ಆರಂಭಗೊಳ್ಳದಿದ್ದರೂ ಸಹ ಮುಂದಿನ ದಿನಗಳಲ್ಲಿ ಮಳೆ ಜೋರಾಗಿ ಸುರಿಯುವ ಮುನ್ಸೂಚನೆ ಸಿಕ್ಕಿದೆ.ಮಳೆ, ಪ್ರವಾಹ, ಭೂ ಕುಸಿತ ಮುಂತಾದವುಗಳು ಕಂದಾಯ ಇಲಾಖೆಯ ವ್ಯಾಪ್ತಿಗೆ ಒಳಪಡುತ್ತದೆ.

ಆದ್ದರಿಂದ ಸಂಭವನೀಯ ಪ್ರವಾಹ ನಿರ್ವಹಣೆಗೆ ಎಲ್ಲಾ ಜಿಲ್ಲಾಡಳಿತಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ನದಿಯ ಒಳಹರಿವು ಹಾಗೂ ಮಳೆಯ ಪ್ರಮಾಣದ ಮೇಲೆ ನಿರಂತರ ನಿಗಾ ವಹಿಸುವ ಮೂಲಕ ಜನ ಹಾಗೂ ಜಾನುವಾರುಗಳ ಜೀವ ಹಾನಿ ತಡೆಯಲು ಮುನ್ನೆಚ್ಚರಿಕೆ ವಹಿಸಬೇಕು ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಖಡಕ್ ಸೂಚನೆ ನೀಡಿದರು. ಸಂಭವನೀಯ ಪ್ರವಾಹ ನಿರ್ವಹಣೆ, ನೈರುತ್ಯ ಮುಂಗಾರು ಸಿದ್ಧತೆ ಕುರಿತು ಅವರು ಬೆಳಗಾವಿ ವಿಭಾಗದ ಜಿಲ್ಲಾಧಿಕಾರಿಗಳು ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅನಾಹುತ ಸಂಭವಿಸಿದಾಗ ರಕ್ಷಣಾ ತಂಡಗಳು ಯಾವ ರೀತಿ ಕಾರ್ಯಾಚರಣೆ ಕೈಗೊಳ್ಳಬೇಕು೦ ಎಂಬುದರ ಕುರಿತು ಕಂದಾಯ, ಪೊಲೀಸ್, ಅಗ್ನಿಶಾಮಕ ಸೇರಿದಂತೆ ಸಂಬಂಧಿಸಿದ ಇಲಾಖೆಗಳು ಮುಂಚಿತವಾಗಿಯೇ ಸಮನ್ವಯತೆ ಸಾಧಿಸಬೇಕು ಎಂದು ಹೇಳಿದರು.

**ಜಿಲ್ಲಾಡಳಿತಗಳಿಗೆ ನಿರ್ದೇಶನಗಳು:** ಜಿಲ್ಲಾ ಮಟ್ಟದಲ್ಲಿ ಮಾತ್ರವಲ್ಲದೇ ಪ್ರವಾಹಬಾಧಿತಗೊಳ್ಳಲಿರುವ ತಾಲ್ಲೂಕುಗಳ ಮಟ್ಟದಲ್ಲೂ ಇಂತಹ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಪ್ರವಾಹ ಮಾತ್ರವಲ್ಲದೇ ಮನೆಕುಸಿತ ಮತ್ತಿತರ ತುರ್ತು ಸಂದರ್ಭಗಳಲ್ಲಿ ತುರ್ತು ಕ್ರಮಕ್ಕೆ ರಕ್ಷಣಾ ವ್ಯವಸ್ಥೆ ಮತ್ತು ತಂಡಗಳು ಸಜ್ಜಾಗಿರಬೇಕು ಎಂದು ಕೃಷ್ಣ ಭೈರೇಗೌಡ ತಿಳಿಸಿದರು.

ಪ್ರವಾಹ ನಿರ್ವಹಣೆ ಕುರಿತು ಜಿಲ್ಲಾ, ತಾಲ್ಲೂಕು ಹಾಗೂ ಪ್ರವಾಹದಿಂದ ಬಾಧಿತಗೊಳ್ಳಲಿರುವ ಗ್ರಾಮಗಳ ಮಟ್ಟದಲ್ಲಿ ಅಣುಕು ಕಾರ್ಯಾಚರಣೆ ನಡೆಸಬೇಕು. ಆಗಾಗ ಸಭೆ ನಡೆಸುವ ಮೂಲಕ ತಂಡಗಳನ್ನು ಸದಾ ಜಾಗೃತವಾಗಿಡಬೇಕು. ಜಿಲ್ಲಾ ಹಂತದಲ್ಲಿರುವ ಸಮಿತಿಗಳನ್ನು ಪ್ರವಾಹಬಾಧಿತಗೊಳ್ಳಲಿರುವ ತಾಲ್ಲೂಕು ಮತ್ತು ಪಂಚಾಯಿತಿ ಮಟ್ಟಕ್ಕೂ ವಿಸ್ತರಿಸಬೇಕು ಎಂದು ಸಚಿವರು ಸೂಚನೆ ನೀಡಿದರು.

ಬೆಳಗಾವಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಮಾತನಾಡಿ, ಕೊಯ್ನಾದಿಂದ ಬಿಡುಗಡೆ ಮಾಡಲಾದ 3.44 ಲಕ್ಷ ಕ್ಯೂಸೆಕ್ ನೀರು ಹಾಗೂ ಮಳೆಯಿಂದ ಹಿಂದೆ ಪ್ರವಾಹ ಉಂಟಾಗಿತ್ತು. ಆದ್ದರಿಂದ ನೀರು ಬಿಡುಗಡೆ ಕುರಿತು ಮಹಾರಾಷ್ಟ್ರದ ಜತೆ ಸಮನ್ವಯ ಸಾಧಿಸಿಕೊಂಡು ಉಭಯ ರಾಜ್ಯಗಳ ಉನ್ನತಮಟ್ಟದ ಸಮಿತಿ ರಚಿಸಿಕೊಂಡು ಜಲಾಶಯಗಳ ನೀರಿನ ಮಟ್ಟ ನಿರ್ವಹಣೆ ಮಾಡುವುದರಿಂದ ಪ್ರವಾಹ ಪರಿಸ್ಥಿತಿ ತಡೆಗಟ್ಟಬಹುದು ಎಂದು ತಿಳಿಸಿದರು.

ಧಾರವಾಡ ಜಿಲ್ಲಾಧಿಕಾರಿ ದಿವ್ಯಪ್ರಭು ಮಾತನಾಡಿ, ಧಾರವಾಡ ಜಿಲ್ಲೆಯಲ್ಲಿ ಬೆಣ್ಣಿಹಳ್ಳ ಹಾಗೂ ತುಪ್ಪರಿಹಳ್ಳದ ವ್ಯಾಪ್ತಿಯಲ್ಲಿ ಮಾತ್ರ ಪ್ರವಾಹ ಪರಿಸ್ಥಿತಿ ಉಂಟಾಗುತ್ತದೆ. ಪ್ರವಾಹದಿಂದ ಬಾಧಿತಗೊಳ್ಳಲಿರುವ ಪ್ರದೇಶ ಹಾಗೂ ಜನಸಂಖ್ಯೆಯನ್ನು ಈಗಾಗಲೇ ಸಮೀಕ್ಷೆ ಮೂಲಕ ಗುರುತಿಸಲಾಗಿದೆ. ಗರಿಷ್ಠ ಪ್ರವಾಹ ಉಂಟಾದರೆ 85 ಸಾವಿರ ಹೆಕ್ಟೇರ್ ಕೃಷಿ ಜಮೀನಿನಲ್ಲಿ ನೀರು ನಿಲ್ಲಬಹುದು. ಈಎಲ್ಲಾ ಸಾಧ್ಯತೆಗಳನ್ನು ಗಮನಿಸಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ವಿವರಣೆ ನೀಡಿದರು.


ಉದಯವಾಹಿನಿ ಚಿತ್ರ

**ಜೀವಹಾನಿ ತಡೆಯಲು ಮುನ್ನೆಚ್ಚರಿಕೆ**

**ಹವಾಮಾನ ಇಲಾಖೆ ಮಾಹಿತಿ ಪ್ರಕಾರ ಮುಂದಿನ ದಿನಗಳಲ್ಲಿ ಮಳೆ ಹೆಚ್ಚಳವಾಗುವ ಸಾಧ್ಯತೆ ಇದೆ. ತುಪ್ಪರಿಹಳ್ಳ ಮತ್ತು ಬೆಣ್ಣಿಹಳ್ಳ ಪ್ರವಾಹ ಉಂಟುಮಾಡಬಹುದು. ತಹಶೀಲ್ದಾರ್ ಗ್ರಾಮಗಳಿಗೆ ಭೇಟಿ ನೀಡಿ, ಪ್ರವಾಹದಿಂದ ಹಾನಿ ಆಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಲಾಗಿದೆ ಎಂದು ಹೇಳಿದರು.**

> **ಧಾರವಾಡ ಜಿಲ್ಲೆಯ ಎರಡು ಪ್ರಮುಖ ಹಳ್ಳಗಳಾದ ತುಪ್ಪರಿಹಳ್ಳ ಮತ್ತು ಬೆಣ್ಣಿಹಳ್ಳ ಹರಿಯುವ ಮಾರ್ಗದ ಗ್ರಾಮಗಳಲ್ಲಿ ಪ್ರವಾಹದ ಕುರಿತು ಜಾಗೃತಿ ಮೂಡಿಸಲಾಗುತ್ತದೆ ಮತ್ತು ಪ್ರವಾಹ ಉಂಟಾದಲ್ಲಿ ಜನ, ಜಾನುವಾರು ರಕ್ಷಣೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.**

**ಬಾಗಲಕೋಟೆ ಜಿಲ್ಲಾಧಿಕಾರಿ ಜಾನಕಿ, ಉತ್ತರ ಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಹಾಗೂ ಹಾವೇರಿ ಜಿಲ್ಲಾಧಿಕಾರಿಗಳು ಸಂಭವನೀಯ ಪ್ರವಾಹ ನಿರ್ವಹಣೆಗೆ ಸಂಬಂಧಿಸಿದಂತೆ ಕೈಗೊಳ್ಳಲಾಗಿರುವ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಸಭೆಯಲ್ಲಿ ಸಚಿವರಿಗೆ ವಿವರಿಸಿದರು.**

# ಲಿಖಿತವಾಗಿ, ಮೌಖಿಕವಾಗಿ ಮನವಿ ಮಾಡಿದರು ಪ್ರಯೋಜನವಾಗಿಲ್ಲ

## ಪಟೇಲ ಕಾಲೋನಿ ಮಳೆಯ ನೀರಿನಿಂದ ಜಲಾವೃತ್ತ ಕೆರೆಯಾಗಿ ಪರಿವರ್ತನೆ: ಅಧಿಕಾರಿಗಳು ಮೌನ, ಜನರು ಆಕ್ರೋಶ

• ಮಹೇಬೂಬಶಾ ಅಣವಾರ
• ಉದಯವಾಹಿನಿ ವಿಶೇಷ ವರದಿ

**ಚಿಂಚೋಳಿ:** ಪಟ್ಟಣದ ಚಂದಾಪೂರದ ಎಸ್.ಬಿ.ಐ ಬ್ಯಾಂಕ್ ಹಿಂದುಗಡೆ ಇರುವ ಪಟೇಲ್ ಕಾಲೋನಿಯ ಓಣಿಯು ಗುರುವಾರ ರಾತ್ರಿ ಸುರಿದ ಮಳೆಯಿಂದ ಸಂಪೂರ್ಣವಾಗಿ ಜಲಾವೃತ್ತ ಕೆರೆಯಾಗಿ ಪರಿವರ್ತನೆಯಾಗಿ ಅನೇಕ ಮನೆಗಳಲ್ಲಿ ನೀರು ನುಗ್ಗಿ ಧಾವಸ ಧಾನ್ಯಗಳು ಹಾಳಾಗುತ್ತಿದ್ದು ಹಾವು ಚೇಳು ನೀರಿನಿಂದ ಜನರು ಭಯದಲ್ಲಿ ಜೀವನ ಸಾಧಿಸುತ್ತಿದ್ದಾರೆ ಆದರೆ ಸಂಬಂಧಿಸಿದ ಅಧಿಕಾರಿಗಳು ಮೌನವಹಿಸಿದ್ದಾರೆ.

ಮಳೆಗಾಲ ಪ್ರಾರಂಭವಾದರೆ ಸಾಕು ಸಂಪೂರ್ಣವಾಗಿ ಪಟೇಲ ಕಾಲೋನಿ ಜಲಾವೃತ್ತವಾಗಿ ಕೆರೆಯಾಗಿ ಪರಿವರ್ತನೆಯಾಗಿ ಅನೇಕ ಬಡ ಕುಟುಂಬಗಳ ಮನೆಗಳಲ್ಲಿ ನೀರು ನುಗ್ಗಿ ಧಾವಸ ಧಾನ್ಯಗಳು ಹಾಳಾಗುತ್ತಿದ್ದು ನೀರಿನ ಜೋತೆ ಹಾವು ಚೇಳು ಬರುತ್ತಿದ್ದು ಸಾರ್ವಜನಿಕರು ಭಯದಲ್ಲಿ ಜೀವನ ಸಾಧಿಸುತ್ತಿದ್ದಾರೆ. ಕಳೆದ ಐದಾರು ವರ್ಷಗಳಿಂದ ಅನೇಕ ಬಾರಿ ಸಂಬಂಧಿಸಿದ ತಹಸೀಲ್ದಾರ್ ಹಾಗೂ ಪುರಸಭೆ ಅಧಿಕಾರಿಗಳಿಗೆ ಲಿಖಿತವಾಗಿ ಮೌಖಿಕವಾಗಿ ಮನವಿ ಮಾಡಿದರು ಪ್ರಯೋಜನವಾಗಿಲ್ಲ ಎಂದು ದೂರಿದರು. ಚಂದಾಪೂರ ಪಟ್ಟಣದ ಮೇಲ್ಗಡೆವಿರುವ ಗುಡ್ಡಗಾಡು ಪ್ರದೇಶದಿಂದ ಮಳೆಯ ನೀರು ಕಾಲೋನಿಯಲ್ಲಿ ಸಂಚರಿಸಿ ಜಲಾವೃತ್ತವಾಗುತ್ತೆ ನೀರು ಹೊರಗಡೆ ಹೋಗಲು ಅಬಕಾರಿ ಇಲಾಖೆ ಕಛೇರಿ ಹತ್ತಿರ ಒಂದೇ ದಾರಿಯಿರುವುದರಿಂದ ನೀರು ಹೋಗಲು ಆಗುತ್ತಿಲ್ಲಾ ಇದಕ್ಕೆ ಮತ್ತೊಂದು ನೂತನ ತಹಸೀಲ್ ಕಛೇರಿಯ ಹತ್ತಿರ ನೀರು ಹೋಗಲು ದಾರಿ ಮಾಡಿದರೆ ನೀರು ನಿಲ್ಲುವುದಿಲ್ಲ ಹೋಗುತ್ತದೆ ಒಂದೇ ದಾರಿಯಿರುವುದರಿಂದ ನೀರಿನ ರಭಸಕ್ಕೆ ಹಿಂದಕ್ಕೆ ನೀರು ಬಂದು ಮನೆಯಲ್ಲಿ ಹೋಗುತ್ತಿವೆ ಇದರಕ್ಕೆ ಮೇಲಾಧಿಕಾರಿಗಳು ಗಮನಹರಿಸಿ ನೀರು ಹೊರಗಡೆ ಹೋಗುವಂತೆ ಮಾಡಬೇಕು ಹೀಗೆ ಸುಮ್ಮನೆ ಕುಳಿತರೆ ಬರುವ ದಿನಗಳಲ್ಲಿ ಮನೆಗಳು ಸಹ ಕುಸಿಯುವ ಸ್ಥಿತಿಗೆ ಬರುವುದರಲ್ಲಿ ಯಾವುದೇ ಸಂದೇಹವಿಲ್ಲ.

ಪಟೇಲ ಕಾಲೋನಿಯು ಪಟ್ಟಣದ ಪ್ರಮುಖ ಕಾಲೋನಿಯಾಗಿದ್ದು ಆದರೆ ಅಧಿಕಾರಿಗಳ ಮತ್ತು ಜನಪ್ರತಿನಿಧಿಗಳ ಶಾಸಕರ ನಿರ್ಲಕ್ಷ್ಯ ಧೋರಣೆಯಿಂದ ಪಟೇಲ ಕಾಲೋನಿಯ ಸಾರ್ವಜನಿಕರು ಬಹಳಷ್ಟು ತೊಂದರೆ ಅನುಭವಿಸುತ್ತಿದ್ದಾರೆ, ಮಳೆ ನೀರು ನಿಂತ್ತಿರುವುದರಿಂದ ಕಾಲರಾ, ಡೆಂಗ್ಯೂ, ಮಲೇರಿಯಾ ರೋಗಗಳು ಹರಡುವ ಭೀತಿಯಲ್ಲಿ ಜನರು ಜೀವನ ಕಳೆಯುತ್ತಿದ್ದಾರೆ ಇಗಲಾದರೂ ಅಧಿಕಾರಿಗಳು ಜನಪ್ರತಿನಿಧಿಗಳು ಶಾಸಕರು ಏಚ್ಚೇತ್ತುಕೊಂಡು ವಿಶೇಷ ಅನುದಾನ ಮೀಸಲಿಟ್ಟು ಪಟೇಲ್ ಕಾಲೋನಿಯ ಸಮಸ್ಯೆಗಳು ಪರಿಹರಿಸಬೇಕು ಎಂಬುವುದೆ ಜನರು ಅಭಿಪ್ರಾಯವಾಗಿದೆ.


ಉದಯವಾಹಿನಿ ಚಿತ್ರ

> ಈಗಾಗಲೇ ಪಟೇಲ ಕಾಲೋನಿ ಸಮಸ್ಯೆ ಗಮನಕ್ಕೆ ಬಂದಿದೆ ಮತ್ತೊಮ್ಮೆ ಪಟೇಲ ಕಾಲೋನಿಗೆ ತೆರಳಿ ಪರಿಶೀಲಿಸಿ ಮಳೆಯ ನಿಂತ್ತಿರುವ ನೀರು ಹೊರಗಡೆ ಹಾಕುವ ಕೆಲಸ ತಾತ್ಕಾಲಿಕ ಮಾಡುತ್ತೇವೆ, ಶಾಶ್ವತವಾಗಿ ಸಮಸ್ಯೆ ಬಗೆಹರಿಸಲು ಪರಿಣಿತ ಇಂಜಿನಿಯರಿಂಗ್ ತಂಡವನ್ನು ಕರೆಸಿ ನೀರು ನಿಲ್ಲದಂತೆ ಕ್ರಮಕೈಗೊಳ್ಳಲಾಗುವುದು. ಪಟೇಲ ಕಾಲೋನಿ ತೆಗ್ಗು ಪ್ರದೇಶವಿದ್ದು ಮೇಲಿನ ಗುಡ್ಡಗಾಡು ಪ್ರದೇಶದ ಮಳೆಯ ನೀರು ಬಂದು ಕಾಲೋನಿಯ ತುಂಬಾ ಹರಡುತ್ತವೆ ಮನೆಗಳು ಸಹ ಕೆಳಗಡೆವಿರುವುದರಿಂದ ಮನೆಯಲ್ಲಿ ನೀರು ನುಗ್ಗುತ್ತಿವೆ, ಗಮನಕ್ಕೆ ಬಂದಿದೆ ತಕ್ಷಣವೇ ಕಾಲೋನಿಗೆ ತೆರಳಿ ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಮಾಡುತ್ತೇನೆ.
>
> – ಕಾಶಿನಾಥ ಧನ್ನಿ, ಪುರಸಭೆ ಮುಖ್ಯಾಧಿಕಾರಿ ಚಿಂಚೋಳಿ.

> ಪಟೇಲ್ ಕಾಲೋನಿಯಲ್ಲಿ ಮಳೆಯ ನೀರು ಕೆರೆಯಂತೆ ನಿಲ್ಲುತ್ತಿರುವುದರಿಂದ ಗಬ್ಬುವಾಸನೆ ಬರುತ್ತಿದ್ದು ಕಾಲರಾ, ಮಲೇರಿಯಾ, ಡೆಂಗ್ಯೂ ಅಂಥಹ ರೋಗಗಳು ಬರುವ ಭೀತಿಯಲ್ಲಿ ಜನರು ಬದುಕುತ್ತಿದ್ದಾರೆ. ನೀರು ನಿಲ್ಲುತ್ತಿರುವುದರಿಂದ ಮನೆಗಳು ಸಹ ಕುಸಿದು ಬೀಳುವ ಸಾಧ್ಯತೆ ಇರುತ್ತದೆ, ಅದಕ್ಕಾಗಿ ಅಧಿಕಾರಿಗಳು ಜನಪ್ರತಿನಿಧಿಗಳು ಶಾಸಕರು ಏಚ್ಚೇತ್ತುಕೊಂಡು ಯಾವುದೇ ಅನಾಹುತ ಆಗುವ ಮುಂಚೆ ಅಧಿಕಾರಿಗಳ ಸಭೆಯನ್ನು ಶಾಸಕರು ನಡೆಸಿ ಈ ಸಮಸ್ಯೆಗೆ ಮುಕ್ತಿ ಸಿಗುವಂತೆ ಮಾಡಬೇಕು ಇಲ್ಲಾದಿದ್ದರೆ ಶಾಸಕರಿಗೆ ಮತ್ತು ಪುರಸಭೆ ಕಛೇರಿಗೆ ಮುತ್ತಿಗೆ ಹಾಕುತ್ತೇವೆ.
>
> – ಶರಣಪ್ಪಾ ಮಾಳಗಿ, ಸಮಾಜ ಸೇವಕ

> ಚಂದಾಪೂರದ ಎಸ್.ಬಿ.ಐ ಬ್ಯಾಂಕ್ ಹಿಂದಿರುವ ಪಟೇಲ ಕಾಲೋನಿಯ ಓಣಿವು ಮಳೆಗಾಲ ಬಂದರೆ ಸಾಕು ಮಳೆಯ ನೀರಿನಿಂದ ತುಂಬಿ ಜಲಾವೃತ್ತವಾಗಿ ಕೆರೆಯಂತೆ ನಿರ್ಮಾಣವಾಗುತ್ತದೆ ನೀರು ಹೋಗಲು ದಾರಿಯಿಲ್ಲದೆ ಮನೆಯಲ್ಲಿ ನುಗ್ಗುತ್ತಿವೆ ಅನೇಕರ ಮನೆಯಲ್ಲಿನ ಧಾವಸ ಧಾನ್ಯಗಳನ್ನು ನೀರಿನ ಪಾಲಾಗಿವೆ, ಗುಡ್ಡಗಾಡು ಪ್ರದೇಶದಿಂದ ಮಳೆಯ ನೀರು ಬರುತ್ತವೆ ಇದರಿಂದ ಸಾರ್ವಜನಿಕರು ನಾವೆಲ್ಲರೂ ಬಹಳಷ್ಟು ಕಷ್ಟದಿಂದ ಜೀವನ ಸಾಧಿಸುತ್ತಿದ್ದೇವೆ ನೀರಿನ ಜೋತೆ ಹಾವು ಚೇಳಿನ ಕಾಟವಾಗಿದೆ ಇದರಿಂದ ಜನರು ಭಯದಲ್ಲಿ ಜೀವನ ಸಾಧಿಸುತ್ತಿದ್ದೇವೆ, ಪಟೇಲ ಕಾಲೋನಿಯಿಂದ ನೂತನ ತಹಸೀಲ್ ಕಛೇರಿ ಪಕ್ಕದಿಂದ ಚಿಂಚೋಳಿ–ತಾಂಡೂರ ಡಾಂಬರಿಕರಣ ರಸ್ತೆಯಿಂದ ನೀರು ಸಾಗುವಂತೆ ಮಾಡಿದರೆ ಪಟೇಲ ಕಾಲೋನಿಯಲ್ಲಿ ನೀರು ಬರುವುದಿಲ್ಲ. ಓಣಿಯ ಸಮಸ್ಯೆ ಬಗ್ಗೆ ಅನೇಕ ಬಾರಿ ತಹಶೀಲ್ದಾರ್ ಹಾಗೂ ಮುಖ್ಯಾಧಿಕಾರಿಗೆ ಮೌಖಿಕ, ಲಿಖಿತ ರೂಪದಲ್ಲಿ ಹೇಳಿದ್ದೇವೆ ಆದರೂ ಪ್ರಯೋಜನವಾಗಿಲ್ಲ, ಈಗಾಲಾದರೂ ಉನ್ನತಮಟ್ಟದ ಅಧಿಕಾರಿಗಳು ಶಾಸಕರು ಜನಪ್ರತಿನಿಧಿಗಳು ಏಚ್ಚೇತ್ತುಕೊಂಡು ನೀರಿನ ಸಮಸ್ಯೆ ಪರಿಹರಿಸಬೇಕು. ಇಲ್ಲಾದಿದ್ದರೆ ಉಗ್ರಹೋರಾಟ ಹಮ್ಮಿಕೊಳ್ಳಲಾಗುವುದು.
>
> – ಮಹ್ಮದ್ ಅಬ್ದುಲ್ ಸಲಿಂ, ಪಟೇಲ ಕಾಲೋನಿ ನಿವಾಸಿ.

# ಕಾಂಗ್ರೇಸ್ ಜನರ ಕೈಗೆ ಬೆಲೆ ಏರಿಕೆಯ ಚೊಂಬು ಕೊಟ್ಟಿದೆ

• ಉದಯವಾಹಿನಿ, ಹುಬ್ಬಳ್ಳಿ

ಕಾಂಗ್ರೇಸ್ ಸರಕಾರ ಪೆಟ್ರೋಲ್, ಡಿಸೇಲ್ ಹಾಗೂ ಮದ್ಯದ ದರ ಏರಿಕೆ ಮಾಡಿದ್ದು, ಈ ಸರಕಾರ ಯಾವುದೇ ಪರವಾಗಿ ಕೆಲಸ ಮಾಡುತ್ತಿದೆ. ಇದೊಂದು ಜನ ವಿರೋಧಿ ಸರಕಾರವಾಗಿದ್ದು, ಜನರಿಗೆ ಚೊಂಬು ಕೊಟ್ಟಿದೆ ಎಂದು ವಿಪಕ್ಷದ ಉಪ ನಾಯಕ ಅರವಿಂದ ಬೆಲ್ಲದ ರಾಜ್ಯ ಸರಕಾರದ ವಿರುದ್ಧ ಹರಿಹಾಯ್ದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೇಸ್ ಜನರ ಕೈಗೆ ಬೆಲೆ ಏರಿಕೆಯ ಚೊಂಬು ಕೊಟ್ಟಿದ್ದಾರೆ. ಲೋಕ ಸಭಾ ಚುನಾವಣೆಯಲ್ಲಿ ಕಾಂಗ್ರೇಸ್ ಪಕ್ಷಕ್ಕೆ ಜನರು ತಕ್ಕ ಉತ್ತರ ನೀಡಿದ್ದಾರೆ. ಇದೀಗ ಅದೇ ಕಾರಣಕ್ಕೆ ಬೆಲೆ ಏರಿಕೆ ಮಾಡಿ, ಜನರ ಜೇಬಿಗೆ ಕತ್ತರಿ ಹಾಕಿದೆ. ಪೆಟ್ರೋಲ್ ಹಾಗೂ ಡಿಸೇಲ್ ಬೆಲೆ ಏರಿಕೆ ಜನರ ದಿನನಿತ್ಯದ ಜೀವನದ ಮೇಲೆ ಸಾಕಷ್ಟು ಪ್ರಭಾವ ಬೀರುತ್ತದೆ. ಬೇರೆ ರಾಜ್ಯಗಳಿಗೆ ಹೋಲಿಗೆ ಮಾಡಿದ್ರೆ ನಮ್ಮ ರಾಜ್ಯದಲ್ಲಿ ಪೆಟ್ರೋಲ್ ಬೆಲೆ ಕಡಿಮೆ ಇದೆ ಎಂದು ರಾಜ್ಯ ಸರ್ಕಾರ ಹೇಳುತ್ತಿರುವುದು ನಾಚಿಕೆಗೇಡಿನ ವಿಚಾರ. ಬಡವರು ಕುಡಿಯುವ ಮದ್ಯದ ದರ ಹೆಚ್ಚಳ ಮಾಡಿದೆ.

ಸ್ಟಾಂಪ್ ಡ್ಯೂಟಿ ಹಣವನ್ನೂ ಈ ಸರ್ಕಾರ ಹೆಚ್ಚಳ ಮಾಡಿದ್ದು, ಇದೊಂದು ಸಾಮಾನ್ಯ ಜನರ ವಿರೋಧಿ ಸರಕಾರವಾಗಿದೆ.

ಗ್ಯಾರಂಟಿ ಮೂಲಕ ಜನರಿಗೆ ಅಕ್ಷಯ ಪಾತ್ರೆ ನೀಡುತ್ತೇವೆಂದು ರಾಜ್ಯದ ಜನತೆಗೆ ಚೊಂಬು ಕೊಟ್ಟಿದ್ದಾರೆ ಎಂದು ಲೇವಡಿ ಮಾಡಿದರು. ಬಕ್ರೀದ್ ಹಬ್ಬದ ನಿಮಿತ್ತ ಸಾಕಷ್ಟು ಗೋವುಗಳನ್ನು ಕತ್ತರಿಸಲಾಗುತ್ತಿದೆ. ಧಾರವಾಡದಲ್ಲಿ ಗೋವುಗಳನ್ನ ರಕ್ಷಣೆ ಮಾಡಿದವನ ಮೇಲೆ ಹಲ್ಲೆ ಮಾಡಲಾಗಿದೆ. ಹಲ್ಲೆ ಆದಂತಹ ವ್ಯಕ್ತಿಯ ಮೇಲೆ ಪೊಲೀಸರು ದೂರು ದಾಖಲು ಮಾಡಿಕೊಂಡಿದ್ದಾರೆ.

> ಹಿಂದೂ ವಿರೋಧಿ ನೀತಿ ಅಲ್ಪಸಂಖ್ಯಾತರ ತುಷ್ಟೀಕರಣವನ್ನು ಸರಕಾರ ಬಿಡಬೇಕು. ಅಪರಾಧ ಚಟುವಟಿಕೆ ಹಿನ್ನೆಲೆಯಿರುವ ವ್ಯಕ್ತಿಗಳಿಗೆ ಸರಕಾರ ಕುಮ್ಮಕ್ಕು ನೀಡುವ ಕೆಲಸ ಮಾಡುತ್ತಿದೆ. ಸಚಿವ ಜಮೀರ ಅಹ್ಮದ್ ಗುಂಡಾಗಳ ಜೊತೆಗೆ ಸೆಟ್ಲಿಮೆಂಟ್ ಮಾಡುತ್ತಿದ್ದಾರೆ
>
> – ಅರವಿಂದ ಬೆಲ್ಲದ, ವಿಪಕ್ಷದ ಉಪ ನಾಯಕ

# ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಸಚಿವ ಎಚ್.ಕೆ. ಪಾಟೀಲ್ ಭೇಟಿ

• ಉದಯವಾಹಿನಿ, ಗದಗ

ಮಳೆಯಿಂದ ಹಾನಿಗೊಳಗಾದ ಗದಗ ತಾಲ್ಲೂಕಿನ ಹಲವು ಪ್ರದೇಶಗಳಿಗೆ ಪ್ರವಾಸೋದ್ಯಮ ಮತ್ತು ಕಾನೂನು ಸಚಿವ ಎಚ್.ಕೆ. ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮುಳಗುಂದ ಕುರ್ತಕೋಟಿ ರಸ್ತೆಯಲ್ಲಿ ಇತ್ತೀಚೆಗೆ ಸುರಿದ ಮಳೆಯಿಂದಾಗಿ ಹಾನಿಗೊಳಗಾದ ರಸ್ತೆ ಭಾರಿ ಪ್ರಮಾಣದ ನೀರು ಹರಿಯುವಿಕೆಯಿಂದಾಗಿ ರಸ್ತೆ ಪಕ್ಕದಲ್ಲಿ ಮಣ್ಣು ಕೊಚ್ಚಿ ಹೋಗಿದ್ದು ಸಂಚಾರಕ್ಕೆ ತೀವ್ರ ಅಡಚಣೆಯುಂಟಾಗಿದೆ.

ಅಲ್ಲದೆ ನೀಲಗುಂದ ಕುರ್ತಕೋಟಿ ರಸ್ತೆ ಸಂಪೂರ್ಣ ಹಾಳಾಗಿದ್ದು ಕೂಡಲೇ ದುರಸ್ತಿ ಮಾಡುವ ಅನಿವಾರ್ಯತೆ ಇದೆ ಎಂದು ಸ್ಥಳೀಯ ಮುಖಂಡರಾದ ಅಪ್ಪಣ್ಣ ಇನಾಮತಿ ಸಚಿವರಾದ ಎಚ್.ಕೆ. ಪಾಟೀಲ ಅವರಿಗೆ ವಿವರಿಸಿದರು. ನಂತರ ಅಂತೂರ ಬೆಂತೂರ ಗ್ರಾಮದ ಹಲವು ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಗದಗ ತಾಲ್ಲೂಕಿನ ಹಾನಿಯಾದ ಮುಳಗುಂದ ಹಾಗೂ ಇತರೆ ಪ್ರದೇಗಳ ಮಾಹಿತಿ ಪಡೆದರು.


ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಜಿಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಅಪ್ಪಣ್ಣ ಇನಾಮತಿ, ಅಶೋಕ ಮಂದಾಲಿ ಸೇರಿದಂತೆ ಮತ್ತಿತರರು ಇದ್ದರು.

# ಸಿಟಿ ಬಸ್‌ಗಳಲ್ಲಿ ಶೀಘ್ರ ಯುಪಿಐ ಮುಖಾಂತರವೂ ಟಿಕೆಟ್

• ಉದಯವಾಹಿನಿ, ಮಂಗಳೂರು

ನಗರದ ಸಿಟಿ ಬಸ್‌ಗಳಲ್ಲಿ ಶೀಘ್ರದಲ್ಲಿಯೇ ಯುಪಿಐ ಮುಖಾಂತರ ಟಿಕೆಟ್ ಖರೀದಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಎಂದು ದ.ಕ. ಬಸ್ ಮಾಲಕರ ಸಂಘದ ಅಧ್ಯಕ್ಷ ಅಝೀಝ್ ಪರ್ತಿಪಾಡಿ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ. ಡಿಜಿಟಲೀಕರಣಕ್ಕೆ ಪೂರಕವಾಗಿ ಸಂಘ ಮೂರು ವರ್ಷಗಳ ಹಿಂದೆ ನಗದು ರಹಿತ ಚಲೋ ಕಾರ್ಡ್ ಬಳಕೆಗೆ ತಂದಿತ್ತು. ಇದನ್ನು ''ಡಿಕೆಬಿಒಎ ಸ್ಟೂಡೆಂಟ್ ಕಾರ್ಡ್' ಆಗಿ ಪರಿವರ್ತಿಸಲಾಗುತ್ತಿದ್ದು, ಇದರಲ್ಲಿಯೂ ವಿದ್ಯಾರ್ಥಿಗಳಿಗೆ ಶೇ. 60 ರಿಯಾಯಿತಿ ದರದ ಪಾಸ್‌ಗಳು ದೊರೆಯಲಿವೆ. ಸಾರ್ವಜನಿಕ ಪ್ರಯಾಣಿಕರಿಗೆ ಶೇ. 10ರ ರಿಯಾಯಿತಿ ದೊರೆಯಲಿದೆ. ಶಾಲಾ ಕಾಲೇಜು ವಿದ್ಯಾರ್ಥಿಗಳು ಶೇ. 60 ರಿಯಾಯಿತಿಯೊಂದಿಗೆ 40 ಮತ್ತು 50 ಟ್ರಿಪ್‌ಗ್ಳ ಪಾಸ್ ಪಡೆದು ಪ್ರಯಾಣಿಸಬಹುದು.

ಇದು ವಿದ್ಯಾರ್ಥಿಯ ವಾಸಸ್ಥಳದಿಂದ ಶಾಲೆ–ಕಾಲೇಜಿನವರಿಗೆ ಊರ್ಜಿತವಾಗಿರುತ್ತದೆ. ವಿದ್ಯಾರ್ಥಿಗಳು ಕಾರ್ಡ್‌ಗಳನ್ನು ಉಚಿತವಾಗಿ ಮಾಡಿಸಬಹುದು. ಶೇ. 90ರಷ್ಟು ಮಂದಿ ಈ ಡಿಕೆಬಿಒಎ ಕಾರ್ಡ್‌ನ ಪ್ರಯೋಜನ ಪಡೆಯಬೇಕೆಂಬುದು ಸಂಘದ ಉದ್ದೇಶವಾಗಿದೆ.

ಪಾಸ್‌ಗಳನ್ನು ಹಂಪನಕಟ್ಟೆಯ ಮಿಲಾಗ್ರಿಸ್ ಕಟ್ಟಡ, ಸಿಟಿಲೈಟ್ ಕಟ್ಟಡ, ಮಾಂಡೋವಿ ಮೋಟಾರ್ಸ್ ಎದುರಿನ ಸಾಗರ್ ಟೂರಿಸ್ಟ್, ಸುರತ್ಕಲ್ ಬಸ್ ನಿಲ್ದಾಣದ ಸಮೀಪದ ಸಾಯಿ ಮೊಬೈಲ್, ತೊಕ್ಕೊಟ್ಟು ಬಸ್ ನಿಲ್ದಾಣ ಸಮೀಪದ ಅನು ಮೊಬೈಲ್‌ನಿಂದ ಪಡೆದುಕೊಳ್ಳಬಹುದು.

> ಡಿಜಿಟಲೀಕರಣದ ಮುಂದುವರಿದ ಭಾಗವಾಗಿ ಮುಂದಿನ ದಿನಗಳಲ್ಲಿ ಯುಪಿಐ ಬಸ್ ಟಿಕೆಟ್ ವ್ಯವಸ್ಥೆ ಮಾತ್ರವಲ್ಲದೆ ಬಸ್ ಟೈಮಿಂಗ್ಸ್ ವ್ಯವಸ್ಥೆ ಸುಧಾರಣೆಗೆ ಜಿಪಿಎಸ್ ಮೂಲಕ ನಿಯಂತ್ರಣ ವ್ಯವಸ್ಥೆ ಅಳವಡಿಸಲಾಗುವುದು. ಈ ಬಗ್ಗೆ ಮಂಗಳೂರು ಸ್ಮಾರ್ಟ್ ಸಿಟಿ ಲಿ.ನವರು ಕೂಡ ಯೋಜನೆ ರೂಪಿಸಿದ್ದು ಅವರು ಸಂಪರ್ಕಿಸಿದ ಕೂಡಲೇ ಪೂರಕವಾಗಿ ಸ್ಪಂದಿಸಲಾಗುವುದು ಎಂದರು.

# ನರಕಯಾತನೆ ಅನುಭವಿಸುತ್ತಿರುವ ನಿವಾಸಿಗಳು

• ಉದಯವಾಹಿನಿ, ಕಂದಗಲ್ಲ

ಇಳಕಲ್ಲ ತಾಲ್ಲೂಕಿನ ಇಂಗಳಗಿ ಗ್ರಾಮದ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಸರಕಾರಿ ಶಾಲೆಯ ಆವರಣ ಮುಂದೆ ಮಳೆ ನೀರು ನಿಂತು ಅದು ಸಂಪೂರ್ಣವಾಗಿ ಮಲೀನಗೊಂಡು ಗಬ್ಬೆದು ನಾರುತ್ತಿದ್ದರಿಂದ ಅಲ್ಲಿನ ನಿವಾಸಿಗಳು ನರಕ ಯಾತನೆಯಲ್ಲಿ ಜೀವನ ನಡೆಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ದಿನನಿತ್ಯ ನೂರಾರು ಮಕ್ಕಳು ಅಲ್ಲಿ ಆಟ ಆಡುತ್ತಾರೆ. ನಿಂತ ಮಲೀನ ನೀರಿ ನಲ್ಲಿಯೇ ಆಟ ಆಡುತ್ತಿದ್ದರಿಂದ ಮಕ್ಕಳಿಗೆ ರೋಗ ರುಜಿನಗಳು ಬರುವ ಭಯದಲ್ಲಿ ಮಕ್ಕಳ ಪಾಲಕರು ಹೆದರುತ್ತಿದ್ದಾರೆ.

ಅಲ್ಲಿನ ಸಾರ್ವಜನಿಕರು ಎರಡು ವರ್ಷಗಳಿಂದ ಈ ಸಮಸ್ಯೆಯನ್ನು ಬಗೆಹರಿಸಿ ಎಂದು ಗೊರಬಾಳ ಗ್ರಾಮ ಪಂಚಾಯತ್ ಗೆ ಹಲವು ಬಾರಿ ಮನವಿ ಮಾಡಿದರೂ ಇದರತ್ತ ಅಧಿಕಾರಿಗಳು ಗಮನ ಹರಿಸುತ್ತಿಲ್ಲ ಎಂದು ಸ್ಥಳೀಯ ನಿವಾಸಿಗಳಾದ ಶಿವು ಕುಮಾರ ಬೆಳ್ಳಿಹಾಳ, ರಮೇಶ ನಾಗರಾಳ, ಶಿವಪುತ್ರಯ್ಯ ಮಠಪತಿ, ಶರತಕುಮಾರ ಲೋಕಾಪೂರ ತಮ್ಮ ನೋವನ್ನು ತೋಡಿಕೊಂಡರು. ಸರಕಾರ ಸ್ವಚ್ಛತೆಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದು ಸ್ವಚ್ಛತೆಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡುತ್ತಿದ್ದರೂ ಇಲ್ಲಿ ಮಾತ್ರ ಸ್ವಚ್ಛತೆ ಎನ್ನುವುದೇ ಏನು ಎಂಬಂತೆ ಇದೆ.

ಸ್ಥಳೀಯ ಅಧಿಕಾರಿಗಳು ಗಮನ ಹರಿಸದ ಕಾರಣ ಜಿಲ್ಲಾಧಿಕಾರಿಗಳಿಗೆ ಗ್ರಾಮಸ್ಥರು ಜೂನ್ 6 ರಂದು ಗ್ರಾಮದ ಸಮಸ್ಯೆ ಪರಿಹರಿಸುವಂತೆ ಮನವಿ ನೀಡಿದ್ದಾರೆ. ಈ ಸಮಸ್ಯೆ ಪರಿಹರಿಸದೇ ಹೋದರೆ ಗ್ರಾಮದ ಜನರು ಉಗ್ರ ಪ್ರತಿಭಟನೆ ಮಾಡಲಾಗವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಗ್ರಾಮದ ಜನರು ನೋವನ್ನು ತೋಡಿಕೊಂಡಿದ್ದರಿಂದ ಗೊರಬಾಳ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎಂ.ಎ.ದಖನಿ ವಿಚಾರಿಸಿದಾಗ ಅಲ್ಲಿನ ಪರಿಸ್ಥಿತಿಯನ್ನು ಪರಿಶೀಲನೆ ಮಾಡಿ ಬಂದಿದ್ದೇನೆ ಒಂದು ವಾರದ ಒಳಗಡೆ ಸಮಸ್ಯೆಯನ್ನು ಬಗೆಹರಿಸುವುದಾಗಿ ಅವರು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಗಬ್ಬೆದ್ದು ನಾರುತ್ತಿರುವ ಮಲೀನ ನೀರು

> ಹಲವಾರು ಬಾರಿ ಅಧಿಕಾರಿಗಳಿಗೆ ಮನವಿ ಮಾಡಿದರೂ ಗ್ರಾಮಕ್ಕೆ ಯಾವ ಅಧಿಕಾರಿಗಳು ಭೇಟಿ ನೀಡಿಲ್ಲ ಗೊರಬಾಳ ಗ್ರಾಮ ಪಂಚಾಯತಿಗೆ ಅಲೆದಾಡಿ ಅಲೆದಾಡಿ ಸಾಕಾಗಿದೆ
>
> –ಶಿವು ಬೆಳ್ಳಿಹಾಳ, ಗ್ರಾಮಸ್ಥ

# ಸಾರ್ವಜನಿಕ ಗ್ರಂಥಾಲಯದಲ್ಲಿ ಶೌಚಕ್ಕಾಗಿ ಸಾಲುಗಟ್ಟಿ ನಿಂತಿರುವ ವಿದ್ಯಾರ್ಥಿನಿಯರು

• ಉದಯವಾಹಿನಿ, ಸಿರುಗುಪ್ಪ

ತಾಲ್ಲೂಕಿನ ಬಾಗೇವಾಡಿ ಗ್ರಾಮದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಶೌಚಾಲಯಕ್ಕಾಗಿ ಸಾರ್ವಜನಿಕ ಗ್ರಂಥಾಲಯದ ಕೊಠಡಿಯಲ್ಲಿರುವ ಶೌಚಾಲಯದ ಮುಂದೆ ಸಾಲುಗಟ್ಟಿ ನಿಲ್ಲಬೇಕಾದ ಪರಿಸ್ಥಿತಿ ಇಲ್ಲಿದೆ. ಈ ಶಾಲೆಯಲ್ಲಿ 5 ರಿಂದ 8ನೇ ತರಗತಿಯವರೆಗೆ ಒಟ್ಟು 190 ವಿದ್ಯಾರ್ಥಿಗಳು ವಿಧ್ಯಾಭ್ಯಾಸ ಮಾಡುತ್ತಿದ್ದಾರೆ.

ಇಷ್ಟೊಂದು ದೊಡ್ಡ ಸಂಖ್ಯೆಯ ವಿದ್ಯಾರ್ಥಿಗಳು ಶಾಲೆಯಲ್ಲಿದ್ದರೂ ವಿದ್ಯಾರ್ಥಿಗಳಿಗೆ ಒಂದು ಉತ್ತಮವಾದ ಶೌಚಾಲಯ ಸೌಲಭ್ಯವಿಲ್ಲ. ಇರುವ ಒಂದು ಶೌಚಾಲಯಕ್ಕೆ ನೀರಿನ ವ್ಯವಸ್ಥೆ ಇಲ್ಲ. ಇದರಿಂದಾಗಿ ವಿದ್ಯಾರ್ಥಿನಿಯರು ಶಾಲೆಯ ಪಕ್ಕದಲ್ಲಿರುವ ಸಾರ್ವಜನಿಕ ಗ್ರಂಥಾಲಯದಲ್ಲಿರುವ ಮಹಿಳೆಯರ ಶೌಚಾಲಯ ಬಳಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

ಇಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿನಿರಿದ್ದು, ತಮ್ಮ ಶೌಚಕಾರ್ಯ ಮುಗಿಸಿಕೊಳ್ಳಲು ಗ್ರಂಥಾಲಯದ ಶೌಚಾಲಯದ ಮುಂದೆ ಸಾಲುಗಟ್ಟಿ ನಿಲ್ಲಬೇಕಾದ ಕೆಟ್ಟ ಸ್ಥಿತಿ ಇರುತ್ತದೆ. ಇಲ್ಲಿ ನೂತನ ಕಟ್ಟಡ ನಿರ್ಮಾಣವಾಗಿ 7–8 ವರ್ಷಗಳಾದರೂ ಈ ಶಾಲೆಗೆ ಉತ್ತಮವಾದ ಶೌಚಾಲಯ ನಿರ್ಮಾಣ ಮಾಡಿಲ್ಲ. ಕಳೆದ ವರ್ಷ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ತಮಗೆ ಶೌಚಾಲಯ ಬೇಕೆಂದು ಒತ್ತಾಯಿಸಿದ ಹಿನ್ನಲೆ ಶಾಲೆ ಪಕ್ಕದಲ್ಲಿಯೇ ಒಂದು ಶೌಚಾಲಯ ನಿರ್ಮಾಣ ಮಾಡಿದ್ದಾರೆ.

ಆದರೆ ಶೌಚಾಲಯಕ್ಕೆ ಬೇಕಾದ ನೀರು ಪೂರೈಕೆ ಮಾಡುವ ಪೈಪ್‌ಗಳನ್ನು ಕಿಡಿಗೇಡಿಗಳು ಕಳ್ಳತನ ಮಾಡಿದ್ದಾರೆ. ಇದರಿಂದಾಗಿ ಶೌಚಾಲಯಕ್ಕೆ ನೀರಿಲ್ಲದೆ ಇರುವುದರಿಂದ ಶಿಕ್ಷಕರು ಗ್ರಂಥಾಲಯದ ಶೌಚಾಲಯಗಳನ್ನು ಬಳಕೆ ಮಾಡುತ್ತಿದ್ದರು. ಇದನ್ನು ಗಮನಿಸಿದ ವಿದ್ಯಾರ್ಥಿಗಳು ಕೂಡ ಗ್ರಂಥಾಲಯದ ಶೌಚಾಲಯವನ್ನು ಬಳಕೆ ಮಾಡಲು ಮುಂದಾಗಿದ್ದು, ವಿದ್ಯಾರ್ಥಿಗಳು ಸಾಲುಗಟ್ಟಿ ನಿಂತು ತಮ್ಮ ದೈಹಿಕ ಜಲಬಾದೆಯನ್ನು ತೀರಿಸಿಕೊಳ್ಳುತ್ತಿದ್ದಾರೆ.

# ಸರ್ಕಾರದ ನಿಲುವಿಗೆ ಸಿಪಿಎಂ ವಿರೋಧ

• ಉದಯವಾಹಿನಿ, ಹೊಸಪೇಟೆ



ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಶಿಕ್ಷಣ ಇಲಾಖೆಯ ಮೂಲಕ ಜಾರಿಗೊಳಿಸುವ ಜನ ವಿರೋಧಿ ಸರ್ಕಾರದ ಆದೇಶ ಹಿಂಪಡೆದು, ಐಸಿಡಿಎಸ್ ಯೋಜನೆಯ ಅಂಗನವಾಡಿ ಕೇಂದ್ರಗಳ ಮೂಲಕ ಅದನ್ನು ಜಾರಿ ಗೆ ತರಬೇಕು ಎಂದು ಸಿಪಿಎಂ ಒತ್ತಾಯಿಸಿದ್ದು, ಮಂಗಳವಾರ ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಪ್ರತಿಘಟನೆ ನಡೆಸಲು ನಿರ್ಧರಿಸಿದೆ. ಈ ಸಂಬಂಧ ಪಕ್ಷದ ರಾಜ್ಯ ಸಮಿತಿ ಸದಸ್ಯರಾದ ಆರ್.ಎಸ್.ಬಸವರಾಜ್, ಬಿ. ಮಾಳಮ್ಮ, ಜಿಲ್ಲಾ ಕಾರ್ಯದರ್ಶಿ ಆರ್.ಭಾಸ್ಕರ ರೆಡ್ಡಿ, ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯರಾದ ಕೆ.ನಾಗರತ್ನಮ್ಮ, ಟಿ.ವಿ.ರೇಣುಕಮ್ಮ ಅವರು ಹೇಳಿಕೆ ನೀಡಿದ್ದು, ಅತ್ಯಂತ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದ ಬಡ ಜನತೆ, ದಲಿತ ಹಾಗು ಮಹಿಳಾ ಸಮುದಾಯವು ಸರ್ಕಾರದ ಈ ಆದೇಶದಿಂದ ವಂಚನೆಗೊಳಗಾಗಲಿದ್ದಾರೆ. ಬಡವರ ಹಾಗೂ ದಲಿತರು ಮತ್ತು ಮಹಿಳೆಯರ ವಿರೋಧಿಯಾದ ಈ ದುರುದ್ದೇಶಪೂರಿತ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ. ಪೂರ್ವ ಪ್ರಾಥಮಿಕ ಶಿಕ್ಷಣ ನೀಡುವ ನಿಲುವನ್ನು ಸಿಪಿಎಂ ಸ್ವಾಗತಿಸುತ್ತದೆ. ಪಕ್ಷ ಖಂಡಿಸುತ್ತದೆ. ಐಸಿಡಿಎಸ್ ಯೋಜನೆಯ ಭಾಗವಾಗಿ ಅಂಗನವಾಡಿ ಕೇಂದ್ರಗಳ ಮೂಲಕ ಜಾರಿಗೊಳಿಸುವಂತೆ ಬಲವಾಗಿ ಒತ್ತಾಯಿಸುತ್ತದೆ ಎಂದು ಅವರು ಹೇಳಿದ್ದಾರೆ.

# ವಿದ್ಯಾರ್ಥಿನಿಯರ ವಸತಿ ನಿಲಯದ ಕಟ್ಟಡ ಉದ್ಘಾಟನೆ

## ವೀರಶೈವ– ಲಿಂಗಾಯತ ಪ್ರತ್ಯೇಕ ಧರ್ಮದ ಮಾನ್ಯತೆ ಹೋರಾಟ ಮತ್ತೆ ಮುನ್ನೆಲೆಗೆ: ಸಚಿವ ಈಶ್ವರ ಖಂಡ್ರೆ

• ಉದಯವಾಹಿನಿ, ಕಲಬುರಗಿ

ವೀರಶೈವ– ಲಿಂಗಾಯತ ಸಮುದಾಯಕ್ಕೆ ಪ್ರತ್ಯೇಕ ಧರ್ಮದ ಮಾನ್ಯತೆ ಹೋರಾಟದ ವಿಚಾರ ಮತ್ತೆ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅಖಿಲ ಭಾರತ ವೀರಶೈವ– ಲಿಂಗಾಯತ ಮಹಾಸಭಾದ ಪ್ರಧಾನ ಕಾರ್ಯದರ್ಶಿಯಾಗಿರುವ ಸಚಿವ ಈಶ್ವರ ಖಂಡ್ರೆ ಹೇಳಿದರು. ನಗರದ ಕೋಟನೂರ ಡಿ ಕುಡಾ ಬಡಾವಣೆಯಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ನಿರ್ಮಾಣಗೊಂಡ ವಿದ್ಯಾರ್ಥಿನಿಯರ ವಸತಿ ನಿಲಯದ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಸಮುದಾಯದ ಎಲ್ಲಾ ಒಳಪಂಗಡಗಳ ಒಳಗೊಂಡಂತೆ ಪ್ರತ್ಯೇಕ ಧರ್ಮದ ಬೇಡಿಕೆ ಬಹಳ ದಿನಗಳಿಂದ ಇದೆ. ಆದರೆ ಹೋರಾಟ ಪ್ರಬಲಗೊಂಡ ನಂತರ ಬೇರೆ– ಬೇರೆ ಕಡೆ ವಾಲಿತು. ಆದರೆ ಈಗ ಮತ್ತೆ ಪ್ರತ್ಯೇಕ ಧರ್ಮದ ಮಾನ್ಯತೆ ಹೋರಾಟದ ವಿಚಾರ ಮುನ್ನೆಲೆಗೆ ಬರುವಂತಾಗಿದೆ ಎಂದು ಖಂಡ್ರೆ ಹೇಳಿದರು. ವೀರಶೈವ ಲಿಂಗಾಯತ ಸಮುದಾಯ ಇಂದು ಕವಲು ದಾರಿಯಲ್ಲಿದೆ. ಹೀಗಾಗಿ ನಾವು ಹಿಂದೆಂದೂ ಕಂಡರಿಯದ ಒಗ್ಗಟ್ಟು ನಮ್ಮೆಲ್ಲರಲ್ಲಿ ಮೂಡಬೇಕಿದೆ. ನಮ್ಮಲ್ಲಿನ ವಿಚಾರಗಳಲ್ಲಿ ಭಿನ್ನಾಭಿಪ್ರಾಯ ಇರಬಹುದು. ಆದರೆ ಸಮಾಜದ ಒಳಿತಿಗಾಗಿ ಒಗ್ಗಟ್ಟು ಮೂಡಿಸಲೇಬೇಕಿದೆ. ವೀರಶೈವ ಲಿಂಗಾಯತ ಸಮುದಾಯ ಕೇಂದ್ರದ ಒಬಿಸಿ ಪಟ್ಟಿಯಲ್ಲಿ ಸೇರ್ಪಡೆ ಮಾಡುವಂತೆ ಶಿಫಾರಸ್ಸು ಕಳುಹಿಸಲಾಗಿದೆ. ಹೀಗಾಗಿ ಪ್ರತ್ಯೇಕ ಧರ್ಮದ ಮಾನ್ಯತೆ ಹಾಗೂ ಒಬಿಸಿ ಪಟ್ಟಿಯಲ್ಲಿ ಸೇರ್ಪಡೆ ಮಾಡುವ ಹೋರಾಟವು ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗಬೇಕಿದೆ ಎಂದು ಸಚಿವ ಈಶ್ವರ ಖಂಡ್ರೆ ಪ್ರಕಟಿಸಿದರು.

**ಎಲ್ಲಾ ಜಿಲ್ಲೆಯಲ್ಲಿ ಹಾಸ್ಟೆಲ್;** ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ವತಿಯಿಂದ ಎಲ್ಲಾ ಜಿಲ್ಲೆಗಳಲ್ಲಿ ಮಹಾಸಭಾದ ವತಿಯಿಂದ ಹಾಸ್ಟೆಲ್‌ಗಳನ್ನು ನಿರ್ಮಿಸಲಾಗುತ್ತಿದೆ. ಈಗಾಗಲೇ ಕಲಬುರಗಿ, ಬೆಂಗಳೂರು, ಬೆಳಗಾವಿ, ಧಾರವಾಡದಲ್ಲಿ ವಸತಿ ನಿಲಯಗಳನ್ನು ನಿರ್ಮಿಸಲಾಗಿದೆ. ಮುಂದಿನ ದಿನಗಳಲ್ಲಿ ಉಳಿದ ಜಿಲ್ಲೆಯಲ್ಲಿ ಸಮಾಜದ ವಸತಿ ನಿಲಯ ಸ್ಥಾಪಿಸಲಾಗುವುದು ಎಂದು ಖಂಡ್ರೆ ಪುನರುಚ್ಚರಿಸಿದರು.

ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ಮಾತನಾಡಿ, ಹೆಣ್ಣು ಮಕ್ಕಳು ಶಿಕ್ಷಣದಲ್ಲಿ ಮುಂದೆ ಬರಲಿ ಎಂಬುದು ಬಸವಣ್ಣನವರ ಪರಿಕಲ್ಪನೆಯಾಗಿದೆ. ಕಲಬುರಗಿಯಲ್ಲಿ ವಿದ್ಯಾರ್ಥಿನಿಯರ ಹಾಸ್ಟೆಲ್ ಬಹಳ ಅವಶ್ಯಕತೆ ಇತ್ತು. ಶರಣರು ದಾಸೋಹಕ್ಕೆ ಹೆಚ್ಚು ಪ್ರಾತಿನಿಧ್ಯತೆ ನೀಡಿದ್ದಾರೆ.

ಹೀಗಾಗಿ ಹಾಸ್ಟೆಲ್‌ನಲ್ಲಿ ವಸತಿ ನಿಲಯದಲ್ಲಿ ಉಚಿತ ಪ್ರಸಾದ ವ್ಯವಸ್ಥೆ ಕಲ್ಪಿಸುವುದು ಬಹಳ ಅವಶ್ಯಕತೆ ಇದೆ ಎಂದರು. ಸಿಎಂ ಸಲಹೆಗಾರ ಬಿ. ಆರ್.ಪಾಟೀಲ್, ಹಳೇ ಮೈಸೂರ ಭಾಗದಲ್ಲಿ ಸಮಾಜದವರು ತಂದೆ– ತಾಯಿ ಹೆಸರಿನಲ್ಲಿ ದಾನ ಧರ್ಮ ಮಾಡುತ್ತಾರೆ. ಅದೇ ನಿಟ್ಟಿನಲ್ಲಿ ಈ ವಸತಿ ನಿಲಯಕ್ಕೂ ಸಮಾಜದವರು ಮುಂದೆ ಬಂದು ದಾನ ನೀಡಿರುವುದು ಮಾದರಿ ಹಾಗೂ ಅರ್ಥಪೂರ್ಣವಾಗಿದೆ ಎಂದರು.

ವಸತಿ ಸಿಗದೇ ಇದ್ದುದ್ದಕ್ಕೆ ಹಲವರು ಶಾಲೆ ಬಿಟ್ಟಿದ್ದ ಉದಹಾರಣೆಗಳಿವೆ. ಕೆಟ್ಟದ್ದಾಗಲು ಒಬ್ಬರು ಸಾಕು ಆದರೆ ಒಳ್ಳೆಯದಾಗಲಿ ಎಲ್ಲರೂ ಕೈ ಜೋಡಿಸಬೇಕು. ಬದಲಾದ ಪರಿಸ್ಥಿತಿಯಲ್ಲಿ ಎಲ್ಲರ ಕಣ್ಣು ಸಮಾಜದವರ ಮೇಲಿದೆ. ಹೀಗಾಗಿ ನಾವು ಸೂಕ್ಷ್ಮತೆಯಿಂದ ಹೆಜ್ಜೆ ಇಡಬೇಕಿದೆ. ಸಮಾಜದಲ್ಲಿ ಮೇಲೆ ಬರಲು ಸಮಾಜ ಶ್ರಮಿಸುತ್ತಿದೆ. ಆದರೂ ಆರ್ಥಿಕವಾಗಿ ಹಿಂದುಳಿದವರ ನಾವೂ ಬಡವರನ್ನು ಮುಖ್ಯವಾಹಿನಿಗೆ ತರಬೇಕಾಗಿದೆ ಎಂದರು.


ಉದಯವಾಹಿನಿ ಚಿತ್ರ

> ಯುವಕರ ಚಟ ಬಿಡಿಸುವ ಕಾರ್ಯವಾಗಲಿ ಇಂದು ಸಮಾಜದ ಯುವಕರು ಆತಂಕಕಾರಿ ರೀತಿಯಲ್ಲಿ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಈ ನಿಟ್ಟಿನಲ್ಲಿ ಸಮಾಜ ಹಾಗೂ ಅದರಲ್ಲೂ ಮಠಾಧೀಶರು ಮುಂದೆ ನಿಂತು ಜಾಗೃತಿ ಮೂಡಿಸುವ ಕೆಲಸ ತುರ್ತಾಗಿ ಆಗಬೇಕಿದೆ
>
> – ಬಿ. ಆರ್. ಪಾಟೀಲ

> ಸಚಿವ ಶರಣಬಸಪ್ಪ ದರ್ಶನಾಪುರ ಮಾತನಾಡಿ, ಕಟ್ಟಡ ಪೂರ್ಣಗೊಂಡ ಈಗ ಸುಂದರವಾಗಿ ಕಾಣುತ್ತದೆ. ವಸತಿ ನಿಲಯಕ್ಕಾಗಿ 3.50 ಕೋ.ರೂ ವೆಚ್ಚ ತಗುಲಿದೆ. ಒಟ್ಟಾರೆ ವಸತಿ ನಿಲಯಕ್ಕಾಗಿ 32 ದಾನಿಗಳು ಕೊಟ್ಟಿದ್ದಾರೆ. ಇದರಲ್ಲಿ 27 ಗಣ್ಯರು ಹಾಗೂ ಐದು ಬ್ಯಾಂಕ್ ತಲಾ ಐದು ಲಕ್ಷ ರೂ ನೀಡಿದ್ದು, ಮಹಾಸಭಾದಿಂದ 50 ಲಕ್ಷ ಲೋನ್ ಪಡೆಯಲಾಗಿದೆ
>
> –ಶರಣಬಸಪ್ಪ ದರ್ಶನಾಪುರ

# ಮಿನಿ ನ್ಯೂಸ್

## ಧಾರಾಕಾರ ಮಳೆ, ಶಾಲೆಯ ಗೋಡೆ ಕುಸಿದು ಟ್ರಾಕ್ಟರ್ ಮೇಲೆ ಬಿದ್ದಿದೆ

• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಪರದಾರ ಮೋತಕಪಳ್ಳಿ ಗ್ರಾಮದಲ್ಲಿ ಧಾರಾಕಾರವಾಗಿ ಸುರಿದ ಮಳೆಯಿಂದ ಸರ್ಕಾರಿ ಶಾಲೆಯ ಗೋಡೆಯನ್ನು ಕುಸಿದು ಬಿದ್ದಿದೆ ಪಕ್ಕದಲ್ಲೇ ನಿಲ್ಲಿಸಿದ ರೈತನ ಟ್ರಾಕ್ಟರ್ ಮೇಲೆ ಬಿದ್ದು ಟ್ರಾಕ್ಟರಗೆ ಅಪಾರ ಹಾನಿಯಾಗಿದೆ ಎಂದು ಗ್ರಾಮಸ್ಥ ಯಕ್ಬಾಲ್ ಪಟೇಲ ತಿಳಿಸಿದ್ದಾರೆ. ಧಾರಾಕಾರವಾಗಿ ಗುಡುಗು ಸಿಡಿಲು ಅಬ್ಬರದಿಂದ ಸುರಿದ ಮಳೆಯಿಂದ ಸರ್ಕಾರಿ ಶಾಲೆಯ ಗೋಡೆ ಕುಸಿದು ಟ್ರಾಕ್ಟರ್ ಮೇಲೆ ಬಿದ್ದಿದೆ ಇದರಿಂದ ಟ್ರಾಕ್ಟರಗೆ ಬಹಳಷ್ಟು ನಷ್ಟವಾಗಿದ್ದು ಟ್ರಾಕ್ಟರ್ ಮಾಲಿಕ ರೈತ ಯಕ್ಬಾಲ್ ಪಟೇಲ ಮೋತಕಪಳ್ಳಿ ಸರ್ಕಾರದಿಂದ ಸೂಕ್ತ ಪರಿಹಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ.

## ಒಂಭತ್ತು ವಿದ್ಯಾರ್ಥಿಗಳು ಅಸ್ವಸ್ಥ, ಆಸ್ಪತ್ರೆಗೆ ದಾಖಲು

• ಉದಯವಾಹಿನಿ, ಶಿವಮೊಗ್ಗ

ರಾಷ್ಟ್ರೀಯ ಸ್ವಯಂ ಸೇವಾ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಂತ ವಿದ್ಯಾರ್ಥಿಗಳಿಗೆ ನೀಡಲಾದ ಊಟ ಸೇವಿಸಿ, 9 ವಿದ್ಯಾರ್ಥಿಗಳು ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿರುವಂತ ಘಟನೆ ಬೆಳಕಿಗೆ ಬಂದಿದೆ. ಶಿವಮೊಗ್ಗದ ಸಹ್ಯಾದ್ರಿ ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಎನ್‌ಎಸ್‌ಎಸ್ ಕ್ಯಾಂಪ್ ಆಯೋಜಿಸಲಾಗಿತ್ತು.

ಈ ಕ್ಯಾಂಪ್‌ನಲ್ಲಿ 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕುವೆಂಪು ವಿವಿ ವ್ಯಾಪ್ತಿಯ ಕಾಲೇಜುಗಳಿಂದ ಭಾಗಿಯಾಗಿದ್ದರು. ಈ ವಿದ್ಯಾರ್ಥಿಗಳಿಗೆ ಮಾಡಿದ್ದಂತ ಅಡುಗೆಯ ಊಟ ಸೇವಿಸಿದಂತ 9 ವಿದ್ಯಾರ್ಥಿಗಳಿಗೆ ವಾಂತಿ, ಬೇಧಿ ಕಾಣಿಸಿಕೊಂಡು, ಅಸ್ವಸ್ಥರಾಗಿದ್ದರು. ಅವರನ್ನು ಕೂಡಲೇ ಶಿವಮೊಗ್ಗದ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

## ವಿಶ್ವ ಹಿಂದೂ ಪರಿಷತ್ ಧರ್ಮ ಪ್ರಸಾರ ವತಿಯಿಂದ ಹಿಂದವ ಸೋದರ ಸರ್ವೇ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಂಗಳೂರು

ವಿಶ್ವ ಹಿಂದೂ ಪರಿಷತ್ ಮಂಗಳೂರು ಧರ್ಮ ಪ್ರಸಾರ ವಿಭಾಗದ ವತಿಯಿಂದ ಹಿಂದವ ಸೋದರ ಸರ್ವೇ ಎಂಬ ಘೋಷ ವಾಕ್ಯದಂತೆ ಹಿಂದೂ ಸಮಾಜದಲ್ಲಿ ಸಾಮರಸ್ಯ ತರುವ ಮೂಲಕ ಹಿಂದೂಗಳು ನಾವೆಲ್ಲರೂ ಸಹೋದರು ಎಂಬ ಭಾವನೆ ಮೂಡಿಸುವ ನಿಟ್ಟಿನಲ್ಲಿ ಇಂದು ತಾರೀಕು 16 ಜೂನ್ 2024 ಆದಿತ್ಯವಾರ ಬೆಳಿಗ್ಗೆ ನಾಗುರಿ ಪ್ರಖಂಡದ ಸೂಟರ್ ಪೇಟೆ ಪರಿಸರಕ್ಕೆ ಪೂಜ್ಯ ಚಿತ್ರಾಪುರ ಮಠಾಧೀಶರು ಶ್ರೀ ಶ್ರೀ ವಿದ್ಯೇಂದ್ರ ತೀರ್ಥ ಶ್ರೀಪಾದರು ಪಾದಯಾತ್ರೆ ನಡೆಸಿ ನಂತರ ಶ್ರೀ ದೈವರಾಜ ಬಬ್ಬುಸ್ವಾಮಿ ದೈವಸ್ಥಾನದಲ್ಲಿ ಬೆಳಿಗ್ಗೆ 9:00 ಗಂಟೆಗೆ ಆಶೀರ್ವಚನ ನೀಡಿದರು, ಈ ಕಾರ್ಯಕ್ರಮದಲ್ಲಿ ಪ್ರಾಂತ ಧರ್ಮಪ್ರಸಾರ ಪ್ರಮುಖ್ ಸುನಿಲ್ ಕೆ ಆರ್, ಜಿಲ್ಲಾಧ್ಯಕ್ಷರಾದ ಎಚ್ ಕೆ ಪುರುಷೋತ್ತಮ, ವಿಭಾಗ ಸಹಕಾರ್ಯದರ್ಶಿ ಶಿವಾನಂದ್ ಮೆಂಡನ್, ಜಿಲ್ಲಾ ಉಪಾಧ್ಯಕ್ಷರು ಸಂಜೀವ ಸೂಟರ್ ಪೇಟೆ, ಸ್ಥಳೀಯ ಮನಾಪ ಸದಸ್ಯರು ಭರತ್ ಸೂಟರ್ ಪೇಟೆ, ಬಬ್ಬು ಸ್ವಾಮಿ ದೈವಸ್ಥಾನ ಅಧ್ಯಕ್ಷರಾದ ನವೀನ್ ಸೂಟರ್ ಪೇಟೆ ಉಪಸ್ಥಿತಿ ಇದ್ದರು.

## ನೋಬಲ್ ಬುಕ್ ಆಫ್ ರೆಕಾರ್ಡ್ಸ್‌ಗೆ ಸೇರಿದ 4 ತಿಂಗಳ ಮಗು ಸಾಯಿರಾ

• ಉದಯವಾಹಿನಿ, ಬಳ್ಳಾರಿ

ಬಳ್ಳಾರಿ ತಾಲ್ಲೂಕಿನ ಹಗರಿಗ್ರಾಮದ ನಿವಾಸಿಗಳಾದ ಸುಧಾಕರ ಮತ್ತು ಸಿಂಧು ದಂಪತಿಯ ನಾಲ್ಕು ತಿಂಗಳ ಮಗು ಸಾಯಿರಾ ನೋಬಲ್ ಬುಕ್ ಆಫ್ ರೆಕಾರ್ಡ್ಸ್‌ಗೆ ಸೇರ್ಪಡೆಯಾಗಿದ್ದಾಳೆ. ರಾಷ್ಟ್ರ ದ್ವಜಗಳು, ಹಣ್ಣಿನ ಚಿತ್ರ, ಪ್ರಾಣಿಗಳ ಚಿತ್ರ, ಪಕ್ಷಿಗಳು ಇತರೆ ವಸ್ತುಗಳ ಚಿತ್ರವಿರುವ 149 ಫ್ಲಾಶ್ ಕಾರ್ಡ್ಸ್ ಗುರುತಿಸುವ ಮೂಲಕ ಮಗು ಸಾಯಿರಾ ಈ ಸಾಧನೆ ಮಾಡಿದ್ದಾಳೆ. ತಮ್ಮ ಮುದ್ದು ಮಗುವಿನ ಸಾಧನೆಗೆ ಪೋಷಕರು ಹೆಮ್ಮೆ ಪಟ್ಟಿದ್ದಾರೆ.

ಆಂಧ್ರಪ್ರದೇಶ ಅನಂತಪೂರ ಜಿಲ್ಲೆಯ ಜಿಲ್ಲಾಧಿಕಾರಿ ವಿನೋದ ಕುಮಾರ್ ಅವರು ಮಗು ಸಾಯಿರಾ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿ, ನೋಬಲ್ ಬುಕ್ ಆಫ್ ರೆಕಾರ್ಡ್ಸ್ ಸರ್ಟಿಫಿಕೇಟ್ ನೀಡಿ ಸನ್ಮಾನಿಸಿದರು. ಸಾಯಿರಾ ತಾಯಿ ಸಿಂಧು ಅವರ ತಾಳ್ಮೆಗೆ ಜಿಲ್ಲಾಧಿಕಾರಿ ವಿನೋದ ಕುಮಾರ್ ಹುಬ್ಬೇರಿಸಿದರು. ಸದ್ಯ ಮಗು ಸಾಯಿರಾ ಸಾಧನೆಗೆ ಎಲ್ಲೆಡೆ ಜನರು ಮೆಚ್ಚುಗೆ ವ್ಯಕ್ತಪಡಿಸಿದರು.

## ವಿದ್ಯುತ್ ಶಾಕ್‌ನಿಂದ ಬಾಲಕ ಸಾವು: 8 ಮಂದಿ ಸಸ್ಪೆಂಡ್

• ಉದಯವಾಹಿನಿ, ಚಿಕ್ಕಮಗಳೂರು

ವಿದ್ಯುತ್ ಶಾಕ್‌ನಿಂದ 7 ನೇ ತರಗತಿ ಬಾಲಕ ಸಾವನ್ನಪ್ಪಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ನಡೆದಿತ್ತು. ಈ ಪ್ರಕರಣಕ್ಕೆ ಸಂಬಂಧಪಟ್ಟ ಅಧಿಕಾರಿ, ಸಿಬ್ಬಂದಿ ಸೇರಿ 8 ಮಂದಿಯನ್ನು ಸಸ್ಪೆಂಡ್ ಮಾಡಲಾಗಿದೆ. ಪ್ರಭಾರ ಪ್ರಾಂಶುಪಾಲ, ನಿಲಯ ಪಾಲಕ ಸೇರಿ 8 ಮಂದಿ ಅಮಾನತುಗೊಳಿಸಿ ಕ್ರೈಸ್ ಕಾರ್ಯ ನಿರ್ವಾಹಕ ನಿರ್ದೇಶಕ ಪ್ರವೀಣ್ ಬಿ ಬಾಗೇವಾಡಿ ಅವರು ಆದೇಶ ಹೊರಡಿಸಿದ್ದಾರೆ.

ಕಳೆದ ದಿನ ಶಾಲಾ ಆವರಣದಲ್ಲಿ ಇದ್ದ ನೇರಳೆ ಮರದಿಂದ ನೇರಳೆಹಣ್ಣು ಕೀಳಲು ಆಕಾಶ್ ಮತ್ತು ಆವರ ಸ್ನೇಹಿತರು ಹೋಗಿದ್ದರು. ಈ ವೇಳೆ ವಿದ್ಯುತ್ ಶಾಕ್‌ನಿಂದ 13 ವರ್ಷದ ಆಕಾಶ್ ಎಂಬ ಬಾಲಕ ಸಾವನ್ನಪ್ಪಿದ್ದ. ಬಾಲಕ ಮರದಿಂದ ಬೀಳುವಾಗ ವಿದ್ಯುತ್ ತಂತಿ ಹಿಡಿದು ಶಾಕ್ ಹೊಡೆದಿತ್ತು. ಸಿಬ್ಬಂದಿ ಬೇಜವಾಬ್ದಾರಿಯಿಂದ ಸಾವು ಎಂದು ಅಮಾನತು ಮಾಡಲಾಗಿದೆ. ಘಟನೆ ನಡೆದ ತಕ್ಷಣವೇ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದರೂ ಚಿಕಿತ್ಸೆ ಫಲಕಾರಿಯಾಗದೇ ಬಾಲಕ ಆಕಾಶ್ ಸಾವನ್ನಪ್ಪಿದ್ದಾನೆ. ಕಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸ್ಟ್ರೆಪ್ಟೋಕೊಕ್ಕಾಲ್ ಟಾಕ್ಸಿಕ್ ಶಾಕ್ ಸಿಂಡ್ರೋಮ್ ಪ್ರಕರಣಗಳಲ್ಲಿ ಏರಿಕೆ

● ಪಾದದಿಂದ ಮೊಣಕಾಲಿನವರೆಗೆ ಊತವು ಕೆಲವೇ ಗಂಟೆಗಳಲ್ಲಿ ಹರಡುತ್ತದೆ, 48 ಗಂಟೆಗಳಲ್ಲಿ ಸಾವು ಸಾಧ್ಯತೆ



50 ವರ್ಷ ದಾಟಿದವರಿಗೆ ಅಪಾಯ

**ಟೋಕಿಯೋ:** ಮಾಂಸ ತಿನ್ನುವ ಬ್ಯಾಕ್ಟೀರಿಯಾ' ಹೊಸ ಆತಂಕ ಸೃಷ್ಟಿಸಿದೆ. ಜಪಾನ್‌ನಲ್ಲಿ ಹರಡುತ್ತಿರುವ ಈ ಅಪರೂಪದ ಬ್ಯಾಕ್ಟೀರಿಯಾ, ಗಂಭೀರ ಕಾಯಿಲೆ ಉಂಟುಮಾಡುತ್ತಿದ್ದು, 48 ಗಂಟೆಗಳಲ್ಲಿ ಸಾವಿಗೆ ಕಾರಣವಾಗುವಷ್ಟು ಅಪಾಯಕಾರಿಯಾಗಿದೆ.

ಇದು ವೈದ್ಯಕೀಯ ಲೋಕಕ್ಕೆ ಹೊಸ ಸವಾಲೊಡ್ಡಿದೆ. ಕೋವಿಡ್ ಸಮ ಯದ ನಿರ್ಬಂಧಗಳನ್ನು ಸಡಿಲಿಸಿದ ಬಳಿಕ ಜಪಾನ್‌ನಲ್ಲಿ ಇದು ಕಾಣಿಸಿಕೊಂಡಿದೆ ಎಂದು ಬ್ಲೂಮ್‌ಬರ್ಗ್ ವರದಿ ಹೇಳಿದೆ.

ಜಪಾನ್‌ನಲ್ಲಿ ಸ್ಟ್ರೆಪ್ಟೋಕೊಕ್ಕಲ್ ಟಾಕ್ಸಿಕ್ ಶಾಕ್ ಸಿಂಡ್ರೋಮ್ (ಎಸ್‌ಟಿಎಸ್‌ಎಸ್) ಪ್ರಕರಣಗಳಲ್ಲಿ ಏರಿಕೆ ಕಂಡುಬಂದಿದೆ. ಜೂನ್ 2ರ ವೇಳೆಗೆ 977 ಪ್ರಕರಣಗಳು ದಾಖಲಾಗಿವೆ. ಕಳೆದ ವರ್ಷ ಒಟ್ಟು 941 ಪ್ರಕರಣಗಳು ವರದಿಯಾಗಿದ್ದವು.

ಈ ವರ್ಷದ ಅರ್ಧ ಭಾಗದಲ್ಲಿಯೇ ಅದನ್ನೂ ಮೀರಿದ ಪ್ರಕರಣಗಳು ದಾಖಲಾಗಿವೆ ಎಂದು ಸಾಂಕ್ರಾಮಿಕ ಕಾಯಿಲೆಗಳ ರಾಷ್ಟ್ರೀಯ ಸಂಸ್ಥೆ ವರದಿ ಹೇಳಿದೆ. ಪ್ರಸ್ತುತ ದಾಖಲಾಗುತ್ತಿರುವ ಸೋಂಕಿನ ದರದ ವೇಗವನ್ನು ಗಮನಿಸಿದಾಗ, ಈ ವರ್ಷ ಒಟ್ಟಾರೆ 2,500 ಪ್ರಕರಣಗಳಿಗೆ ತಲುಪಬಹುದು ಎಂದು ಊಹಿಸಲಾಗಿದೆ.

**ಏನಿದರ ಲಕ್ಷಣಗಳು?:** ಈ ಕಾಯಿಲೆಯಲ್ಲಿ ಮರಣ ದರ ಶೇ 30ರಷ್ಟು ಇದ್ದು, ಅಪಾಯದ ಕರೆಗಂಟೆ ಬಾರಿಸಿದೆ. ಗ್ರೂಪ್ ಎಸ್ಟ್ರೆಪ್ಟೋಕೊಕ್ಕಸ್ (ಜಿಎಎಸ್), ಮಕ್ಕಳಲ್ಲಿ ಸ್ಟ್ರೆಪ್ ಥ್ರೋಟ್ ಎಂದು ಕರೆಯಲಾಗುವ ಲಘು ಕಾಯಿಲೆಯನ್ನು ಉಂಟುಮಾಡುತ್ತದೆ. ಇದರಲ್ಲಿ ಗಂಟಲು ನೋವು ಮತ್ತು ಊದುವಿಕೆ ಕಾಣಿಸಿಕೊಳ್ಳುತ್ತದೆ.

**1999ರಿಂದಲೂ ಆಗಾಗ್ಗೆ ಕಾಣಿಸಿಕೊಳ್ಳುತ್ತಿರುವ 'ಮಾಂಸ ತಿನ್ನುವ ಬ್ಯಾಕ್ಟೀರಿಯಾ' ಈಗ ಜಪಾನ್‌ನಲ್ಲಿ ಆತಂಕಕಾರಿ ಸ್ವರೂಪದಲ್ಲಿ ಹರಡುತ್ತಿದೆ. ಈ ವರ್ಷದ ಆರೇ ತಿಂಗಳಲ್ಲಿ 977 ಪ್ರಕರಣಗಳು ವರದಿಯಾಗಿವೆ. ಅವಯವ ಊತದೊಂದಿಗೆ ಕಾಣಿಸಿಕೊಳ್ಳುವ ಇದು, 48 ಗಂಟೆಗಳ ಒಳಗೆ ಸಾವನ್ನೂ ತರುವಷ್ಟು ಮಾರಕವಾಗಿದೆ.**

- **48 ಗಂಟೆಗಳಲ್ಲಿಯೇ ಸಾವು: ಜಪಾನ್‌ನಲ್ಲಿ ಮಾಂಸ ತಿನ್ನುವ ಬ್ಯಾಕ್ಟೀರಿಯಾ' ಆತಂಕ**
- **ಜಪಾನ್‌ನಲ್ಲಿ ಈ ವರ್ಷದ ಮೊದಲ ಆರು ತಿಂಗಳಲ್ಲಿಯೇ 977 ಎಸ್‌ಟಿಎಸ್‌ಎಸ್ ಪ್ರಕರಣಗಳು ದಾಖಲು**

ಆದರೆ ಕೆಲವು ಮಾದರಿಯ ಜಿಎಎಸ್‌ಗಳು ಅಂಗಾಂಗ ನೋವು, ಊತ, ಜ್ವರ ಹಾಗೂ ಕಡಿಮೆ ರಕ್ತದೊತ್ತಡದಂತಹ ಲಕ್ಷಣಗಳನ್ನು ತ್ವರಿತವಾಗಿ ಉಂಟುಮಾಡಬಹುದು. ಇದು ಜೀವಕೋಶಗಳ ಸಾವು, ಉಸಿರಾಟದ ತೊಂದರೆ, ಅಂಗಾಂಗ ವೈಫಲ್ಯ ಹಾಗೂ ಸಾವಿಗೆ ಕೂಡ ಕಾರಣವಾಗಬಹುದು. ವಯಸ್ಕರು, ಮುಖ್ಯವಾಗಿ 50 ವರ್ಷ ದಾಟಿದವರಿಗೆ ಈ ಕಾಯಿಲೆ ಹೆಚ್ಚು ಅಪಾಯಕಾರಿಯಾಗಿದೆ.

ಹೆಚ್ಚಿನ ಸಾವುಗಳು 48 ಗಂಟೆಗಳ ಒಳಗೆ ಸಂಭವಿಸಿವೆ. ಪಾದದಿಂದ ಮೊಣಕಾಲಿನವರೆಗೆ ಊತವು ಕೆಲವೇ ಗಂಟೆಗಳಲ್ಲಿ ಹರಡುತ್ತದೆ. ಅದಾಗಿ 48 ಗಂಟೆಗಳಲ್ಲಿ ಸಾವು ಉಂಟಾಗಬಹುದು ಎಂದು ಟೋಕಿಯೋ ಮಹಿಳಾ ವೈದ್ಯಕೀಯ ಕಾಲೇಜಿನ ಸಾಂಕ್ರಾಮಿಕ ಕಾಯಿಲೆ ವಿಭಾಗದ ಪ್ರೊಫೆಸರ್ ಕೆನ್ ಕಿಕುಚಿ ತಿಳಿಸಿದ್ದಾರೆ.

ಕೈಗಳನ್ನು ಸ್ವಚ್ಛವಾಗಿ ಇರಿಸಿಕೊಳ್ಳುವುದು ಬಹಳ ಮುಖ್ಯ. ಜತೆಗೆ ಯಾವುದೇ ತೆರೆದ ಗಾಯಗಳನ್ನು ಸೂಕ್ಷ್ಮವಾಗಿ ನಿಭಾಯಿಸಬೇಕು ಎಂದು ಕಿಕುಚಿ ಹೇಳಿದ್ದಾರೆ. ಇತ್ತೀಚಿನ ದಿನಗಳಲ್ಲಿ ಇತರೆ ದೇಶಗಳಲ್ಲಿಯೂ ಸೋಂಕು ಕಾಣಿಸಿಕೊಂಡಿದೆ. 2022ರಲ್ಲಿ ಕನಿಷ್ಠ ಐದು ಯುರೋಪಿಯನ್ ದೇಶಗಳು, ಎಸ್‌ಟಿಎಸ್‌ಎಸ್ ಸೇರಿದಂತೆ ಗ್ರೂಪ್ ಎ ಸ್ಟ್ರೆಪ್ಟೋಕೋಕ್ಕಸ್ (ಐಜಿಎಎಸ್) ಪ್ರಕರಣಗಳಲ್ಲಿ ಏರಿಕೆಯಾಗಿರುವ ಬಗ್ಗೆ ವಿಶ್ವ ಆರೋಗ್ಯ ಸಂಸ್ಥೆಗೆ ವರದಿ ಮಾಡಿದ್ದವು.

## ಭೂಮಿಯ ಕುರಿತು ಅಚ್ಚರಿಯ ಸಂಗತಿ ಪತ್ತೆಹಚ್ಚಿದ ವಿಜ್ಞಾನಿಗಳು



**ಕ್ಯಾಲಿಫೋರ್ನಿಯಾ:** ಭೂಮಿಯ ಒಳ ಭಾಗವು ಗ್ರಹ ದ ಮೇಲ್ಮೈಗಿಂತ ಹೆಚ್ಚು ನಿಧಾನವಾಗಿ ತಿರುಗುತ್ತಿದೆ ಎಂಬ ಬೆಚ್ಚಿಬೀಳಿಸುವ ಅಂಶವನ್ನು ವಿಜ್ಞಾನಿಗಳು ಪತ್ತೆ ಮಾಡಿದ್ದಾರೆ. ದಕ್ಷಿಣ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯದ ವಿಜ್ಞಾನಿಗಳು ಭೂಮಿಯ ಒಳಭಾಗವು ಗ್ರಹದ ಮೇಲ್ಮೈಗಿಂತ ಹೆಚ್ಚು ನಿಧಾನವಾಗಿ ತಿರುಗುತ್ತಿದೆ ಎಂದು ದೃಢಪಡಿಸಿದ್ದಾರೆ.

ಈ ಸಂಶೋಧನೆಯು ಗ್ರಹಗಳ ಯಂತ್ರಶಾಸ್ತ್ರದ ಬಗ್ಗೆ ಪ್ರಮುಖ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಮತ್ತು ಭೂಮಿಯ ಕಾಂತಕ್ಷೇತ್ರದ ಸ್ಥಿರತೆ ಮತ್ತು ನಮ್ಮ ದಿನಗಳ ಅವಧಿಯ ಮೇಲೆ ಗಮನಾರ್ಹ ಪರಿಣಾಮ ಬೀರಬಹುದು ಎಂದು ಸೈನ್ಸ್‌ಅಲರ್ಟ್ ವರದಿ ಮಾಡಿದೆ. ನೇಚರ್‌ನಲ್ಲಿ ಪ್ರಕಟವಾದ ಅಧ್ಯಯನವು 2010 ರ ಸುಮಾರಿಗೆ ಭೂಮಿ ಒಳಭಾಗವು ತನ್ನ ವೇಗವನ್ನು ಕಡಿಮೆ ಮಾಡಲು ಪ್ರಾರಂಭಿಸಿತು ಎಂಬುದಕ್ಕೆ ಪುರಾವೆಗಳು ದೊರೆತಿದೆ. ಇದು ಸುಮಾರು 40 ವರ್ಷಗಳಲ್ಲಿ ಮೊದಲ ಬಾರಿಗೆ ಭೂಮಿಯ ನಿಲುವಂಗಿಗಿಂತ ನಿಧಾನವಾಗಿ ಚಲಿಸುತ್ತಿದೆ ಎಂದು ಕಂಡು ಹಿಡಿಯಲಾಗಿದೆ. ಗಮನಾರ್ಹವಾಗಿ, ಒಳಗಿನ ತಿರುಳು ಕಬ್ಬಿಣ ಮತ್ತು ನಿಕಲ್‌ನ ಅತಿ-ಬಿಸಿಯಾದ, ಅತಿ-ದಟ್ಟವಾದ ಗೋಳ-ನಮ ಪಾದಗಳ ಕೆಳಗೆ 4,800 ಕಿ.ಮೀ.ಗಿಂತ ಹೆಚ್ಚು ಇದೆ. ಅಧ್ಯಯನಕ್ಕಾಗಿ, ಜಾನ್ ವಿಡೇಲ್ ಮತ್ತು ಅವರ ಸಹೋದ್ಯೋಗಿಗಳು ದಕ್ಷಿಣ ಅಟ್ಲಾಂಟಿಕ್‌ನ ದಕ್ಷಿಣ ಸ್ಯಾಂಡ್‌ವಿಚ್ ದ್ವೀಪಗಳ ಸುತ್ತಲೂ 1991 ಮತ್ತು 2023 ರ ನಡುವೆ ದಾಖಲಾದ 121 ಪುನರಾವರ್ತಿತ ಭೂಕಂಪಗಳ ವಾಚನಗೋಷ್ಠಿಯನ್ನು ವಿಶ್ಲೇಷಿಸಿದ್ದಾರೆ.

ಅವರು 1971 ಮತ್ತು 1974 ರ ನಡುವೆ ನಡೆಸಲಾದ ಸೋವಿಯತ್ ಪರಮಾಣು ಪರೀಕ್ಷೆಗಳ ಡೇಟಾವನ್ನು ಬಳಸಿದರು, ಜೊತೆಗೆ ಆಂತರಿಕ ಕೋರ್‌ನ ಇತರ ಅಧ್ಯಯನಗಳಿಂದ ಫ್ರೆಂಚ್ ಮತ್ತು ಅಮೇರಿಕನ್ ಪರಮಾಣು ಪರೀಕ್ಷೆಗಳನ್ನು ಬಳಸಿಕೊಂಡಿದ್ದಾರೆ.

ಭೂಮಿಯ ಕಾಂತಕ್ಷೇತ್ರವನ್ನು ಉತ್ಪಾದಿಸುವ ಸುತ್ತಮುತ್ತಲಿನ ದ್ರವದ ಹೊರಭಾಗದ ಪ್ರಕ್ಷುಬ್ಧ ಚಲನೆಯಿಂದ ಒಳಗಿನ ಭಾಗದ ತಿರುಗುವಿಕೆಯ ನಿಧಾನಗತಿಯು ಉಂಟಾಗುತ್ತದೆ ಎಂದು ವಿಡೇಲ್ ವಿವರಿಸಿದರು, ಮೇಲಿನ ಕಲ್ಲಿನ ನಿಲುವಂಗಿಯಲ್ಲಿನ ದಟ್ಟವಾದ ಪ್ರದೇಶಗಳಿಂದ ಗುರುತ್ವಾಕರ್ಷಣೆಯು ಎಳೆಯುತ್ತದೆ ಎಂದಿದ್ದಾರೆ.

ಇದು ಅಂತಿಮವಾಗಿ ಇಡೀ ಗ್ರಹದ ತಿರುಗುವಿಕೆಯನ್ನು ಬದಲಾಯಿಸಬಹುದು, ನಮ ದಿನಗಳನ್ನು ಹೆಚ್ಚಿಸಬಹುದು. ಒಳಗಿನ ತಿರುಳನ್ನು ಹಿಮ್ಮೆಟ್ಟಿಸುವುದು ಒಂದು ಸೆಕೆಂಡಿನ ಭಿನ್ನರಾಶಿಗಳಿಂದ ಒಂದು ದಿನದ ಉದ್ದವನ್ನು ಬದಲಾಯಿಸಬಹುದು ಎಂದು ವಿಡೇಲ್ ಹೇಳಿದರು.

ಸೆಕೆಂಡಿನ ಸಾವಿರ ಭಾಗದ ಕ್ರಮದಲ್ಲಿ, ಸಮುದ್ರಗಳು ಮತ್ತು ವಾತಾವರಣದ ಮಂಥನದ ಶಬ್ದದಲ್ಲಿ ಬಹುತೇಕ ಕಳೆದುಹೋಗಿರುವುದನ್ನು ಗಮನಿಸುವುದು ತುಂಬಾ ಕಷ್ಟ ಎಂದಿದ್ದಾರೆ.

**ಈ ಬದಲಾವಣೆಯ ಸುಳಿವು ನೀಡಿದ ಸೀಸೋಗ್ರಾಮ್‌ಗಳನ್ನು ನಾನು ಮೊದಲು ನೋಡಿದಾಗ, ನಾನು ದಿಗ್ಭ್ರಮೆಗೊಂಡೆ. ಆದರೆ ಅದೇ ಮಾದರಿಯನ್ನು ಸೂಚಿಸುವ ಎರಡು ಡಜನ್ ಹೆಚ್ಚಿನ ವೀಕ್ಷಣೆಗಳನ್ನು ನಾವು ಕಂಡುಕೊಂಡಾಗ, ಫಲಿತಾಂಶವು ಅನಿವಾರ್ಯವಾಗಿತ್ತು. ಹಲವು ದಶಕಗಳಲ್ಲಿ ಮೊದಲ ಬಾರಿಗೆ ಒಳಗಿನ ತಿರುಳು ನಿಧಾನವಾಯಿತು. ಇತರ ವಿಜ್ಞಾನಿಗಳು ಇತ್ತೀಚೆಗೆ ಇದೇ ರೀತಿಯ, ವಿಭಿನ್ನ ಮಾದರಿಗಳಿಗಾಗಿ ವಾದಿಸಿದ್ದಾರೆ, ಆದರೆ ನಮ ಇತ್ತೀಚಿನ ಅಧ್ಯಯನವು ಅತ್ಯಂತ ಮನವೊಪ್ಪಿಸುವ ನಿರ್ಣಯವನ್ನು ಒದಗಿಸುತ್ತದೆ**

**-ವಿಡೇಲ್, ಡೀನ್‌ಪ್ರೊಫೆಸರ್**

## ಮಾಯವತಿ ಓಟ್‌ಬ್ಯಾಂಕ್ ಅಖಿಲೇಶ್ ಕಡೆಗೆ ತಿರುಗಿದೆ

**ಲಕ್ನೋ:** ಬಹುಜನ ಸಮಾಜ ಪಕ್ಷದ (ಬಿಎಸ್‌ಪಿ) ಸಂಸ್ಥಾಪಕರಲ್ಲಿ ಒಬ್ಬರಾಗಿ ಇದೀಗ ಎಸ್‌ಪಿಯಿಂದ ಸಂಸದರಾಗಿ ಚುನಾಯಿತರಾಗಿರುವ ಆರ್‌ಕೆ ಚೌಧರಿ ಅವರು ಬಿಎಸ್‌ಪಿ ಮುಖ್ಯಸ್ಥೆ ಮಾಯಾವತಿ ಅವರು ಬಹುಜನ ಚಳವಳಿಯನ್ನು ನಿರ್ಲಕ್ಷಿಸುತ್ತಿದ್ದಾರೆ ಹೀಗಾಗಿಯೇ ಆ ಪಕ್ಷದ ಸೋಲಿಗೆ ಕಾರಣವಾಗಿದೆ ಎಂದಿದ್ದಾರೆ. ಈಗ, ಎಸ್‌ಪಿ ಮುಖ್ಯಸ್ಥ ಅಖಿಲೇಶ್ ಯಾದವ್ ಅವರು ಪಿಡಿಎ ಎಂಬ ಘೋಷಣೆಯೊಂದಿಗೆ ಹಿಂದುಳಿದ ಜಾತಿಗಳು ಮತ್ತು ಹಿಂದುಳಿದ ಸಮುದಾಯಗಳಿಗೆ ಸಾಮಾಜಿಕ ಸಮಾನತೆಗಾಗಿ ಒತ್ತಾಯಿಸಿ ಬಹುಜನ ಚಳವಳಿಯನ್ನು ಮುನ್ನಡೆಸುತ್ತಿದ್ದಾರೆ ಇದು ಅವರ ವರ್ಚಸ್ಸಿಗೆ ಕಾರಣ ಎಂದಿದ್ದಾರೆ.

ಪಿಟಿಐ ಜೊತೆಗಿನ ಸಂವಾದದಲ್ಲಿ ಅವರು, ಬಿಎಸ್‌ಪಿಯ ಕುಸಿತದ ಗ್ರಾಫ್ ಮತ್ತು ಕಾನ್ಶಿರಾಮ್ ಸ್ಥಾಪಿಸಿದ ಪಕ್ಷಕ್ಕೆ ಭವಿಷ್ಯವೇನು ಎಂಬುದರ ಕುರಿತು ಚರ್ಚಿಸಿದರು.



ಅವರ ಪ್ರಕಾರ, ಉತ್ತರ ಪ್ರದೇಶದ ಕೋರ್ ದಲಿತ ರಾಜಕಾರಣವು ಈ ಕ್ಷಣದಲ್ಲಿ ನಾಯಕರಹಿತವಾಗಿದೆ, ಆದರೆ ಮುಂಬರುವ ದಿನಗಳಲ್ಲಿ, ಕಾನ್ಶಿರಾಮ್ ಅ ವರು ಜಾಗತಗೊಳಿಸಿದ ಬಹುಜನತ್ವದ ಜ್ವಾಲೆಯನ್ನು ಎಸ್ಪಿ ಮುಂದಕ್ಕೆ ಒಯ್ಯುತ್ತದೆ ಎಂಬ ವಿಶ್ವಾಸವಿದೆ ಎಂದಿದ್ದಾರೆ. ಇತ್ತೀಚಿನ ಲೋಕಸಭೆ ಚುನಾವಣೆಯಲ್ಲಿ ಬಿಎಸ್‌ಪಿ ಒಂದು ಸ್ಥಾನವನ್ನೂ ಗೆಲ್ಲಲು ಸಾಧ್ಯವಾಗದಿರಲು ಕಾರಣವೇನು ಎಂದು ಕೇಳಿದಾಗ, ಚೌಧರಿ ಅವರು, ಮಾಯಾವತಿ ಜಿ ನಮ ನಾಯಕಿಯಾಗಿದ್ದಾರೆ, ನಾವು ಅವರನ್ನು ಗೌರವಿಸುತ್ತೇವೆ, ಆದರೆ ಯಾರಾದರೂ ಕಾನ್ಶಿರಾಮ್ ಜಿ ಅವರ ಚಳವಳಿಯನ್ನು ಕೊನೆಗೊಳಿಸಿದ್ದರೆ, ಅದು ಬೆಹೆನ್ ಜಿ ಈಗ ಆ ಚಳವಳಿಯನ್ನು ಮುನ್ನಡೆಸುವ ಹಾದಿಯಲ್ಲಿ ಎಸ್‌ಪಿ ಮುಖ್ಯಸ್ಥ ಅಖಿಲೇಶ್ ಯಾದವ್ ನಡೆಯಲು ಆರಂಭಿಸಿದ್ದಾರೆ ಎಂದಿದ್ದಾರೆ.

ಲೋಕಸಭೆ ಚುನಾವಣೆಯಲ್ಲಿ ಎಸ್‌ಪಿ ದಲಿತ ಮತಗಳಲ್ಲಿ ಗಣನೀಯ ಪಾಲು ಪಡೆದಿದೆ ಎಂದು ಪ್ರತಿ ಪಾದಿಸಿದ ಅವರು, ಎಸ್‌ಪಿ ಈ ಬಾರಿ ಬಹು ಜನ ಸಮಾಜ ಪಕ್ಷದ ಕೋರ್ ಮತವನ್ನು ಕೇಳದೆ ಪಡೆದುಕೊಂಡಿದೆ ಎಂದರು. ಈಗಿನ ಬೆಳವಣಿಗೆಯನ್ನು ಗಮನಿಸಿದರೆ ಬಿಎಸ್‌ಪಿ ಸಂಸ್ಥಾಪಕ ಕಾನ್ಶಿರಾಮ್ ಅವರ ಕನಸನ್ನು ಎಸ್‌ಪಿ ನಾಯಕ ಅಖೀಲೇಶ್ ಯಾದವ್ ಮುಂದುವರೆಸುತ್ತಾರೆ ಎಂಬ ವಿಶ್ವಾಸವಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

## ಕೋಟಾದಲ್ಲಿ ಆತಹತ್ಯೆಗೆ ಶರಣಾದ ಜೆಇಇ ವಿದ್ಯಾರ್ಥಿ

**ಜೈಪುರ:** ಐಐಟಿ-ಜೆಇಇ ಸ್ಪರ್ಧಾತಕ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ 17 ವರ್ಷದ ಯುವಕನೊಬ್ಬ ತನ್ನ ಕೊಠಡಿಯಲ್ಲಿ ನೇಣು ಬಿಗಿದುಕೊಂಡು ಆತಹತ್ಯೆ ಮಾಡಿಕೊಂಡಿರುವ ಘಟನೆ ರಾಜಸ್ಥಾನದ ಕೋಟಾ ನಗರದಲ್ಲಿ ನಡೆದಿದೆ. ಬಿಹಾರದ ಮೋತಿಹಾರಿ ನಿವಾಸಿ ಆಯುಷ್ ಜೈಸ್ವಾಲ್ ಅವರು ಆತಹತ್ಯೆ ಮಾಡಿಕೊಂಡ ದುರ್ದೈವಿ.

ಸ್ಪರ್ಧಾತಕ ಪರೀಕ್ಷೆಗೆ ತಯಾರಿ ನಡೆಸಲು ಎರಡು ವರ್ಷಗಳಿಂದ ಮಹಾವೀರ್ ನಗರ ಪ್ರದೇಶದ ಸಾಮ್ರಾಟ್ ಚೌಕ್ ಬಳಿಯ ಪೇಯಿಂಗ್ ಗೆಸ್ಟ್ ಹೌಸ್‌ನಲ್ಲಿ ತಂಗಿದ್ದ ಜೈಸ್ವಾಲ್ ತಡರಾತ್ರಿಯವರೆಗೂ ಕೊಠಡಿಯಿಂದ ಹೊರಗೆ ಬಾರದಿದ್ದಾಗ ಆತನ ಸ್ನೇಹಿತರು ಪೇಯಿಂಗ್ ಗೆಸ್ಟ್‌ಹೌಸ್ ಮಾಲೀಕರಿಗೆ ಮಾಹಿತಿ ನೀಡಿದ್ದರು. ವಿದ್ಯಾರ್ಥಿ ಬಾಗಿಲು ತೆರೆಯದಿದ್ದಾಗ ಪೇಯಿಂಗ್ ಗೆಸ್ಟ್ ಹೌಸ್ ಮಾಲೀಕರು ಪೊಲೀಸರಿಗೆ ದೂರು ನೀಡಿದ್ದರು. ಸ್ಪರ್ಧಾತಕ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ ಬಾಲಕ ತಡರಾತ್ರಿ ಆತಹತ್ಯೆಗೆ ಶರಣಾಗಿದ್ದಾನೆ.

ಆತನ ಕೋಣೆಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾನೆ. ಇನ್ನೂ ಯಾವುದೇ ಸೂಸೈಡ್ ನೋಟ್ ಪತ್ತೆಯಾಗಿಲ್ಲ. ಕುಟುಂಬ ಸದಸ್ಯರು ಇಲ್ಲಿಗೆ ಬಂದ ನಂತರ ಮರಣೋತ್ತರ ಪರೀಕ್ಷೆ ನಡೆಸಲಾಗುವುದು ಎಂದು ಮಹಾವೀರ್ ನಗರ ಎಸ್‌ಎಚ್‌ಒ ಮಹೇಂದ್ರ ತಿಳಿಸಿದ್ದಾರೆ.

ಕೋಟಾ ಪೊಲೀಸರು ವಿದ್ಯಾರ್ಥಿಗಳ ಆತಹತ್ಯೆಯನ್ನು ತಡೆಯಲು ಫೇಸ್‌ಬುಕ್-ಪೋಷಕ ಮೆಟಾದೊಂದಿಗೆ ಟೈ ಅಪ್ ಮಾಡಿಕೊಂಡಿದ್ದು ಆತಹತ್ಯೆಗೆ ಶರಣಾಗದಂತೆ ಮನವಿ ಮಾಡಿಕೊಳ್ಳುತ್ತಿದ್ದರು ದಿನೇ ದಿನೇ ಆತಹತ್ಯೆ ಪ್ರಕರಣಗಳು ಹೆಚ್ಚುತ್ತಲೆ ಇರುವುದು ಆತಂಕಕ್ಕೆ ಕಾರಣವಾಗಿದೆ. ಶಿಕ್ಷಣ ಹಬ್ ಕೋಟಾದಲ್ಲಿ ಈ ವರ್ಷ ಸ್ಪರ್ಧಾತಕ ಪರೀಕ್ಷೆಗೆ ತಯಾರಿ ನಡೆಸುತ್ತಿರುವ 11 ವಿದ್ಯಾರ್ಥಿಗಳು ಇದುವರೆಗೂ ಆತಹತ್ಯೆಗೆ ಶರಣಾಗಿದ್ದಾರೆ.

## ಭಾರತೀಯ ಹೈಕಮಿಷನ್‌ನ ಯೋಗ ಕಾರ್ಯಕ್ರಮ



700 ಮಂದಿ ಭಾಗಿ

**ಲಂಡನ್:** ಅಂತರರಾಷ್ಟ್ರೀಯ ಯೋಗ ದಿನಕ್ಕೆ ಕೆಲ ದಿನಗಳು ಮಾತ್ರ ಬಾಕಿ ಉಳಿದಿದ್ದು, ಇದಕ್ಕೆ ಪೂರ್ವಭಾವಿಯಾಗಿ ಬ್ರಿಟನ್ ರಾಜಧಾನಿ ಲಂಡನ್‌ನಲ್ಲಿ ಭಾರತೀಯ ಹೈಕಮಿಷನ್ ಯೋಗ ಕಾರ್ಯಕ್ರಮವನ್ನು ಆಯೋಜಿಸಿತ್ತು. ಕಾರ್ಯಕ್ರಮದಲ್ಲಿ 700 ಮಂದಿ ಉತ್ಸಾಹದಿಂದ ಪಾಲ್ಗೊಂಡರು. ಐಕಾನಿಕ್ ಪ್ರತಿಮೆಗಳಿರುವ ಟ್ರಫಾಲ್ಗರ್ ಸ್ಕ್ವೇರ್‌ನಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಗಮನ ಸೆಳೆದಿದೆ. ಈ ಕುರಿತಂತೆ ಮಾತನಾಡಿರುವ ಇಂಡಿಯನ್ ಹೈಕಮಿಷನರ್ ವಿಕ್ರಮ್ ದೊರೈಸ್ವಾಮಿ, ಲಂಡನ್‌ನ ಈ ಕೇಂದ್ರ ಸ್ಥಾನದಲ್ಲಿ 700ಕ್ಕೂ ಅಧಿಕ ಜನರನ್ನು ಸೇರಿ ಸಲು ಸಾಧ್ಯವಾದದ್ದರಿಂದ ಅತ್ಯಂತ ಸಂತಸವಾಗಿದೆ. ಪ್ರತಿಷ್ಠಿತ ಪ್ರತಿಮೆಗಳು ಸುತ್ತಲೂ ಇವೆ. ಹಲವು ಯೋಗ ಶಾಲೆಗಳು ಸಹ ನಮ್ಮ ಜೊತೆ ಕೈಜೋಡಿಸಿವೆ' ಎಂದಿದ್ದಾರೆ. ವಿವಿಧ ಸಮುದಾಯಗಳ ಜನರು ಇಂದು ಯೋಗ ಕಾರ್ಯಮದಲ್ಲಿ ಭಾಗವಹಿಸಿದ್ದರು. ಯೋಗ ಎಲ್ಲರನ್ನೂ ಒಗ್ಗೂಡಿಸುತ್ತದೆ ಮತ್ತು ಎಲ್ಲರಿಗಾಗಿ ಯೋಗ ಎಂದು ನಮ್ಮ ಪ್ರಧಾನಿ ಮೋದಿ ಹೇಳುತ್ತಾರೆ ಎಂದು ದೊರೈಸ್ವಾಮಿ ಹೇಳಿದರು. ಈ ವರ್ಷದ ಯೋಗ ಕಾರ್ಯಕ್ರಮದಲ್ಲಿ ಯೋಗ ಶಾಲೆಗಳು, ವಿವಿಧ ಸಮುದಾಯಗಳ ಜನರು ಅಧಿಕ ಸಂಖ್ಯೆಯಲ್ಲಿ ಪಾಲ್ಗೊಂಡಿರುವುದು ವಿಶೇಷ. ಆದರೆ, ಕಾರ್ಯಕ್ರಮದಲ್ಲಿ ಬದಲಾವಣೆ ಇಲ್ಲ ಎಂದು ಅವರು ಹೇಳಿದರು.


ಇದೇವೇಳೆ ಮಾತನಾಡಿದ ಬ್ರಿಟನ್ ಪ್ರಜೆ ಇಂದರ್‌ಪಾಲ್ ಓಪ್ರಿ ಚಾಂಡೆಲ್ ಈ ವರ್ಷದ ಯೋಗ ಕಾರ್ಯಕ್ರಮದ ಥೀಮ್ 'ಮಹಿಳಾ ಸಬಲೀಕರಣ' ಎಂದು ಹೇಳಿದರು. ಭಾರತೀಯರು ಮತ್ತು ಏಷ್ಯನ್ನರಿಗೆ ಯೋಗವು ಅವರ ಪರಂಪರೆಯ ಪ್ರಮುಖ ಭಾಗವಾಗಿದೆ ಎಂದು ಹೇಳಿದರು.

'ಇವತ್ತಿನ ಕಾರ್ಯಕ್ರಮದ ವಿಶೇಷವೆಂದರೆ ಇಲ್ಲಿಗೆ ಕ್ರಿಕೆಟ್ ಸರಣಿಗಾಗಿ ಆಗಮಿಸಿರುವ ಭಾರತೀಯ ಕಿವುಡರ ಕ್ರಿಕೆಟ್ ತಂಡದ ಸದಸ್ಯರು ಯೋಗ ಶಿಬಿರದಲ್ಲಿ ಭಾಗವಹಿಸಿದ್ದಾರೆ' ಎಂದೂ ಅವರು ತಿಳಿಸಿದ್ದಾರೆ.

## ಮತಯಂತ್ರ ಕುರಿತು ಮಸ್ಕ್, ರಾಜೀವ್ ಮಸ್ತ್ ಚರ್ಚೆ

**ನವದೆಹಲಿ:** ಜಗತ್ತಿನ ನಂ 1 ಶ್ರೀಮಂತ ಹಾಗೂ ಎಕ್ಸ್ ಸಂಸ್ಥೆಯ ಮಾಲಿಕ ಅಮೆರಿಕಾದ ಉದ್ಯಮಿ ಎಲಾನ್ ಮಸ್ಕ್‌ರೊಂದಿಗೆ ಕೇಂದ್ರ ಸರ್ಕಾರದ ಮಾಜಿ ಸಚಿವ ರಾಜೀವ್ ಚಂದ್ರಶೇಖರ್ ನಡೆಸಿರುವ ಚರ್ಚೆ ಸಾಮಾಜಿಕ ಜಾಲತಾಣದಲ್ಲಿ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಅಮೆರಿಕಾ ಅಧ್ಯಕ್ಷರ ಚುನಾವಣೆ ಕುರಿತಂತೆ ಸ್ವತಂತ್ರ ಅಭ್ಯರ್ಥಿ ರಾಬರ್ಟ್ ಎಫ್.ಕೆನಡಿ ಜೂನಿಯರ್ ಅವರು ಸಾಮಾಜಿಕ ಜಾಲತಾಣದಲ್ಲಿ ಸಂದೇಶವೊಂದನ್ನು ಹಂಚಿಕೊಂಡಿದ್ದು, ಪೋರ್ಟ್ ರಿಪೋದ ಪ್ರಾಥಮಿಕ ಚುನಾವಣೆಯಲ್ಲಿ ಬಳಸಲಾದ ಮತಯಂತ್ರಗಳು ನೂರಾರು ಅಕ್ರಮಗಳಿಗೆ ಕಾರಣವಾಗಿವೆ.

ಅದೃಷ್ಟವಶಾತ್ ಪೇಪರ್ ಮತದಾನ ಇದ್ದಿದ್ದರಿಂದಾಗಿ ಸಮಸ್ಯೆಯನ್ನು ಗುರುತಿಸಿ ಅಕ್ರಮಗಳನ್ನು ಸರಿಪಡಿಸಲು ಸಾಧ್ಯವಾಗಿದೆ. ಬ್ಯಾಲೆಟ್ ಪೇಪರ್ ಮತದಾನ ಇಲ್ಲದೇ ಇರದಿದ್ದರೆ ನ್ಯಾಯವ್ಯಾಪ್ತಿಯ ಗತಿಯೇನು? ಎಂದು ಪ್ರಶ್ನಿಸಿದರು. ಸಾಮಾಜಿಕ ಜಾಲತಾಣದಲ್ಲಿಯೇ ಪ್ರತಿಕ್ರಿಯಿಸಿರುವ ಎಲಾನ್‌ಮಸ್ಕ್ ನಾವು ಮತಯಂತ್ರಗಳನ್ನು ನಿವಾರಿಸಿ ಹಾಕಬೇಕಿದೆ. ಅವುಗಳು ಮನುಷ್ಯರು ಅಥವಾ ಕೃತಕ



ಬುದ್ಧಿಮತ್ತೆಗಳಿಂದ ಹ್ಯಾಕ್ ಆಗುವ ಸಂಭವನೀಯತೆ ಇದೆ. ಅದು ಸಣ್ಣದಾಗ ಬಹುದು ಅಥವಾ ದೊಡ್ಡ ಪ್ರಮಾಣದಲ್ಲೂ ಇರಬಹುದು ಎಂದಿದ್ದಾರೆ.

ಇದಕ್ಕೆ ಮಧ್ಯಪ್ರವೇಶಿಸಿರುವ ಭಾರತ ಸರ್ಕಾರದ ಮಾಹಿತಿ ಎಲೆಕ್ಟ್ರಾನಿಕ್ಸ್, ಮಾಹಿತಿ ತಂತ್ರಜ್ಞಾನ ಇಲಾಖೆಯ ಮಾಜಿ ಸಚಿವ ರಾಜೀವ್ ಚಂದ್ರಶೇಖರ್ ಅವರು, ಇದೊಂದು ಸಾರ್ವತ್ರಿಕವಾದ ತಪ್ಪು ಹೇಳಿಕೆಯಾಗಿದೆ. ಯಾರಿಂದಲೂ ಸುರಕ್ಷಿತವಾದ ಡಿಜಿಟಲ್ ಸಲಕರಣೆಯನ್ನೇ ಕಂಡುಹಿಡಿಯಲಾಗುವುದಿಲ್ಲ ಎಂಬುದು ತಪ್ಪು. ಎಲಾನ್‌ಮಸ್ಕ್‌ರವರ ಅಭಿಪ್ರಾಯಗಳು ಅಮೆರಿಕಾ ಮತ್ತು ಇತರೆ ಸ್ಥಳಗಳಿಗೆ ಅನ್ವಯಿಸಬಹುದು. ಅಲ್ಲಿ ಇಂಟರ್‌ನೆಟ್ ಮತ್ತು ಕಂಪ್ಯೂಟರ್ ವೇದಿಕೆಗಳೊಂದಿಗೆ ಸಂಪರ್ಕಿಸುವ ಮತಯಂತ್ರಗಳನ್ನು ಬಳಸಲಾಗುತ್ತಿದೆ.

**ಅಮೆರಿಕದ ನಾಗರಿಕರು ತಾವು ಚಲಾಯಿಸಿದ ಪ್ರತಿಯೊಂದು ಮತವೂ ಎಣಿಕೆ ಯಾಗಿದೆಯೇ?, ಮತದಾನ ಹ್ಯಾಕ್ ಆಗಿಲ್ಲವೇ? ಎಂಬುದನ್ನು ತಿಳಿದುಕೊಳ್ಳಲು ಬಯಸುತ್ತಾರೆ. ಚುನಾವಣೆಯಲ್ಲಿ ಮತಯಂತ್ರಗಳ ಮಧ್ಯಪ್ರವೇಶವನ್ನು ತಡೆಯಲು ಮತಪತ್ರಗಳ ವ್ಯವಸ್ಥೆ ಮಾಡಬೇಕಿದೆ. ನಮ ಆಡಳಿತ ಈ ನಿಟ್ಟಿನ ನಿರ್ಧಾರ ತೆಗೆದುಕೊಳ್ಳುತ್ತದೆ. ಖಾತ್ರಿಯಾದ ಪ್ರಾಮಾಣಿಕ, ಮುಕ್ತ ಚುನಾವಣೆಯ ಅಗತ್ಯವಿದೆ**

**-ರಾಜೀವ್ ಚಂದ್ರಶೇಖರ್**

ಆದರೆ ಭಾರತದಲ್ಲಿನ ಮತಯಂತ್ರಗಳ ವಿನ್ಯಾಸ ಸುರಕ್ಷಿತವಾಗಿದೆ. ಯಾವುದೇ ಇಂಟರ್‌ನೆಟ್, ಬ್ಲೂಟೂತ್, ವೈ-ಫೈನಂತಹ ಸಂಪರ್ಕಗಳು ಜೋಡಣೆಯಾಗಿಲ್ಲ. ಕಾರ್ಖಾನೆಯಲ್ಲೇ ಪ್ರೋಗ್ರಾಮಿಂಗ್ ಮಾಡಲಾಗುತ್ತದೆ. ಅದನ್ನು ಮತ್ತೆ ಪರಿಷ್ಕರಿಸಲು ಅಥವಾ ನಿಯಂತ್ರಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

## ನೀಟ್-ಎನ್‌ಟಿಎ ರಕ್ಷಣೆಗೆ ನಿಲ್ಲುವುದನ್ನು ಕೇಂದ್ರ ನಿಲ್ಲಿಸಲಿ

**ಚೆನ್ನೈ:** ನೀಟ್ ಪರೀಕ್ಷೆಯು ವಿದ್ಯಾರ್ಥಿಗಳ ಹಿತಾಸಕ್ತಿಗೆ ವಿರುದ್ಧವಾಗಿದ್ದು, ಸಾಮಾಜಿಕ ನ್ಯಾಯ ಮತ್ತು ಬಡತನದ ವಿರುದ್ಧವೂ ಆಗಿರುವುದರಿಂದ ಕೇಂದ್ರ ಸರ್ಕಾರವು ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ(ಎನ್‌ಟಿಎ) ರಕ್ಷಣೆಗೆ ನಿಲ್ಲುವುದನ್ನು ಬಿಡಬೇಕು ಎಂದು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಹೇಳಿದರು.

ನೀಟ್ ಪರೀಕ್ಷೆಯ ಕುರಿತು ಅಸಮಧಾನ ವ್ಯಕ್ತಪಡಿಸಿ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಸ್ಟಾಲಿನ್, 'ನೀಟ್ ಸುತ್ತ ನಡೆಯುತ್ತಿರುವ ವಿವಾದಗಳು ಮೂಲಭೂತವಾಗಿ ಅದರ ಅಸಮಾನತೆಯ ಸ್ವರೂಪವನ್ನು ಎತ್ತಿ ತೋರಿಸುತ್ತಿದೆ. ಸಾವಿರಾರು ವರ್ಷಗಳಿಂದ ಶಿಕ್ಷಣವನ್ನು ನಿರಾಕರಿಸಿದ ಸಮಾಜದಲ್ಲಿ ತುಳಿತಕ್ಕೊಳಗಾದವರ ಏಳಿಗೆಗೆ ಹೆಚ್ಚಿನ ಅವಕಾಶಗಳನ್ನು ನೀಡಬೇಕಿದೆ. ಆದರೆ ನೀಟ್ ಪರೀಕ್ಷೆ ಅಂತಹ ವಿದ್ಯಾರ್ಥಿಗಳ ಅವಕಾಶಗಳಿಗೆ ಅಡ್ಡಿ



ಯಾಗುತ್ತಿದೆ' ಎಂದರು. 'ಈ ಪರೀಕ್ಷೆ ವಿಚಾರವಾಗಿ ತಮಿಳುನಾಡಿನ ಪರಿಶಿಷ್ಟ ಪಂಗಡಕ್ಕೆ ಸೇರಿದ ಅನಿತಾಳಿಂದ ಹಿಡಿದು ಅಸಂಖ್ಯಾತ ವಿದ್ಯಾರ್ಥಿಗಳು ದುರಂತಮಯವಾಗಿ ತಮ್ಮ ಪ್ರಾಣವನ್ನು ಕಳೆದುಕೊಂಡಿದ್ದಕ್ಕೆ ನಾವೆಲ್ಲರೂ ಸಾಕ್ಷಿಯಾಗಿದ್ದೇವೆ. ಕೇಂದ್ರ ಸರ್ಕಾರವು ವಿದ್ಯಾರ್ಥಿ ವಿರೋಧಿ, ಸಾಮಾಜಿಕ ನ್ಯಾಯ ವಿರೋಧಿ ಮತ್ತು ಬಡವರ ವಿರೋಧಿ ನೀಟ್ ಪರ ನಿಲ್ಲುವುದನ್ನು ಬಿಡಬೇಕು' ಎಂದರು.

**'ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯನ್ನು ಕೇಂದ್ರ ಶಿಕ್ಷಣ ಸಚಿವರು ಸಮರ್ಥಿಸಿಕೊಂಡಿದ್ದರೂ, ಇತ್ತೀಚಿನ ಘಟನೆಗಳು ವಿಭಿನ್ನ ಚಿತ್ರಣವನ್ನು ನೀಡುತ್ತಿವೆ. ಹಣಕ್ಕಾಗಿ ಓಎಂಆರ್ ಶೀಟ್‌ಗಳನ್ನು ಪರೀಕ್ಷಾ ಮೇಲ್ವಿಚಾರಕರೇ ತಿದ್ದಿದ ಆರೋಪದ ಮೇಲೆ ಗುಜರಾತ್ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ'**

**-ಎಂ.ಕೆ.ಸ್ಟಾಲಿನ್, ಮುಖ್ಯಮಂತ್ರಿ**

# ಮೂರು ನಿಮಿಷಗಳಲ್ಲೇ ಪಿಎನ್‌ಜಿ ಜ್ಯುವೆಲ್ಲರ್ಸ್ ಮಳಿಗೆ ಖಾಲಿ

## ಭಾರತೀಯ ಮೂಲದ ಚಿನ್ನಾಭರಣ ಮಳಿಗೆ ಲೂಟಿ: ಅಮೆರಿಕದ ಕ್ಯಾಲಿಫೋರ್ನಿಯಾ ರಾಜ್ಯದ ಸನ್ನಿವೇಲ್‌ನಲ್ಲಿ ನಡೆದ ಘಟನೆ



ರಕ್ಷಣೆಗೆ ಇದ್ದದ್ದು ಕೇವಲ ಒಬ್ಬನೇ

**ಅಮೆರಿಕ:** ಈ ಘಟನೆ ಸಿನಿಮಾ ದೃಶ್ಯದಂತೆ ಭಾಸವಾಗುತ್ತೆ. ಚಿನ್ನಾಭರಣ ಮಳಿಗೆಗೆ ಸುಮಾರು 20 ಮುಸುಕುಧಾರಿ ವ್ಯಕ್ತಿಗಳು ನುಗ್ಗುತ್ತಾರೆ.

ಈ ವೇಳೆ ಅಂಗಡಿಯ ರಕ್ಷಣೆಗೆ ಇದ್ದದ್ದು ಕೇವಲ ಒಬ್ಬನೇ ಒಬ್ಬ ಭದ್ರತಾ ಸಿಬ್ಬಂದಿ. ಆತ ಪ್ರತಿರೋಧವೇ ಇಲ್ಲದಂತೆ ಶರಣಾಗುತ್ತಾನೆ. ಕೇವಲ ಮೂರನೇ ನಿಮಿಷಗಳಲ್ಲಿ ದುಷ್ಕರ್ಮಿಗಳು ಇಡೀ ಆಭರಣ ಮಳಿಗೆಯನ್ನು ಲೂಟಿ ಮಾಡುತ್ತಾರೆ!

ಅಮೆರಿಕದ ಕ್ಯಾಲಿಫೋರ್ನಿಯಾ ರಾಜ್ಯದ ಸನ್ನಿವೇಲ್‌ನಲ್ಲಿ ನಡೆದ ಘಟನೆ ಇದು. ಭಾರತದ ಪುಣೆ ಮೂಲದ ಉದ್ಯಮಿಯೊಬ್ಬರು ಈ ನಗರದಲ್ಲಿ ಚಿನ್ನಭರಣ ಮಳಿಗೆ ಹೊಂದಿದ್ದಾರೆ. ಅದರ ಹೆಸರು ಪಿಎನ್‌ಜಿ ಜ್ಯುವೆಲ್ಲರ್ಸ್. ಈ ಮಳಿಗೆ ಗಾಜಿನ ಬಾಗಿಲನ್ನು ಮುರಿದು ಒಳ ನುಗ್ಗಿದ ದರೋಡೆಕೋರರು ಆಭರಣ ಮಳಿಗೆಯನ್ನು ಲೂಟಿ ಮಾಡಿದ ಸಿಸಿಟಿವಿ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಅಂಗಡಿ ಒಳಗೆ ಗಾಜಿನ ಬಾಗಿಲುಗಳನ್ನು ಕಪಾಟುಗಳನ್ನು ಮುರಿಯುವ ದರೋಡೆಕೋರರು ಅಚ್ಚುಕಟ್ಟಾಗಿ ಜೋಡಿಸಿ ಇಡಲಾಗಿದ್ದ ಆಭರಣಗಳನ್ನು ದೋಚುತ್ತಾರೆ. ಅಲ್ಲಿಯೇ ಇದ್ದ ಒಬ್ಬನೇ ಒಬ್ಬ ಭದ್ರತಾ ಸಿಬ್ಬಂದಿಗೆ ಥಳಿಸುತ್ತಾರೆ. ಇದೇ ವೇಳೆ ಓರ್ವ ದರೋಡೆಕೋರ ಮಳಿಗೆಯ ಕಪಾಟುಗಳಿಗೆ ಅಳವಡಿಸಿದ್ದ ಗಾಜಿನ ಬಾಗಿಲುಗಳಿಗೆ ಕಲ್ಲೆಸೆದು ಅದನ್ನು ಪುಡಿಗಟ್ಟುತ್ತಾನೆ, ಈ ದೃಶ್ಯಗಳನ್ನ ಸೂಕ್ಷ್ಮವಾಗಿ ಗಮನಿಸಿದರೆ ದುಷ್ಕರ್ಮಿಗಳು ಯಾವ ಕಪಾಟಿನಲ್ಲಿ ಯಾರು ಚಿನ್ನಾಭರಣ ಕದಿಯಬೇಕು, ಯಾರು ಯಾವ ಕೆಲಸ ಮಾಡಬೇಕು ಎಂದು ಮೊದಲೇ ನಿರ್ಧರಿಸಿದಂತೆ ಕಂಡು ಬರುತ್ತೆ.

ಏಕೆಂದರೆ ಯಾರೂ ಕೂಡಾ ಯಾವುದೇ ಗೊಂದಲವಿಲ್ಲದೆ ತಾವು ದೋಚಬೇಕಾದ ಕಪಾಟಿನ ಬಳಿಗೆ ಹೋಗಿ ಅದನ್ನು ಮುರಿದು ಚಿನ್ನಾಭರಣ ಬಾಚಿಕೊಳ್ಳುತ್ತಾರೆ. ಸಿಸಿಟಿವಿ ವಿಡಿಯೋ ನೋಡಿದಾಗ ಕೇವಲ ಮೂರು ನಿಮಿಷಗಳಲ್ಲೇ ಇಡೀ ಮಳಿಗೆಯ ಕಳ್ಳತನ ನಡೆದಿರೋದು ಸ್ಪಷ್ಟವಾಗುತ್ತೆ.

ಇಡೀ ಮಳಿಗೆಯ ಎಲ್ಲಾ ಚಿನ್ನಾಭರಣ ಕೆಲವೇ ನಿಮಿಷಗಳಲ್ಲಿ ದರೋಡೆಕೋರರ ಬ್ಯಾಗ್ ಸೇರಿದೆ. ಇವರ ಈ ಕೃತ್ಯವನ್ನು ಗಮನಿಸಿದರೆ, ಈ ಮಳಿಗೆಯ ಬಗ್ಗೆ ದುಷ್ಕರ್ಮಿಗಳಿಗೆ ಮೊದಲೇ ಗೊತ್ತಿತ್ತು ಅನ್ನೋದು ಸ್ಪಷ್ಟವಾಗುತ್ತದೆ. ದಾಳಿ ನಡೆಸುವ ಮುನ್ನ ಹಲವು ಬಾರಿ ಪರಿಶೀಲನೆ ನಡೆಸಿರೋ ಸಾಧ್ಯತೆಗಳಿವೆ ಎಂದು ನೆಟ್ಟಿಗರು ಚರ್ಚೆ ಮಾಡುತ್ತಿದ್ದಾರೆ.

### ಪೊಲೀಸರ ಕ್ಷಿಪ್ರ ಕಾರ್ಯಾಚರಣೆ ಐವರ ಬಂಧನ?

**ಸ್ಥಳೀಯ ಮಾಧ್ಯಮ ವರದಿಗಳ ಪ್ರಕಾರ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತುರ್ತು ಕಾರ್ಯಾಚರಣೆ ನಡೆಸಿರುವ ಪೊಲೀಸರು ಐವರನ್ನು ಬಂಧಿಸಿದ್ದಾರೆ ಎಂಬ ಮಾಹಿತಿ ಇದೆ. ಆದರೆ, ಪೊಲೀಸ್ ಇಲಾಖೆ ಇನ್ನೂ ಖಚಿತಪಡಿಸಿಲ್ಲ. ಪಿಎನ್‌ಜಿ ಜ್ಯುವೆಲ್ಲರ್ಸ್ ಸಂಸ್ಥೆಯು ಭಾರತದ ದಿವಂಗತ ಉದ್ಯಮಿ ಪುರುಷೋತ್ತಮ ನಾರಾಯಣ ಗಾಡ್ಗೀಳ್ ಅವರ ಹೆಸರನ್ನು ಹೊಂದಿದೆ. ಈ ಸಂಸ್ಥೆಯು ಭಾರತದಲ್ಲೇ 35 ಮಳಿಗೆಗಳನ್ನು ಹೊಂದಿದೆ. ಅಮೆರಿಕ ಹಾಗೂ ದುಬೈನಲ್ಲೂ ಮಳಿಗೆ ಇದೆ. ಪುಣೆ ಮೂಲದ ಈ ಸಂಸ್ಥೆ ಜಾಗತಿಕ ಮಟ್ಟದಲ್ಲಿ ಬೆಳೆದು ನಿಂತಿದೆ. ಇದೀಗ ಈ ಸಂಸ್ಥೆಯ ಮಳಿಗೆಯಲ್ಲಿ ನಡೆದಿರುವ ಲೂಟಿ ಕೂಡಾ ಜಾಗತಿಕ ಮಟ್ಟದಲ್ಲಿ ಸದ್ದು ಮಾಡುತ್ತಿದೆ.**

**ಪುರುಷೋತ್ತಮ ನಾರಾಯಣ ಗಾಡ್ಗೀಳ್.. ಪುಣೆ ಮೂಲದ ಈ ದಿವಂಗತ ಉದ್ಯಮಿಯ ಹೆಸರಲ್ಲಿ ಪಿಎನ್‌ಜಿ ಜ್ಯುವೆಲ್ಲರ್ಸ್ ಸ್ಥಾಪನೆ ಮಾಡಲಾಗಿದೆ. ಭಾರತದಲ್ಲೇ 35 ಮಳಿಗೆಗಳನ್ನ ಹೊಂದಿರುವ ಪಿಎನ್‌ಜಿ ಜ್ಯುವೆಲ್ಲರ್ಸ್, ದುಬೈ ಹಾಗೂ ಅಮೆರಿಕದಲ್ಲೂ ತನ್ನ ಮಳಿಗೆ ಹೊಂದಿದೆ. ಇದೀಗ ಅಮೆರಿಕದ ಕ್ಯಾಲಿಫೋರ್ನಿಯಾ ರಾಜ್ಯದಲ್ಲಿ ಇರುವ ಪಿಎನ್‌ಜಿ ಜ್ಯುವೆಲ್ಲರ್ಸ್ ಭಾರೀ ಸುದ್ದಿಯಲ್ಲಿದೆ. ಏಕೆಂದರೆ ಈ ಮಳಿಗೆಯನ್ನು ಸುಮಾರು 20 ದುಷ್ಕರ್ಮಿ ತಂಡ ಕೇವಲ 3 ನಿಮಿಷಗಳಲ್ಲೇ ಲೂಟಿ ಮಾಡಿ ಪರಾರಿಯಾಗಿದೆ.**



## ಮಿನಿ ನ್ಯೂಸ್

### ಕಾಶ್ಮೀರದ ರಿಯಾಸಿ ದಾಳಿ ರೂವಾರಿ ಫಿನಿಷ್

**ಇಸ್ಲಮಾಬಾದ್:** ಜಮ್ಮು- ಕಾಶ್ಮೀರದ ರಿಯಾಸಿಯಲ್ಲಿ ಯಾತ್ರಾರ್ಥಿಗಳ ಬಸ್ ಮೇಲೆ ನಡೆದ ಭಯೋತ್ಪಾದಕ ದಾಳಿಯ ಮಾಸ್ಟರ್ ಮೈಂಡ್ ಉಗ್ರನನ್ನು ಅಪರಿಚಿತರು ಹತ್ಯೆ ಮಾಡಿದ್ದಾರೆ ಎಂದು ಪಾಕಿಸ್ತಾನದ ಸುದ್ದಿವಾಹಿನಿಗಳು ವರದಿ ಮಾಡಿವೆ. ಜೂನ್ 9ರಂದು ಜಮು ಕಾಶೀರದ ರಿಯಾಸಿಯಲ್ಲಿ ಯಾತ್ರಾರ್ಥಿಗಳನ್ನು ಹೊತ್ತೊಯ್ಯುತ್ತಿದ್ದ ಬಸ್ ಮೇಲೆ ಭಯೋತ್ಪಾದಕರ ದಾಳಿ ನಡೆಸಿದ್ದರು. ಉಗ್ರರ ಗುಂಡಿನ ದಾಳಿಗೆ ನಿಯಂತ್ರಣ ತಪ್ಪಿದ ಬಸ್ ಕಂದಕಕ್ಕೆ ಬಿದ್ದ ಪರಿಣಾಮ 10 ಮಂದಿ ಸಾವನ್ನಪ್ಪಿ 33ಕ್ಕೂ ಅಧಿಕ ಯಾತ್ರಾರ್ಥಿಗಳು ಗಾಯಗೊಂಡಿದ್ದರು. ಈ ಘಟನೆಗೆ ದೇಶಾದ್ಯಂತ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು. ಉಗ್ರರನ್ನು ಸೆದೆಬಡಿಯಲು ಕೇಂದ್ರ ಸರ್ಕಾರ ಭಾರತೀಯ ಸೇನೆಗೆ ಸೂಚಿಸಿತ್ತು. ಅದರಂತೆ ಉಗ್ರರ ರೇಖಾಚಿತ್ರವನ್ನು ರಿಲೀಸ್ ಮಾಡಿದ್ದ ಸೇನೆ, ಈತನ ಸುಳಿವು ನೀಡಿದವರಿಗೆ 20 ಲಕ್ಷ ರೂ. ಬಹುಮಾನವನ್ನೂ ಘೋಷಿಸಿತ್ತು. ಉಗ್ರರ ತೀವ್ರ ಶೋಧ ನಡೆಯುವ ಹೊತ್ತಿನಲ್ಲಿಯೇ ಪಾಕ್‌ನಲ್ಲಿ ಈ ದಾಳಿಯ ಮಾಸ್ಟರ್ ಮೈಂಡ್ ಹತ್ಯೆ ನಡೆದಿದೆ ಎಂದು ಅಲ್ಲಿನ ಮಾಧ್ಯಮಗಳು ವರದಿ ಮಾಡಿವೆ. ರಿಯಾಸಿ ಭಯೋತ್ಪಾದಕ ದಾಳಿಯ ಮಾಸ್ಟರ್‌ಮೈಂಡ್ ಅನ್ನು ಪಾಕಿಸ್ತಾನದಲ್ಲಿ ಅಪರಿಚಿತರು ಹತ್ಯೆ ಮಾಡಿರುವುದು ಉಳಿದ ಭಯೋತ್ಪಾದಕರನ್ನು ಭಯಗೊಳಿಸಿದೆ ಎಂದು ಅಲ್ಲಿನ ಮಾಧ್ಯಮಗಳು ಹೇಳಿವೆ.

### ಅಮೆರಿಕದಲ್ಲಿ ದುಷ್ಕರ್ಮಿಯಿಂದ ಗುಂಡಿನ ದಾಳಿ, 8 ಮಂದಿಗೆ ಗಾಯ

**ಅಮೆರಿಕ:** ಡೆಟ್ರಾಯಿಟ್ ಹೊರವಲಯದ ಸ್ಪ್ಲ್ಯಾಷ್ ಪ್ಯಾಡ್ ಒಂದರ ಮೇಲೆ ಬಂದೂಕುಧಾರಿಯೊಬ್ಬ ಗುಂಡಿನ ಸುರಿಮಳೆಗೈದ ಪರಿಣಾಮವಾಗಿ ಇಬ್ಬರು ಮಕ್ಕಳು ಸೇರಿದಂತೆ 8 ಮಂದಿ ಗಾಯಗೊಂಡಿದ್ದಾರೆ. ತಲೆಗೆ ಗುಂಡೇಟು ಬಿದ್ದಿರುವ 8 ವರ್ಷದ ಓರ್ವ ಬಾಲಕನ ಸ್ಥಿತಿ ಗಂಭಿರವಾಗಿದೆ. ಈ ಪ್ರದೇಶದ ಕೆಲ ಕುಟುಂಬಗಳು ಬೇಸಿಗೆಯ ಬೇಗೆ ನಿವಾರಿಸಿಕೊಳ್ಳಲು ಸ್ಪ್ಲ್ಯಾಷ್ ಪ್ಯಾಡ್‌ನಲ್ಲಿ ಗುಂಪು ಗೂಡಿದಾಗ ದುಷ್ಕರ್ಮಿ ಈ ದುಷ್ಕೃತ್ಯ ಎಸಗಿದ್ದಾನೆ. ಪೊಲೀಸರು ಶಂಕಿತನೊಬ್ಬನನ್ನು ಬೆನ್ನಟ್ಟಿದ್ದು, ಆತ ತನ್ನ ಮನೆಯಲ್ಲಿ ಆತಹತ್ಯೆಗೆ ಶರಣಾಗಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗಾಯಾಳುಗಳಲ್ಲಿ ಕನಿಷ್ಠ ಪಕ್ಷ ಇಬ್ಬರು ಮಕ್ಕಳು ಸೇರಿದ್ದಾರೆ. ಗಾಯಾಳುಗಳ ಸಂಖ್ಯೆ 10ಕ್ಕೂ ಅಧಿಕ ಎಂದು ಶಂಕಿಸಲಾಗಿತ್ತು. ಆದರೆ ಈ ಪ್ರದೇಶದ ಆಸ್ಪತ್ರೆಗಳಲ್ಲಿ ಪರಿಶೀಲಿಸಿದ ಬಳಿಕ ಎಂಟು ಮಂದಿಗೆ ಗಾಯಗಳಾಗಿರುವುದು ದೃಢಪಟ್ಟಿತು ಎಂದು ಅಧಿಕಾರಿಗಳು ವಿವರಿಸಿದ್ದಾರೆ.

### ಇಸ್ರೇಲ್‌ನ 8 ಯೋಧರು ರಫಾದಲ್ಲಿ ಸಾವು

**ಜೆರುಸಲೇಂ:** ಗಾಜಾಪಟ್ಟಿಯಲ್ಲಿ ಹೋರಾಟ ನಡೆಸುತ್ತಿದ್ದ 8 ಯೋಧರು ಶನಿವಾರ ಹುತಾತ್ಮರಾಗಿದ್ದಾರೆ. ಆದಾಗ್ಯೂ, ರಫಾದಲ್ಲಿ ಹಾಗೂ ಅದರ ಸುತ್ತಲೂ ದಾಳಿ ಮುಂದುವರಿದಿದೆ. 19 ಪ್ಯಾಲೆಸ್ತೀನಿಯನ್ನರನ್ನು ಹತ್ಯೆ ಮಾಡಲಾಗಿದೆ ಎಂದು ಇಸ್ರೇಲ್ ಸೇನೆ ತಿಳಿಸಿದೆ. ರಫಾದ ಪೂರ್ವ ಭಾಗದಲ್ಲಿರುವ ಟೆಲ್ ಅಲ್-ಸುಲ್ತಾನ ಪ್ರದೇಶದಲ್ಲಿ ವಾರದಿಂದಲೂ ಆಕ್ರಮಣ ನಡೆಸುತ್ತಿರುವ ಇಸ್ರೇಲ್‌ನ ಶಸ್ತ್ರಸಜ್ಜಿತ ಯೋಧರ ಮೇಲೆ ಹಮಾಸ್ ಬಂಡುಕೋರರು ದಾಳಿ ಮಾಡಿದ್ದಾರೆ. ಕೂಡಲೇ ಇಸ್ರೇಲ್ ಸೇನೆ ಪ್ರತಿದಾಳಿ ನಡೆಸಿದೆ. ಕದನ ವಿರಾಮ ಘೋಷಿಸುವಂತೆ ಅಂತರರಾಷ್ಟ್ರೀಯ ಸಮುದಾಯದಿಂದ ಒತ್ತಡವಿದ್ದರೂ, ಹಮಾಸ್ ಮತ್ತು ಇಸ್ರೇಲ್ ನಡುವೆ ಕಳೆದ ಎಂಟು ತಿಂಗಳಿಂದ ಯುದ್ಧ ಮುಂದುವರಿದಿದೆ.

ಹಮಾಸ್ ಬಂಡುಕೋರರು ಇಸ್ರೇಲ್ ಮೇಲೆ ಕಳೆದ ವರ್ಷ ಅಕ್ಟೋಬರ್ 7ರಂದು ದಾಳಿ ನಡೆಸಿದ್ದರು. ಆ ವೇಳೆ ಸಾವಿರಾರು ಮಂದಿ ಮೃತಪಟ್ಟಿದ್ದರು.

ಇದರ ಬೆನ್ನಲ್ಲೇ ಇಸ್ರೇಲ್ ಪ್ರತಿದಾಳಿ ನಡೆಸುತ್ತಿದೆ. ಈ ಯುದ್ಧದಿಂದಾಗಿ ಇದುವರೆಗೆ 37,296 ಮಂದಿ ಮೃತಪಟ್ಟಿದ್ದಾರೆ. 85,197 ನಾಗರಿಕರು ಗಾಯಗೊಂಡಿದ್ದಾರೆ ಎಂದು ಹಮಾಸ್ ಆಡಳಿ ತವಿರುವ ಗಾಜಾ ಆರೋಗ್ಯ ಇಲಾಖೆ ಶನಿವಾರ ಹೇಳಿಕೆ ಬಿಡುಗಡೆ ಮಾಡಿತ್ತು.

### ಪಾರ್ಕ್‌ನಲ್ಲಿ ತಲೆಕೆಳಗಾಗಿ ಸಿಕ್ಕಿಬಿದ್ದಿದ್ದ 30 ಮಂದಿಯ ರಕ್ಷಣೆ

**ಪೋರ್ಟ್‌ಲ್ಯಾಂಡ್:** ಅಮೆರಿಕದ ಒರೆಗನ್ ಸ್ಟೇಟ್‌ನಲ್ಲಿರುವ ಶತಮಾನದಷ್ಟು ಹಳೆಯದಾದ ಅಮ್ಯೂಸ್‌ಮೆಂಟ್ ಪಾರ್ಕ್‌ನಲ್ಲಿ ರೈಡ್ ವೇಳೆ ತಲೆಕೆಳಗಾಗಿ ಸಿಕ್ಕಿಬಿದ್ದಿದ್ದ 30 ಮಂದಿಯನ್ನು ರಕ್ಷಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಓಕ್ಸ್ ಪಾರ್ಕ್‌ನಲ್ಲಿ ಈ ಘಟನೆ ನಡೆದಿದೆ. ಸುಮಾರು ಅರ್ಧ ಗಂಟೆ ಕಾಲ 30 ಜನರು ರೈಡ್ ವೇಳೆ ಆಕಾಶದಲ್ಲೇ ತಲೆಕೆಳಗಾಗಿ ಸಿಕ್ಕಿಹಾಕಿಕೊಂಡಿದ್ದರು. ಅವರನ್ನು ಪೋರ್ಟ್‌ಲ್ಯಾಂಡ್‌ನ ಫೈರ್ ಆ್ಯಂಡ್ ರೆಸ್ಕ್ಯೂ ವಿಭಾಗ ರಕ್ಷಿಸಿದೆ.

ಮ್ಯಾನುವೆಲ್ ಆಗಿ ರೈಡರ್ ಅನ್ನು ಮೇಲಿಂದ ಕೆಳಕ್ಕಿಳಿಸಲಾಯಿತು. ಯಾರಿಗೂ ಗಾಯವಾಗಿಲ್ಲ. ವೈದ್ಯಕೀಯ ಪರೀಕ್ಷೆ ನಡೆಸಲಾಗುತ್ತದೆ ಎಂದು ಅದು ಹೇಳಿದೆ. ಪ್ರಸ್ತುತ ಘಟನೆಯ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕವಾಗಿ ಹರಿದಾಡುತ್ತಿದೆ. 1905ರಲ್ಲಿ ಓಕ್ಸ್ ಪಾರ್ಕ್ ತೆರೆಯಲಾಗಿತ್ತು.

### ಇವಿಎಂ ಬ್ಲ್ಯಾಕ್ ಬಾಕ್ಸ್‌ನಂತೆ; ಪರಿಶೀಲನೆಗೆ ಅವಕಾಶವೇ ಇಲ್ಲ

**ನವದೆಹಲಿ:** ಭಾರತದಲ್ಲಿ ವಿದ್ಯುನ್ಮಾನ ಮತಯಂತ್ರಗಳು (ಇವಿಎಂ) 'ಬ್ಲ್ಯಾಕ್ ಬಾಕ್ಸ್' ಇದ್ದಂತೆ. ಅವುಗಳ ಪರಿಶೀಲನೆಗೆ ಯಾರಿಗೂ ಅವಕಾಶ ನೀಡಲಾಗುವುದಿಲ್ಲ' ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭಾನುವಾರ ಹೇಳಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಭಾರತದ ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕುರಿತು ಕಳವಳ ವ್ಯಕ್ತಪಡಿಸಿದ್ದಾರೆ.

ಶಿವಸೇನಾ ಅಭ್ಯರ್ಥಿಯ ಸಂಬಂಧಿಯೊಬ್ಬ, ವಾಯವ್ಯ ಮುಂಬೈ ಕ್ಷೇತ್ರದಿಂದ 48 ಮತಗಳಿಂದ ಆಯ್ಕೆಯಾಗಿದ್ದು, ಅವರ ಬಳಿ ಇವಿಎಂ ತೆರೆಯಬಲ್ಲ ಫೋನ್ ಇದೆ ಎಂಬುದರ ಕುರಿತ ಮಾಧ್ಯಮ ವರದಿಯನ್ನು ಸಹ ಅವರು 'ಎಕ್ಸ್' ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಅಲ್ಲದೇ, ಇವಿಎಂಗಳನ್ನು ತೆಗೆದು ಹಾಕಬೇಕು ಎಂಬುದಾಗಿ ಉದ್ಯಮಿ ಇಲಾನ್ ಮಸ್ಕ್ ಪ್ರತಿಪಾದಿಸಿದ್ದು, ಅವರ ಮಾತುಗಳಿರುವ ಪೋಸ್ಟ್ ಅನ್ನು ಸಹ ರಾಹುಲ್ ಗಾಂಧಿ ಹಂಚಿಕೊಂಡಿದ್ದಾರೆ. ಸಂಬಂಧಿಸಿದ ಸಂಸ್ಥೆಗಳಲ್ಲಿ ಉತ್ತರದಾಯಿತ್ವದ ಕೊರತೆ ಇದ್ದಾಗ, ಪ್ರಜಾಪ್ರಭುತ್ವ ವ್ಯವಸ್ಥೆ ಎಂಬುದು ಕಪಟ ಎನಿಸುತ್ತದೆ ಹಾಗೂ ವಂಚನೆಗೆ ಅವಕಾಶ ಮಾಡಿಕೊಡುತ್ತದೆ' ಎಂದೂ ರಾಹುಲ್ ಗಾಂಧಿ ಹೇಳಿದ್ದಾರೆ.

# ಮುಖ್ಯ ಕೋಚ್ ಆಗಿ ಗೌತಮ್ ಗಂಭೀರ್ ಪದಗ್ರಹಣಕ್ಕೆ ಡೇಟ್ ಫಿಕ್ಸ್



ಈ ತಿಂಗಳಾಂತ್ಯಕ್ಕೆ ಗಂಭೀರ್ ಹೆಸರು ಕೂಡ ಅಧಿಕೃತವಾಗಿ ಘೋಷಣೆಯಾಗಲಿದೆ ಎಂದು ವರದಿಯಾಗಿದೆ. ಆದರೆ ಟಿ20 ವಿಶ್ವಕಪ್ ನಲ್ಲಿ ಟೀಂ ಇಂಡಿಯಾದ ಪ್ರಯಾಣದ ಆಧಾರದ ಮೇಲೆ ಗಂಭೀರ್ ಪದಗ್ರಹಣವಾಗಲಿದೆ. ಜೂನ್ 28ರವರೆಗೆ ನಡೆಯಲಿರುವ ಈ ಟೂರ್ನಿಯಲ್ಲಿ ಟೀಂ ಇಂಡಿಯಾದ ಪಯಣ ಮುಗಿದ ತಕ್ಷಣ ಹೊಸ ಮುಖ್ಯ ಕೋಚ್ ಘೋಷಣೆಯಾಗುವ ಸಾಧ್ಯತೆ ಇದೆ.

ಟೀಂ ಇಂಡಿಯಾದ ಹೊಸ ಮುಖ್ಯ ಕೋಚ್ ಯಾರು ಈ ಪ್ರಶ್ನೆಗೆ ಉತ್ತರ ಅತಿ ಶೀಘ್ರದಲ್ಲಿ ಬಹಿರಂಗಗೊಳ್ಳಲಿದೆ. ಸಿಕ್ಕಿರುವ ಮಾಹಿತಿ ಪ್ರಕಾರ ಹೊಸ ಮುಖ್ಯ ಕೋಚ್ ಆಗಿ ಗೌತಮ್ ಗಂಭೀರ್ ಆಯ್ಕೆ ಯಾಗುವುದು ಖಚಿತವಾಗಿದೆ.

**ಹೊಸ ಮುಖ್ಯ ಕೋಚ್ ಘೋಷಣೆ ಯಾಗುವ ಸಾಧ್ಯತೆ**

ಅವರ ಹೆಸರಿಗೆ ಅಧಿಕೃತ ಮುದ್ರೆ ಒತ್ತುವುದು ಮಾತ್ರ ಬಾಕಿ ಇದೆ. 2024 ರ ಟಿ20 ವಿಶ್ವಕಪ್ ನಂತರ ರಾಹುಲ್ ದ್ರಾವಿಡ್ ಅವರ ಅಧಿಕಾರಾವಧಿ ಕೊನೆಗೊಳ್ಳಲಿದ್ದು, ನಂತರ ಗಂಭೀರ್ ತಂಡದ ಮುಖ್ಯ ಕೋಚ್ ಆಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ರಾಹುಲ್ ದ್ರಾವಿಡ್ ಅವರ ತರಬೇತಿಯಲ್ಲಿ, ಬ್ಯಾಟಿಂಗ್ ಕೋಚ್ ವಿಕ್ರಮ್ ರಾಥೋಡ್, ಬೌಲಿಂಗ್ ಕೋಚ್ ಪರಸ್ ಮಹಾಂಬ್ರೆ, ಮತ್ತು ಫೀಲ್ಡಿಂಗ್ ಕೋಚ್ ಟಿ.ದಿಲೀಪ್ ತಂಡದ ಸಹಾಯಕ ಸಿಬ್ಬಂದಿಯಲ್ಲಿದ್ದರು.

ಈಗ ಗೌತಮ್ ಗಂಭೀರ್ ಬಯಸಿದರೆ ತಮ್ಮ ಕೋಚಿಂಗ್‌ನಲ್ಲಿ ಈ ಮೂವರನ್ನು ತಮ್ಮ ಸಹಾಯಕ ಸಿಬ್ಬಂದಿಯಲ್ಲಿ ಉಳಿಸಿಕೊಳ್ಳಬಹುದು ಅಥವಾ ಅವರನ್ನು ತೆಗೆದುಹಾಕಬಹುದು.ಬ್ಯಾಟಿಂಗ್ ಕೋಚ್ ವಿಕ್ರಮ್ ರಾಥೋಡ್ ರವಿಶಾಸ್ತ್ರಿ ಕಾಲದಿಂದಲೂ ಟೀಂ ಇಂಡಿಯಾ ಜೊತೆ ಒಡನಾಟ ಹೊಂದಿದ್ದಾರೆ. ಆದರೆ ಪರಸ್ ಮಹಾಂಬ್ರೆ, ಮತ್ತು ಟಿ.ದಿಲೀಪ್, ದ್ರಾವಿಡ್ ಆಯ್ಕೆಯಾಗಿದ್ದಾರೆ. ಗಂಭೀರ್ ಇದುವರೆಗೆ ಯಾವುದೇ ತಂಡಕ್ಕೆ ಪೂರ್ಣಾವಧಿಯ ತರಬೇತಿ ನೀಡಿಲ್ಲ. ಆದರೆ ಅವರು ಕಳೆದ ಮೂರು ವರ್ಷಗಳಿಂದ ಐಪಿಎಲ್‌ನಲ್ಲಿ ಮಾರ್ಗದರ್ಶಕರಾಗಿ ಕೆಲಸ ಮಾಡಿದ್ದಾರೆ. 2022 ರಿಂದ 2023 ರವರೆಗೆ ಲಕ್ನೋ ಸೂಪರ್ ಜೈಂಟ್ಸ್ ಜೊತೆಗಿದ್ದ ಗಂಭೀರ್, ತಂಡ ಬ್ಯಾಕ್-ಟು-ಬ್ಯಾಕ್ ಪ್ಲೇಆಫ್ ಗೇರುವಂತೆ ಮಾಡಿದ್ದರು. ಬಳಿಕ 2024 ರ ಐಪಿಎಲ್ ಆರಂಭದ ಮೊದಲು ಗಂಭೀರ್ ಕೆಕೆಆರ್ ತಂಡವನ್ನು ಸೇರಿಕೊಂಡರು. ಬಳಿಕ ಗಂಭೀರ್ ಮಾರ್ಗದರ್ಶನದಡಿಯಲ್ಲಿ ಕೆಕೆಆರ್ ತಂಡ ಮೂರನೇ ಬಾರಿಗೆ ಐಪಿಎಲ್ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಸದ್ಯ, ಟೀಂ ಇಂಡಿಯಾದ ಮುಖ್ಯ ಕೋಚ್ ಆಗಿ ಗೌತಮ್ ಗಂಭೀರ್ ಹೆಸರನ್ನು ಅಧಿಕೃತವಾಗಿ ಪ್ರಕಟಿಸಲು ಎಲ್ಲರೂ ಕಾಯುತ್ತಿದ್ದಾರೆ. ಒಮ್ಮೆ ಇದು ಸಂಭವಿಸಿದಲ್ಲಿ, ತಂಡದ ಆಟಗಾರರಿಂದ ಬೆಂಬಲ ಸಿಬ್ಬಂದಿಯವರೆಗೆ ಅನೇಕ ಬದಲಾವಣೆಗಳನ್ನು ಕಾಣಬಹುದು.

# ಚೊಚ್ಚಲ ಪಂದ್ಯದಲ್ಲೇ ಮಿಂಚಿದ ಆಶಾ, ಸ್ಮೃತಿ ಶತಕ

## ಟೀಂ ಇಂಡಿಯಾ ದಕ್ಷಿಣ ಆಫ್ರಿಕಾ ತಂಡವನ್ನು ಬರೋಬ್ಬರಿ 143 ರನ್‌ಗಳಿಂದ ಮಣಿಸಿದೆ

ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಭಾರತ ಹಾಗೂ ದಕ್ಷಿಣ ಆಫ್ರಿಕಾ ವನಿತಾ ತಂಡಗಳ ನಡುವಿನ ಮೊದಲ ಏಕದಿನ ಪಂದ್ಯದಲ್ಲಿ ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಟೀಂ ಇಂಡಿಯಾ ದಕ್ಷಿಣ ಆಫ್ರಿಕಾ ತಂಡವನ್ನು ಬರೋಬ್ಬರಿ 143 ರನ್‌ಗಳಿಂದ ಮಣಿಸಿದೆ. ಇದರೊಂದಿಗೆ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ 1-0 ಅಂತರದ ಶುಭಾರಂಭ ಮಾಡಿದೆ. ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಭಾರತ ಸ್ಮೃತಿ ಮಂಧಾನ ಅವರ ಶತಕದ ಆಧಾರದ ಮೇಲೆ 265 ರನ್ ಕಲೆಹಾಕಿತು. ಗುರಿ ಬೆನ್ನಟ್ಟಿದ ಪ್ರವಾಸಿ ದಕ್ಷಿಣ ಆಫ್ರಿಕಾ ತಂಡ, ಭಾರತದ ದಾಳಿಯ ಮುಂದೆ ಪೂರ್ಣ 20 ಓವರ್‌ಗಳನ್ನು ಆಡಲು ಸಾಧ್ಯವಾಗದೆ 37.4 ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು 122 ರನ್ ಕಲೆಹಾಕಲಷ್ಟೇ ಶಕ್ತವಾಯಿತು. ಟೀಂ ಇಂಡಿಯಾ ಪರ ಚೊಚ್ಚಲ ಏಕದಿನ ಪಂದ್ಯವನ್ನಾಡಿದ ಲೆಗ್ ಸ್ಪಿನ್ನರ್ ಆಶಾ ಶೋಭಾ ಗರಿಷ್ಠ 4 ವಿಕೆಟ್ ಪಡೆದು ಮಿಂಚಿದರು.

ಭಾರತಕ್ಕೆ ಆರಂಭಿಕ ಆಘಾತ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ ವನಿತಾ ಪಡೆಗೆ ಉತ್ತಮ ಆರಂಭಸಿಗಲಿಲ್ಲ. ತಂಡದ ಸ್ಕೋರ್ 15 ರನ್ ಆಗುವಷ್ಟರಲ್ಲಿ ಆರಂಭಿಕ ಆಟಗಾರ್ತಿ ಶಫಾಲಿ ವರ್ಮಾ 7 ರನ್‌ಗಳಿಗೆ ವಿಕೆಟ್ ಒಪ್ಪಿಸಿದರು. ನಂತರ ಬಂದ ದಯಾಳನ್ ಹೇಮಲತಾ ಕೂಡ 12 ರನ್‌ಗಳಿಗೆ ಪೆವಿಲಿಯನ್ ಸೇರಿಕೊಂಡರು. ನಾಯಕಿ ಹರ್ಮನ್‌ಪ್ರೀತ್ ಕೌರ್ ಕೂಡ 10 ರನ್‌ಗಳಿಗೆ ಸುಸ್ತಾದರು. ಹೀಗಾಗಿ ತಂಡ ಕೇವಲ 53 ರನ್‌ಗಳಿಗೆ ಪ್ರಮುಖ 3 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು.

**ಸ್ಮೃತಿ- ದೀಪ್ತಿ ಜೊತೆಯಾಟ:** ಇಲ್ಲಿಂದ ಸ್ಮೃತಿಗೆ ಜೊತೆಯಾದ ಜೆಮಿಮಾ ರಾಡ್ರಿಗಸ್ 17 ರನ್‌ಗಳ ಕಾಣಿಕೆ ನೀಡಿದಲ್ಲದೆ ತಂಡದ ಮೊತ್ತವನ್ನು 90 ರನ್‌ಗಳ ಗಡಿ ದಾಟಿಸಿದರು. ಈ ವೇಳೆ ಸಿಕ್ಸರ್ ಸಿಡಿಸುವ ಯತ್ನದಲ್ಲಿ ಜೆಮಿಮಾ ಕ್ಯಾಚಿತ್ತು ಔಟಾದರು. ನಂತರ ಬಂದ ರಿಚಾ ಘೋಷ್ 3 ರನ್‌ಗಳಿಗೆ ತಮ್ಮ ಇನ್ನಿಂಗ್ಸ್ ಮುಗಿಸಿದರು. ಹೀಗಾಗಿ ಮತ್ತೊಮ್ಮೆ ತಂಡ ಸಂಕಷ್ಟಕ್ಕೆ ಸಿಲುಕಿತು. ಆದರೆ 7ನೇ ಕ್ರಮಾಂಕದಲ್ಲಿ ಬಂದ ದೀಪ್ತಿ ಶರ್ಮಾ 37 ರನ್‌ಗಳ ಇನ್ನಿಂಗ್ಸ್ ಆಡುವುದರ ಜೊತೆಗೆ ಸ್ಮೃತಿ ಜೊತೆ ಅರ್ಧಶತಕಕ್ಕೂ ಹೆಚ್ಚಿನ ಜೊತೆಯಾಟ ನೀಡಿದರು. ಈ ವೇಳೆಗೆ ಸ್ಮೃತಿ ತಮ್ಮ ಅರ್ಧಶತಕ ಪೂರೈಸಿದರು.



**ಆಶಾ ಶೋಭಾ 4 ವಿಕೆಟ್**

**ಭಾರತಕ್ಕೆ 143 ರನ್‌ಗಳ ಜಯ..!**

### ಭರ್ಜರಿ ಶತಕ ಸಿಡಿಸಿದ ಸ್ಮೃತಿ

**8ನೇ ಕ್ರಮಾಂಕದಲ್ಲಿ ಬಂದ ಪೂಜಾ, ಸ್ಮೃತಿಗೆ ಉತ್ತಮ ಸಾಥ್ ನೀಡಿದಲ್ಲದೆ ತಂಡವನ್ನು ದ್ವಿಶತಕದ ಗಡಿ ದಾಟಿಸಿದರು. ಇಬ್ಬರ ನಡುವೆ 50 ರನ್‌ಗಳ ಜೊತೆಯಾಟ ಕೂಡ ಮೂಡಿಬಂತು. ಈ ಹೊತ್ತಿಗೆ ಹೊಡಿಬಡಿ ಆಟಕ್ಕೆ ಮುಂದಾದ ಸ್ಮೃತಿ 93 ರನ್‌ಗಳಿರುವಾಗ ಭರ್ಜರಿ ಸಿಕ್ಸರ್ ಸಿಡಿಸಿ, ನಂತರದ ಎಸೆತದಲ್ಲಿ ಸಿಂಗಲ್ ಕದಿಯುವ ಮೂಲಕ ತಮ್ಮ ಶತಕ ಪೂರೈಸಿದರು. ಕೊನೆಗೆ 127 ಎಸೆತಗಳಲ್ಲಿ 12 ಬೌಂಡರಿ ಹಾಗೂ 1 ಸಿಕ್ಸರ್ ಸಹಿತ 117 ರನ್ ಬಾರಿಸಿ ಸ್ಮೃತಿ ತಮ್ಮ ವಿಕೆಟ್ ಒಪ್ಪಿಸಿದರು. ಅಂತಿಮವಾಗಿ ಭಾರತ ವನಿತಾ ಪಡೆ ನಿಗದಿತ 50 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 265 ರನ್ ಕಲೆಹಾಕಿದೆ. ಈ ಮೂಲಕ ಆಫ್ರಿಕಾ ತಂಡಕ್ಕೆ 266 ರನ್‌ಗಳ ಟಾರ್ಗೆಟ್ ನೀಡಿತು.**

**ತತ್ತರಿಸಿದ ಆಫ್ರಿಕಾ ಇನ್ನಿಂಗ್ಸ್:** ಗೆಲುವಿಗೆ 266 ರನ್‌ಗಳ ಗುರಿ ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ತಂಡ ಕೂಡ ಆರಂಭದಲ್ಲೇ ವಿಕೆಟ್ ಕಳೆದುಕೊಂಡು ಸಂಕಷ್ಟಕೆ ಸಿಲುಕಿತು. ಮೊದಲ ಓವರ್‌ನಲ್ಲೇ ರೇಣುಕಾ, ನಾಯಕಿ ಲಾರಾ ವೊಲ್ವಾರ್ಡ್ಟ್‌ರನ್ನು ಕ್ಲೀನ್ ಬೌಲ್ಡ್ ಮಾಡಿದರು. 33 ರನ್ ಆಗುವಷ್ಟರಲ್ಲಿ ತಂಡ ಪ್ರಮುಖ 3 ವಿಕೆಟ್ ಕಳೆದುಕೊಂಡಿತು. ಅನುಭವಿ ಮರಿಜಾನ್ನೆ ಕಪ್ 24 ರನ್ ಕಲೆಹಾಕುವ ಮೂಲಕ ತಂಡದ ಇನ್ನಿಂಗ್ಸ್‌ಗೆ ಕೊಂಚ ಬಲ ತುಂಬಿದರು. ಆದರೆ ಈ ವಿಕೆಟ್ ಪತನದ ಬಳಿಕ ಆಫ್ರಿಕಾ ತಂಡದ ಪೆವಿಲಿಯನ್ ಪರೇಡ್ ಆರಂಭವಾಯಿತು. ಕೆಳಕ್ರಮಾಂಕದಲ್ಲಿ ಸಿನಾಲೊ ಜಾಫ್ತಾ 27 ರನ್ ಬಾರಿಸಿ ಅಜೇಯರಾಗಿ ಉಳಿದರು.

# ಶುಭಮನ್ ಗಿಲ್‌ರನ್ನ ಭಾರತಕ್ಕೆ ವಾಪಸ್ ಕಳಿಸಲು ಶಿಸ್ತಿನ ಕೊರತೆಯೇ ಕಾರಣವಾ

ಪ್ರಸಕ್ತ ಟಿ20 ವಿಶ್ವಕಪ್‌ನಲ್ಲಿ ಭಾರತ ತಂಡದ ಲೀಗ್ ಸುತ್ತಿನ ಪಂದ್ಯಗಳು ಮುಕ್ತಾಯಗೊಂಡಿದ್ದು, ಅಗ್ರಸ್ಥಾನದೊಂದಿಗೆ ಸೂಪರ್-8 ಸುತ್ತಿಗೆ ಪದಾರ್ಪಣೆ ಮಾಡಿದೆ. ಮುಂದಿನ ಪಂದ್ಯಕ್ಕಾಗಿ ವೆಸ್ಟ್ ಇಂಡೀಸ್‌ಗೆ ಪ್ರಯಾಣಿಸಲಿದೆ. ಲೀಗ್ ಸುತ್ತಿನ ಪಂದ್ಯಗಳ ಮುಕ್ತಾಯದ ಹಿನ್ನೆಲೆ ಭಾರತ ತಂಡಕ್ಕೆ ಮೀಸಲು ಆಟಗಾರರಾಗಿ ಆಯ್ಕೆಯಾಗಿದ್ದ ಶುಭಮನ್ ಗಿಲ್ ಹಾಗೂ ಅವೇಶ್ ಖಾನ್ ಭಾರತಕ್ಕೆ ಮರಳಲು ಸಿದ್ಧವಾಗಿದ್ದಾರೆ.

ಶುಭಮನ್ ಗಿಲ್ ಅವರು ಭಾರತಕ್ಕೆ ಮತ್ತೆ ಮರಳುತ್ತಿರುವುದಕ್ಕೆ ಅವರ ಅಶಿಸ್ತಿನ ವರ್ತನೆಯೇ ಕಾರಣ ಎಂಬ ವದಂತಿಗಳು ಜಾಲತಾಣದಲ್ಲಿ ಹುಟ್ಟಿಕೊಂಡಿದ್ದು ಇದಕ್ಕೆ ಬ್ಯಾಟಿಂಗ್ ಕೋಚ್ ರಾಥೋರ್ ಸ್ಪಷ್ಟನೆ ನೀಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಥೋಡ್, ಸೂಪರ್-8 ಪಂದ್ಯಗಳಗಾಗಿ ಟೀಂ ಇಂಡಿಯಾದ ಮೀಸಲು ಆಟಗಾರರಾಗಿ ರಿಂಕು ಸಿಂಗ್, ಖಲೀಲ್ ಅಹ್ಮದ್ ಮಾತ್ರ ಕೆರಿಬಿಯನ್ ನಾಡಿಗೆ ಪ್ರಯಾಣಿಸಲಿದ್ದಾರೆ. ಅವೇಶ್ ಖಾನ್ ಮತ್ತು ಶುಭಮನ್ ಗಿಲ್ ಅವರನ್ನು ಮರಳಿ ಭಾರತಕ್ಕೆ ಮರಳಿ ಕಳುಹಿಸುತ್ತಿರುವುದು ಅಶಿಸ್ತಿನ ವರ್ತನೆಯಿಂದಲ್ಲ, ಇದು ಪೂರ್ವ ನಿಯೋಜಿತ ಕ್ರಮ. ಕೆರಿಬಿಯನ್‌ನಲ್ಲಿ ಕೇವಲ ಇಬ್ಬರು ಮೀಸಲು ಆಟಗಾರರ ಸೇರ್ಪಡೆಗೆ ಮಾತ್ರ ಅವಕಾಶವಿದೆ. ಇದನ್ನು ಮೊದಲೇ ನಿರ್ಣಯಿಸಲಾಗಿತ್ತು ಎಂದು ತಿಳಿಸಿದ್ದಾರೆ.

ಇನ್ನೂ ಗಿಲ್ ಅವರನ್ನು ತವರಿಗೆ ವಾಪಸ್ ಕಳುಹಿಸುತ್ತಿರುವ ಬಗ್ಗೆ ವರದಿಗಳು ಹೊರಬೀಳುತ್ತಿದ್ದಂತೆ ಇನ್‌ಸ್ಟಾಗ್ರಾಮ್‌ನಲ್ಲಿ ರೋಹಿತ್ ಶರ್ಮಾ ಅವರನ್ನು ಗಿಲ್ ಅನ್‌ಫಾಲೋ ಮಾಡಿದ್ದಾರೆ ಎಂಬುದು ನೆಟ್ಟಿಗರ ಗಮನ ಸೆಳೆದಿದೆ. ಈ ಕುರಿತು ಸೋಷಿಯಲ್ ಮೀಡಿಯಾದಲ್ಲಿ ಚರ್ಚೆಗಳು ನಡೆಯುತ್ತಿದೆ. ಕೆನಡಾ-ಭಾರತದ ನಡುವೆ ಶನಿವಾರ ನಡೆಯಬೇಕಿದ್ದ ಟಿ20 ವಿಶ್ವಕಪ್ ಪಂದ್ಯವು ಮಳೆಯಿಂದ ರದ್ದಾಯಿತು. ಇದರೊಂದಿಗೆ ಉಭಯ ತಂಡಗಳ ಲೀಗ್ ಸುತ್ತಿನ ಪಂದ್ಯವು ಮುಕ್ತಾಯಗೊಂಡಿತು.



ಎ ಗುಂಪಿನಲ್ಲಿ ಭಾರತ ಮತ್ತು ಅಮೆರಿಕ ತಂಡಗಳು ಸೂಪರ್-8 ಸುತ್ತಿಗೆ ಅರ್ಹತೆ ಪಡೆದುಕೊಂಡವು. ಜೂನ್ 20ರ ಗುರುವಾರ ಬಾರ್ಬಡೋಸ್‌ನಲ್ಲಿ ಸೂಪರ್-8 ಹಂತದ ತನ್ನ ಮೊದಲ ಪಂದ್ಯದಲ್ಲಿ ಭಾರತವು ಅಫ್ಘಾನಿಸ್ತಾನ ವಿರುದ್ಧ ಸೆಣಸಲಿದೆ.

# ಪುಷ್ಪ 2 ಜಾಗಕ್ಕೆ ಡಬಲ್ ಇಸ್ಮಾರ್ಟ್ ಎಂಟ್ರಿ ರಿಲೀಸ್ ಡೇಟ್ ಫಿಕ್ಸ್



ಟಾಲಿವುಡ್ ನಟ ರಾಮ್ ಪೋತಿನೇನಿ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. 'ಪುಷ್ಪ 2' ರಿಲೀಸ್ ಆಗಬೇಕಿದ್ದ ದಿನಾಂಕಕ್ಕೆ 'ಡಬಲ್ ಇಸ್ಮಾರ್ಟ್' ಸಿನಿಮಾ ಎಂಟ್ರಿ ಕೊಡುತ್ತಿದೆ. ಆಗಸ್ಟ್ 15ಕ್ಕೆ ಥಿಯೇಟರ್‌ಗೆ ಬರಲಿದೆ ರಾಮ್ ಪೋತಿನೇನಿ ನಟನೆಯ ಸಿನಿಮಾ. ಅಲ್ಲು ಅರ್ಜುನ್, ರಶ್ಮಿಕಾ ನಟನೆಯ 'ಪುಷ್ಪ 2' ಚಿತ್ರ ಆ.15ರಂದು ರಿಲೀಸ್ ಆಗಬೇಕಿತ್ತು. ಆದರೆ ಕಾರಣಾಂತಗಳಿಂದ ರಿಲೀಸ್ ಡೇಟ್ ಮುಂದಕ್ಕೆ ಹೋಗಿದೆ. ಆ ದಿನ ರಾಮ್ ಪೋತಿನೇನಿ ನಟನೆಯ 'ಡಬಲ್ ಇಸ್ಮಾರ್ಟ್' ಸಿನಿಮಾ ಈಗ ಆಗಸ್ಟ್ 15ಕ್ಕೆ ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ. ಹೀರೋ ರಾಮ್‌ಗೆ ಸಂಜಯ್ ದತ್ ವಿಲನ್ ಆಗಿ ಅಬ್ಬರಿಸಿದ್ದಾರೆ. ಈ ಚಿತ್ರವನ್ನು ಪುರಿ ಜಗನ್ನಾಥ್, ಚಾರ್ಮಿ ಕೌರ್ ನಿರ್ಮಾಣ ಮಾಡಿದ್ದಾರೆ.

# ಚಿರಂಜೀವಿ ಫ್ಯಾನ್ಸ್‌ಗೆ ಸಿಹಿಸುದ್ದಿ

ಮೆಗಾಸ್ಟಾರ್ ಚಿರಂಜೀವಿ 'ವಿಶ್ವಂಭರ' ಸಿನಿಮಾ ರಿಲೀಸ್‌ಗೂ ಮುನ್ನವೇ ಅಭಿಮಾನಿಗಳಿಗೆ ಸಿಹಿಸುದ್ದಿ ಸಿಕ್ಕಿದೆ. ವಿಶ್ವಂಭರ ಒಂದೇ ಸಿನಿಮಾ ಅಲ್ಲ, ಬೇರೆ ಬಿಗ್ ಪ್ರಾಜೆಕ್ಟ್‌ಗಳು ಚಿರಂಜೀವಿ ಕೈಯಲ್ಲಿವೆ ಎಂದು ರಾಮ್ ಚರಣ್ ರಿವೀಲ್ ಮಾಡಿದ್ದಾರೆ. ವಿಶ್ವ ಅಪ್ಪಂದಿರ (ಜೂನ್ 16) ಪ್ರಯುಕ್ತ ಚಿರಂಜೀವಿಗೆ ಪುತ್ರ ರಾಮ್ ಚರಣ್ ವಿಶೇಷ ಸಂದರ್ಶನವನ್ನು ಮಾಡಿದ್ದಾರೆ. ಚಿರಂಜೀವಿ 4 ಬಿಗ್ ಬಜೆಟ್ ಸಿನಿಮಾಗಳನ್ನು ಒಪ್ಪಿಕೊಂಡಿರುವುದಾಗಿ ರಾಮ್ ಚರಣ್ ಅನೌನ್ಸ್ ಮಾಡಿದ್ದಾರೆ. ಇದೀಗ ನಾನು ಎರಡು ಸಿನಿಮಾಗಳಲ್ಲಿ ನಟಿಸುತ್ತಿದ್ದೇನೆ. ಆದರೆ ತಂದೆ, 4 ಸಿನಿಮಾ ಚಿತ್ರಗಳನ್ನು ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಯಾರ ನಿರ್ದೇಶನ, ಟೈಟಲ್ ಏನು ಎಂಬುದರ ಬಗ್ಗೆ ರಾಮ್ ಚರಣ್ ರಿವೀಲ್ ಮಾಡಿಲ್ಲ. ಮುಂದಿನ ದಿನಗಳಲ್ಲಿ ಚಿತ್ರಗಳ ಬಗ್ಗೆ ಹೆಚ್ಚಿನ ಅಪ್‌ಡೇಟ್ ಸಿಗಲಿದೆ. ಸದ್ಯ ಚಿರಂಜೀವಿ 'ವಿಶ್ವಂಭರ' ಸಿನಿಮಾದ ಕೆಲಸ ನಡೆಯುತ್ತಿದೆ. ಈ ಚಿತ್ರದಲ್ಲಿ ಚಿರಂಜೀವಿ ಜೊತೆ ತ್ರಿಷಾ, ಕನ್ನಡದ ನಟಿ ಆಶಿಕಾ ರಂಗನಾಥ್ ನಟಿಸುತ್ತಿದ್ದಾರೆ.



# ಮದುವೆಯಾದರೆ ಖುಷಿಯಾಗಿರುತ್ತೇನೆ ಎಂಬ ಭರವಸೆಯಿಲ್ಲ



ಕನ್ನಡದ ಮೊನಲಿಸಾ' ನಟಿ ಸದಾ ಇದೀಗ ದಕ್ಷಿಣದ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ರಿಯಾಲಿಟಿ ಶೋವೊಂದರ ಜಡ್ಜ್ ಆಗಿಯೂ ಗಮನ ಸೆಳೆಯುತ್ತಿದ್ದಾರೆ. ನಟಿ ಸದಾಗೆ ಯಾವಾಗಲೂ ಎದುರಾಗುವ ಪ್ರಶ್ನೆ ಅಂದರೆ ಮದುವೆ ಮ್ಯಾಟರ್. ಹಾಗಾಗಿ ಮದುವೆ ಬಗ್ಗೆ ನಟಿ ಅಭಿಪ್ರಾಯ ಹಂಚಿಕೊಂಡಿದ್ದಾರೆ. ಮದುವೆಯಾಗದೇ ಸಿಂಗಲ್ ಆಗಿರಲು ಕಾರಣವೇನು ಎಂಬುದನ್ನು ರಿವೀಲ್ ಮಾಡಿದ್ದಾರೆ. ಚಿತ್ರರಂಗಕ್ಕೆ ನಾಯಕಿಯಾಗಿಯೇ ಪಾದಾರ್ಪಣೆ ಮಾಡಿದ್ದ ಸದಾ 39 ವರ್ಷವಾದ್ರೂ ಸಿಂಗಲ್ ಆಗಿಯೇ ಜೀವನ ನಡೆಸುತ್ತಿದ್ದಾರೆ. ಅವರ ಜೊತೆಯೇ ಚಿತ್ರರಂಕ್ಕೆ ಎಂಟ್ರಿ ಕೊಟ್ಟ ಸಹನಟಿಯರ ಲೈಫು ಸೆಟಲ್ ಆಗಿದೆ.

ಆದರೆ ತಾವ್ಯಾಕೆ ಮದುವೆಗೆ ಮನಸ್ಸು ಮಾಡುತ್ತಿಲ್ಲ ಎಂಬುದನ್ನು ಸಂದರ್ಶನವೊಂದರಲ್ಲಿ ಮಾತನಾಡಿದ್ದಾರೆ. ಮದುವೆಯಾದ್ರೆ ಖುಷಿಯಾಗಿರುತ್ತೇನೆ ಎಂಬ ಭರವಸೆ ಇಲ್ಲ ಎಂದಿದ್ದಾರೆ. ನಾನು ಮದುವೆಯ ವಿರೋಧಿಯಲ್ಲ. ಆದರೆ ನನಗೆ ಅರೇಂಜ್ ಮ್ಯಾರೇಜ್ ಇಷ್ಟವಿಲ್ಲ ಎಂದಿದ್ದಾರೆ. ಯಾರೋ ತಿಳಿಯದೇ ಇರುವ ವ್ಯಕ್ತಿಯ ಜೊತೆ ಇರುವುದು ನನಗೆ ಇಷ್ಟವಿಲ್ಲ ಎಂದಿದ್ದಾರೆ. ನನಗೆ ಲವ್ ಮ್ಯಾರೇಜ್ ಇಷ್ಟ. ನನ್ನ ಪೋಷಕರು ಪ್ರೀತಿಸಿ ಮದುವೆಯಾದವರು. ಅದಕ್ಕೆ ನನಗೆ ಪ್ರೇಮ ವಿವಾಹ ಇಷ್ಟ. ಆದರೆ ನಾನು ಒಬ್ಬಂಟಿಯಾಗಿರಲು ಕಾರಣ ಏನೆಂದರೆ, ನನಗೆ ಇದುವರೆಗೂ ಒಳ್ಳೆಯ ವ್ಯಕ್ತಿ ಸಿಕ್ಕಿಲ್ಲ ಎಂದಿದ್ದಾರೆ. ಈಗ ನಾನು ನನ್ನ ವೈಯಕ್ತಿಕ ಬದುಕು ಮತ್ತು ವೃತ್ತಿ ಜೀವನ ಎರಡರಲ್ಲೂ ಖುಷಿಯಾಗಿದ್ದೇನೆ. ಮದುವೆಯಾದರೆ ಈ ಸಂತೋಷ ನನಗೆ ಸಿಗುತ್ತದೆ ಎಂಬ ಭರವಸೆ ನನಗಿಲ್ಲ ಎಂದು ನಟಿ ಸದಾ ಮಾತನಾಡಿದ್ದಾರೆ.

# ಚೌಕಿದಾರ್ ಆದ ದಿಯಾ ಪೃಥ್ವಿ ಅಂಬಾರ್

**ಡೈರೆಕ್ಟರ್‌ಗೆ ಶ್ರೀಮುರಳಿ ಸಾಥ್**



'ದಿಯಾ' ಪೃಥ್ವಿ ಅಂಬಾರ್ ಮತ್ತು 'ರಥಾವರ' ಡೈರೆಕ್ಟರ್ ಚಂದ್ರಶೇಖರ್ ಬಂಡಿಯಪ್ಪ ಜೋಡಿಯ ಹೊಸ ಸಿನಿಮಾಗೆ ಮಾಸ್ ಟೈಟಲ್ ಫಿಕ್ಸ್ ಮಾಡಲಾಗಿದೆ. ಪೃಥ್ವಿ ಈಗ 'ಚೌಕಿದಾರ್' ಆಗಿದ್ದಾರೆ. ಕೆಂಪು ಬಣ್ಣದ ಅಕ್ಷರದ ಮೂಲಕ ಚಿತ್ರ ತಂಡ ಚೌಕಿದಾರ್ ರಿವೀಲ್ ಮಾಡಿದೆ.

ರೋರಿಂಗ್ ಸ್ಟಾರ್ ಶ್ರೀಮುರಳಿ ಇದೀಗ ಚಂದ್ರಶೇಖರ್ ಬಂಡಿಯಪ್ಪ ಅವರ 6ನೇ ಪ್ರಯತ್ನಕ್ಕೆ ಸಾಥ್ ಕೊಟ್ಟಿದ್ದು, ಚೌಕಿದಾರ್ ಟೈಟಲ್ ಬಿಡುಗಡೆ ಮಾಡಿ ಇಡೀ ತಂಡಕ್ಕೆ ಶುಭಾಶಯ ತಿಳಿಸಿದ್ದಾರೆ. 'ಚೌಕಿದಾರ್' ಬಹುಭಾಷೆಯಲ್ಲಿ ಮೂಡಿ ಬರ್ತಿದೆ. ಕನ್ನಡದ ಜೊತೆಗೆ ಹಲವು ಭಾಷೆಯಲ್ಲಿ ಚಿತ್ರ ತಯಾರಾಗುತ್ತಿದೆ.

'ಚೌಕಿದಾರ್' ಟೈಟಲ್ ಕೇಳಿದ ತಕ್ಷಣ ಇದು ಮಾಸ್ ಸಿನಿಮಾ ಎಂದುಕೊಳ್ಳಬೇಡಿ. ಇದು ಪಕ್ಕಾ ಫ್ಯಾಮಿಲಿ ಎಂಟರ್‌ಟೈನ್‌ಮೆಂಟ್ ಸಿನಿಮಾ. ಚಂದ್ರಶೇಖರ್ ಬಂಡಿಯಪ್ಪ ಪ್ರತಿ ಸಿನಿಮಾದಲ್ಲಿಯೂ ಹೊಸ ಕಥೆಯೊಂದಿಗೆ ಬರುತ್ತಾರೆ. ಆನೆ ಪಟಾಕಿಯಲ್ಲಿ ಕಾಮಿಡಿ, ರಥಾವರದಲ್ಲಿ ಕಲ್ಟ್, ತಾರಕಾಸುರದಲ್ಲೊಂದು ಬಗೆ, ರೆಡ್ ಕಾಲರ್‌ನಲ್ಲಿ ಕ್ರೈಮ್ ಥ್ರಿಲ್ಲರ್, ಕರಾವಳಿಯಲ್ಲಿ ಕರಾವಳಿ ಸೊಡಗನ್ನು ಕಟ್ಟಿಕೊಟ್ಟಿರುವ ಅವರು 'ಚೌಕಿದಾರ್' ಸಿನಿಮಾದಲ್ಲಿ ಯಾವ ರೀತಿ ಕಥೆಯನ್ನು ಕಟ್ಟಿಕೊಟ್ಟಿದ್ದಾರೆಂಬುದು ಕುತೂಹಲ ಪ್ರೇಕ್ಷಕರಲ್ಲಿದೆ. ಪ್ರತಿಭಾನ್ವಿತ ನಟ ಪೃಥ್ವಿ ಜೊತೆಗಿನ ಚಂದ್ರಶೇಖರ್ ಬಂಡಿಯಪ್ಪ ಸಿನಿಮಾವನ್ನು ವಿದ್ಯಾ ಶೇಖರ್ ಎಂಟರ್ಟೈನ್ಮೆಂಟ್ ಬ್ಯಾನರ್ ಅಡಿಯಲ್ಲಿ ಕಲ್ಲಹಳ್ಳಿ ಚಂದ್ರಶೇಖರ್ ನಿರ್ಮಾಣ ಮಾಡುತ್ತಿದ್ದಾರೆ. ಸಚಿನ್ ಬಸ್ರೂರ್ ಈ ಚಿತ್ರಕ್ಕೆ ಸಂಗೀತ ನಿರ್ದೇಶನ ಮಾಡುತ್ತಿದ್ದಾರೆ. ವಿ.ನಾಗೇಂದ್ರ ಪ್ರಸಾದ್, ಪ್ರಮೋದ್ ಮರವಂತೆ ಹಾಡುಗಳಿಗೆ ಸಾಹಿತ್ಯ ಬರೆಯುತ್ತಿದ್ದಾರೆ. ಈ ಚಿತ್ರದ ಉಳಿದ ತಾರಾಬಳಗ ಹಾಗೂ ತಾಂತ್ರಿಕ ಬಳಗವನ್ನು ಚಿತ್ರತಂಡದ ಒಂದೊಂದಾಗಿ ಮಾಹಿತಿ ನೀಡಲಿದೆ. 'ಆನೆ ಪಟಾಕಿ' ಮೂಲಕ ಸ್ಯಾಂಡಲ್‌ವುಡ್‌ಗೆ ಹೆಜ್ಜೆ ಇಟ್ಟಿದ್ದ ಚಂದ್ರಶೇಖರ್ ಬಂಡಿಯಪ್ಪ ಆ ಬಳಿಕ 'ರಥಾವರ' ಸಿನಿಮಾ ಮೂಲಕ ದೊಡ್ಡ ಹೆಸರು ಪಡೆದುಕೊಂಡರು. ಆ ಬಳಿಕ 'ತಾರಕಾಸುರ' ಸಿನಿಮಾ ಮಾಡಿ ಗೆದ್ದರು.



# ಕಾಸ್ಟಿಂಗ್ ಕೌಚ್ ಬಗ್ಗೆ ಕರಾಳ ಸತ್ಯ ಬಿಚ್ಚಿಟ್ಟ ನಟಿ ಲಕ್ಷ್ಮಿ ರೈ

ಕನ್ನಡದ ನಟಿ ಲಕ್ಷ್ಮಿ ರೈ ಸ್ಯಾಂಡಲ್‌ವುಡ್ ಸಿನಿಮಾಗಳಿಗಿಂತ ಪರಭಾಷೆ ಸಿನಿಮಾಗಳಲ್ಲಿ ಹೆಚ್ಚು ಜನಪ್ರಿಯತೆ ಗಳಿಸಿದ್ದಾರೆ. ಸದ್ಯ ಸಿನಿಮಾವೊಂದರ ಪ್ರಚಾರ ಕಾರ್ಯದಲ್ಲಿ ಅವರು ಬ್ಯುಸಿಯಾಗಿದ್ದಾರೆ. ಈ ವೇಳೆ, ಸಿನಿಮಾ ಅವಕಾಶಕ್ಕಾಗಿ ನಡೆಯುವ ಕ್ಯಾಸ್ಟಿಂಗ್ ಕೌಚ್ ಬಗ್ಗೆ ದರ್ಶನ್ ನಟನೆಯ 'ಸ್ನೇಹನಾ ಪ್ರೀತಿನಾ' ನಟಿ ಲಕ್ಷ್ಮಿ ರೈ ಮಾತನಾಡಿದ್ದಾರೆ. ಚಿತ್ರರಂಗದಲ್ಲಿ ಒಬ್ಬೊಬ್ಬರಿಗೆ ಇಲ್ಲಿ ಒಂದೊಂದು ರೀತಿ ಅನುಭವಗಳಾಗಿವೆ. ಪಾತ್ರಕ್ಕಾಗಿ ಪಲ್ಲಂಗವೇರುವಂತಹ ವಾತಾವರಣ ಇಲ್ಲವೇ ಇಲ್ಲ ಎಂದು ನಾನು ವಾದ ಮಾಡಲಾರೆ. ಆದರೆ ನನ್ನ ಈ ಎರಡು ದಶಕದ ವೃತ್ತಿ ಜೀವನದಲ್ಲಿ ನನಗೆ ಈ ಕಹಿ ಅನುಭವ ಯಾವತ್ತು ನಡೆದಿಲ್ಲ ಎಂದಿದ್ದಾರೆ ಲಕ್ಷ್ಮಿ ರೈ. ನನ್ನ ತಂದೆ ಸಮಾನರಾಗಿರುವ ಆರ್.ವಿ.ಉದಯಕುಮಾರ್ ಅವರಿಂದ ನನಗೆ ಮೊದಲ ಅವಕಾಶ ಸಿಕ್ಕಿತು. ಬೇರೆಯವರಿಗೆ ಹೋಲಿಸಿದರೆ ಚಿತ್ರರಂಗದಲ್ಲಿ ನಾನು ಅನುಭವಿಸಿದ ಕಷ್ಟ ಮತ್ತು ನೋವು ಬೇರೆ ರೀತಿ ಎಂದಿದ್ದಾರೆ. ಇಲ್ಲಿ ಯಾರೂ ನನ್ನ ಜೊತೆ ಬಂದು ಮಲಗು ಎಂದು ಬಲವಂತ ಮಾಡುವುದಿಲ್ಲ ಎಂದಿದ್ದಾರೆ. ಪರಸ್ಪರ ಒಪ್ಪಿಗೆಯ ಮೇರೆಗೆ ನಡೆಯುವಂತಹ ಕ್ರಿಯೆ ಅದು ಎಂದು ನಟಿ ಮಾತನಾಡಿದ್ದಾರೆ. ಕೇವಲ ಪ್ರಚಾರಕ್ಕೆ ಅಥವಾ ಟಿಆರ್‌ಪಿ ವಿಚಾರಕ್ಕೆ ಇಡೀ ಚಿತ್ರರಂಗವನ್ನ ದೂಷಿಸುವುದು ತಪ್ಪು ಎಂದಿದ್ದಾರೆ. ಹಣ, ಕೀರ್ತಿಯನ್ನ ಕೊಟ್ಟಿರುವ ಚಿತ್ರರಂಗಕ್ಕೆ ನಾವು ಯಾವತ್ತು ಆಭಾರಿಯಾಗಿರಬೇಕೆ ಹೊರತು ಚಿತ್ರರಂಗದ ಮರ್ಯಾದೆ ತೆಗೆಯುವ ಕೆಲಸ ಮಾಡಬಾರದು ಎಂದಿದ್ದಾರೆ. ಚಿತ್ರರಂಗದಲ್ಲಿ ಕೂಡ ಹಲವು ಒಳ್ಳೆಯ ಕೆಲಸಗಳಾಗುತ್ತವೆ ಆ ಕೆಲಸದ ಬಗ್ಗೆ ಮಾತನಾಡಬೇಕು. ಆ ಅನುಭವ ಹಂಚಿಕೊಳ್ಳದೇ ಕೇವಲ ಕೆಟ್ಟ ಆಲೋಚನೆ ಮಾಡುತ್ತಾ, ಕಹಿ ಅನುಭವವನ್ನೇ ಹಂಚಿಕೊಳ್ಳುವುದು ತಪ್ಪು ಎಂದು ಓಪನ್ ಆಗಿ ಲಕ್ಷ್ಮಿ ರೈ ಮಾತನಾಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966